ಸಂಪುಟ: 05 ಸಂಚಿಕೆ: 148 ಪುಟಗಳು: 08 ಭಾನುವಾರ 10 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
RNI No. KARKAN/2021/80833
ಸಂಪಾದಕರು: ಟಿ. ಹೊಂಬೇಗೌಡ 9448225696
+91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಮತ ಕಳವು ಪ್ರಕರಣ: ದೂರಿನ ದಾಖಲೆ ಸಲ್ಲಿಸಲು ಚುನಾವಣಾಧಿಕಾರಿ ಪತ್ರ

• ಉದಯವಾಹಿನಿ,ನವದೆಹಲಿ

ಮತ ಕಳವು ಪ್ರಕರಣ ಕುರಿತು ಆ.8ರಂದು ಸಲ್ಲಿಸಿದ ದೂರಿಗೆ ಪೂರಕವಾದ ದಾಖಲೆಗಳನ್ನು ಸಲ್ಲಿಸುವಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿಯು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರನ್ನು ಕೋರಿದ್ದಾರೆ.

ಈ ಕುರಿತು ಶಿವಕುಮಾರ್ ಅವರಿಗೆ ಪತ್ರ ಬರೆದಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್, ಚುನಾವಣಾ ಮತದಾರರ ಪಟ್ಟಿ, ಮತ ಕಳವು ಆರೋಪಗಳ ಕುರಿತು ಮುಖ್ಯ ಚುನಾವಣಾಧಿಕಾರಿ ಕಚೇರಿಗೆ ಅ. 5ರಂದು ಕೆಪಿಸಿಸಿ ಬರೆದ ಪತ್ರ, ಅ. 8ರಂದು ತಾವು ಸಲ್ಲಿಸಿದ ದೂರಿಗೆ ಪೂರಕವಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಮನವಿ ಮಾಡಿದ್ದಾರೆ. ದೂರಿನ ಮೇರೆಗೆ ಕ್ರಮ ಕೈಗೊಳ್ಳಲು, 1960ರ ಮತದಾರರ ನೋಂದಣಿ ನಿಯಮಗಳ ಪ್ರಕಾರ ಘೋಷಣೆ ಹಾಗೂ ಪ್ರತಿಜ್ಞಾ ಪತ್ರದೊಂದಿಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು ಎಂದು ಹೇಳಿದ್ದಾರೆ.

## ರಾಜ್ಯ ಶಿಕ್ಷಣ ನೀತಿ ಜಾರಿ ಮಾಡಿ ಪುರುಷೋತ್ತಮ ಬಿಳಿಮಲೆ ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಜ್ಯ ಶಿಕ್ಷಣ ನೀತಿಯನ್ನು ಜಾರಿ ಮಾಡಿ ದ್ವಿಭಾಷಾ ನೀತಿಯನ್ನು ಚಾಲ್ತಿಗೆ ತರಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಸಲಹೆ ನೀಡಿದರು. ರಾಜ್ಯ ಶಿಕ್ಷಣ ನೀತಿಯ ಅಂತಿಮ ವರದಿ ಇನ್ನೂ ನಮ್ಮ ಕೈಗೆ ಬಂದಿಲ್ಲ. ಅದನ್ನು ಓದುವುದಕ್ಕೂ ಮೊದಲೇ ತೆಗೆದು ಮೂಲೆಗೆ ಹಾಕಬೇಕು ಎಂದು ಮಾತನಾಡಿದರೆ ಅದರ ನಷ್ಟ ನಮಗೆ. ಸಾಮಾಜಿಕ ಜಾಲತಾಣಗಳಲ್ಲಿ ಗೊಂದಲ ಮೂಡಿಸಲಾಗುತ್ತಿದೆ ಹೀಗೆ ಮಾಡಿದರೆ ಸರ್ಕಾರ ಸುಲಭವಾಗಿ ತೆಗೆದು ಬಿಡುತ್ತದೆ. ಹಾಗೇನಾದರೂ ಆದರೆ ಇನ್ನೊಂದು ಶಿಕ್ಷಣ ನೀತಿ ರೂಪಿಸಲು ಕನಿಷ್ಠ 25 ವರ್ಷ ಬೇಕು ಎಂದು ತಿಳಿಸಿದರು. 'ಸದ್ಯ ನಮ್ಮ ಮುಂದೆ ರಾಷ್ಟ್ರೀಯ ಶಿಕ್ಷಣ ನೀತಿ ಹಾಗೂ ರಾಜ್ಯ ಶಿಕ್ಷಣ ನೀತಿಗಳಿವೆ. ಎರಡು ನೀತಿಗಳಿಂದಾಗಿ ಶಿಕ್ಷಕರು ಗೊಂದಲಕ್ಕೀಡಾಗಿದ್ದಾರೆ. ಗೊಂದಲ ಪರಿಹಾರವಾಗುವಂತೆ ಮಾಡಬೇಕು. ಕೇಂದ್ರ ಸರ್ಕಾರ 1968ರಿಂದ ಇಲ್ಲಿಯವರೆಗೂ ತ್ರಿಭಾಷಾ ಸೂತ್ರದ ವಿಶ್ಲೇಷಣೆಯನ್ನು ನೀಡಿಲ್ಲ. ಅದನ್ನು ಕೇಳುವುದು ನಮ್ಮ ಹಕ್ಕು. ತ್ರಿಭಾಷಾದಿಂದ ಯಾರಿಗೆ ಏನು ಲಾಭ ಆಗಿದೆ? ರಾಜ್ಯಕ್ಕೆ ಆದ ನಷ್ಟ, ಲಾಭಗಳ ಬಗ್ಗೆ ಪಟ್ಟಿಯನ್ನು ಕೊಡಬೇಕು. ಕನ್ನಡದವರು ತ್ರಿಭಾಷಾವನ್ನು ಅಳವಡಿಸಿಕೊಂಡು ಬಂದಿದೆ.

## ಬಿಜೆಪಿಯವರಿಗೆ ಕೆಲಸಕ್ಕಿಂತ ಪ್ರಚಾರದ ಹುಚ್ಚು ಜಾಸ್ತಿ

• ಉದಯವಾಹಿನಿ, ಬೆಂಗಳೂರು

'ನಮ್ಮ ಮೆಟ್ರೊ ಆರಂಭವಾಗಿದ್ದು ಯಾವಾಗ ಎಂಬ ಇತಿಹಾಸವೇ ಬಿಜೆಪಿಯವರಿಗೆ ಗೊತ್ತಿಲ್ಲ. ನಮ್ಮ ಮೆಟ್ರೊ ಜನರ ಸಂಸ್ಥೆಯೇ ಹೊರತು, ಯಾವುದೇ ಪಕ್ಷದ ಸ್ವತ್ತಲ್ಲ. ಆದರೆ, ಬಿಜೆಪಿಯವರಿಗೆ ಕೆಲಸಕ್ಕಿಂತ ಪ್ರಚಾರದ ಹುಚ್ಚು ಜಾಸ್ತಿ' ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಟೀಕಿಸಿದರು. 'ನಮ್ಮ ಮೆಟ್ರೊ ಯೋಜನೆಯಲ್ಲಿ ರಾಜ್ಯ ಸರ್ಕಾರದ ದೊಡ್ಡ ಪಾಲಿದೆ. ಈ ಯೋಜನೆಯ ಹಂತ 1ರಲ್ಲಿ ಕರ್ನಾಟಕ ಸರ್ಕಾರ ಶೇ. 30 (ಜಮೀನೂ ಸೇರಿ), ಕೇಂದ್ರ ಶೇ 25, ಉಳಿದ ಶೇ 45ರಷ್ಟನ್ನು ಸಾಲದ ರೂಪದಲ್ಲಿ ಮೆಟ್ರೊ ಸಂಸ್ಥೆ ಪಡೆದಿದೆ. ಹಂತ 2ರಲ್ಲಿ ಕರ್ನಾಟಕ ಶೇ 30 ಮತ್ತು ಜಮೀನು ಜೊತೆಗೆ, ಇತರ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸಿದೆ. ಇಲ್ಲಿ ಕೇಂದ್ರದ ಪಾಲು ಕೇವಲ ಶೇ 20. ಉಳಿದ ಶೇ 50ರಷ್ಟು ಮೊತ್ತವನ್ನು ಮೆಟ್ರೊ ಸಂಸ್ಥೆ ಸಾಲ ಪಡೆದಿದೆ' ಎಂದರು.

## ಒಳ ಮೀಸಲು ಗೊಂದಲ ಬಗೆಹರಿಸಿಕೊಳ್ಳುತ್ತೇವೆ: ಸಚಿವ

• ಉದಯವಾಹಿನಿ, ಬೆಂಗಳೂರು

'ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲು ಕಲ್ಪಿಸಲು ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ಆಯೋಗ ನೀಡಿರುವ ವರದಿಯು ಅನುಷ್ಠಾನಗೊಳ್ಳುವುದು ಶೇ 100ರಷ್ಟು ಖಚಿತ. ಈ ಬಗ್ಗೆ ಯಾವುದೇ ಅನುಮಾನ ಇಲ್ಲ' ಎಂದು ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಹೇಳಿದರು. 'ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿ ಎಲ್ಲರಿಗೂ ಆಯೋಗದ ವರದಿಯನ್ನು ನೀಡಿದ್ದಾರೆ. ಅದನ್ನು ಅಧ್ಯಯನ ಮಾಡಿ ಇದೇ 16ರಂದು ನಡೆಯಲಿರುವ ವಿಶೇಷ ಸಂಪುಟ ಸಭೆಗೆ ಹೋಗುತ್ತೇವೆ. ಏನೇ ಗೊಂದಲಗಳಿದ್ದರೂ ಕುಳಿತು ಬಗೆಹರಿಸಿಕೊಳ್ಳುತ್ತೇವೆ. ಒಟ್ಟಾಗಿ ತೀರ್ಮಾನ ಮಾಡುತ್ತೇವೆ' ಎಂದರು. 'ಸಚಿವರಾದ ಜಿ. ಪರಮೇಶ್ವರ, ಎಚ್.ಸಿ. ಮಹದೇವಪ್ಪ, ಶಿವರಾಜ ತಂಗಡಗಿ, ಹಲವು ಶಾಸಕರು ತಮ್ಮ ಅಭಿಪ್ರಾಯ ನೀಡಿದ್ದಾರೆ.

ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಎಲ್ಲಾ 101 ಮೂಲ ಜಾತಿಗಳಿಗೂ ಮೀಸಲಾತಿ ಹಂಚಿಕೆ ಆಗಬೇಕು ಎನ್ನುವುದು ನಮ್ಮ ಮೂಲ ಉದ್ದೇಶ' ಎಂದರು. 'ಜಾತಿ ಪಟ್ಟಿಯಲ್ಲಿರುವ ಯಾರನ್ನೂ ಕೈಬಿಡುವಂತೆ ಇಲ್ಲ. ಸುಪ್ರೀಂ ಕೋರ್ಟ್ ತೀರ್ಪಿನಂತೆ ಹಿಂದುಳಿದಿರುವಿಕೆಯ ಆಧಾರದಲ್ಲಿ ಮೀಸಲಾತಿ ಆಗಬೇಕು ಎಂದರು.

# ನೀರೋ ನೀರು ಭಯದಲ್ಲಿ ಜನರು...!

## ರಾಜ್ಯದಲ್ಲಿ ಮುಂದುವರೆದ ಮಳೆಯ ಅಬ್ಬರ ಹಲವು ಜಿಲ್ಲೆಗಳಲ್ಲಿ ನಾನಾ ಅವಾಂತರ

ರಾಜ್ಯದ ಹಲವೆಡೆ ಮಳೆಯ ಅಬ್ಬರ ಮುಂದುವರೆದಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಹಾಸನ, ಬಾಗಲಕೋಟೆ, ಕೊಪ್ಪಳ, ಗದಗ ಮುಂತಾದೆಡೆ ಮಳೆಯ ಅಬ್ಬರ ಜೋರಾಗಿದೆ. ಭಾರೀ ಮಳೆಯ ಅಬ್ಬರಕ್ಕೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಹಳ್ಳಕೊಳ್ಳಗಳು ಭರ್ತಿಯಾಗಿ ಹರಿಯುತ್ತಿದ್ದು , ಹಲವೆಡೆ ಅವಾಂತರಗಳು ಸೃಷ್ಟಿಯಾಗಿವೆ. ಮಳೆಯಿಂದ ಎಚ್.ಡಿ.ಕೋಟೆ ತಾಲ್ಲೂಕಿನ ರಸ್ತೆಗಳು ಕೆಸರುಗದ್ದೆಯಂತಾಗಿವೆ. ತಾಲ್ಲೂಕು ಕೇಂದ್ರದ ಹೌಸಿಂಗ್ ಬೋರ್ಡ್, ಕೆಂಪಾಲಮ ಬಡಾವಣೆ, ರಂಗಯ್ಯ ಅಯ್ಯಂಗಾರ್ ಬಡಾವಣೆ, ಬೆಳಗನಹಳ್ಳಿ ರಸ್ತೆ, ಸ್ಟೇಡಿಯಂ ಬಡಾವಣೆ, ಹನುಮಂತನಗರ ರಸ್ತೆಗಳಲ್ಲಿ ನೀರು ನಿಂತು ಸಮಸ್ಯೆ ಉಂಟಾಗಿದೆ.

• ಉದಯವಾಹಿನಿ, ಬೆಂಗಳೂರು

ವಿದ್ಯಾರ್ಥಿಗಳು, ಮಹಿಳೆಯರು, ಮಕ್ಕಳು, ವೃದ್ಧರು ರಸ್ತೆಗಳಲ್ಲಿ ಓಡಾಡಲು ಪರದಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸಮಸ್ಯೆ ಪರಿಹರಿಸುವಂತೆ ಹಲವು ಬಾರಿ ಮನವಿ ಮಾಡಿದರೂ ತಾಲ್ಲೂಕು ಆಡಳಿತ ಮಂಡಳಿ ಸ್ಪಂದಿಸಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.


1 ರಾಜ್ಯದ ಹಲವೆಡೆ ಮಳೆ ಅಬ್ಬರ ಮುಂದುವರೆದಿದ್ದು , ವಿವಿಧ ಜಿಲ್ಲೆಗಳಲ್ಲಿ ಧಾರಾಕಾರ ವರ್ಷಧಾರೆ

2 ಭಾರಿ ಮಳೆ ಅಬ್ಬರ, ಜನಜೀವನ ಅಸ್ತವಸ್ಥ..!

3 ಸವದತ್ತಿಯಲ್ಲಿ ಮಳೆ ಅಬ್ಬರ, ಭಾರಿ ಮಳೆಗೆ ಯಲ್ಲಮ್ಮನ ಗುಡ್ಡಕ್ಕೆ ನುಗ್ಗಿದ ಹಳ್ಳದ ನೀರು

ಕೋಲಾರ ಜಿಲ್ಲೆಯಲ್ಲಿ ರಾತ್ರಿ ಸುರಿದ ಭಾರೀ ಮಳೆಗೆ ಹಲವು ಅವಾಂತರಗಳು ಸೃಷ್ಟಿಯಾಗಿ ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಹಲವೆಡೆ ರಸ್ತೆಗಳಿಗೆ ನೀರು ನುಗ್ಗಿ ಸಾರಿಗೆ ಸಂಪರ್ಕ ಕಡಿತಗೊಂಡಿದೆ. ಗಂಗಮನ ಪಾಳ್ಯದ ಹಲವು ಮನೆಗಳಿಗೆ ನೀರು ನುಗ್ಗಿದೆ. ಅಂತರಗಂಗೆ ದರ್ಗಾದ ಬಳಿ ಬೃಹತ್ ಮರ ನೆಲಕ್ಕುರುಳಿದೆ.

ಬೆಳಗಾವಿ ಜಿಲ್ಲೆಯ ಸವದತ್ತಿಯಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ಗುಡ್ಡದ ಮೇಲಿನಿಂದ ಅಪಾರ ಪ್ರಮಾಣದಲ್ಲಿ ನೀರು ಹರಿದುಬರುತ್ತಿದ್ದು, ಗುಡ್ಡದ ಹೊರವಲಯದಲ್ಲಿ ರಸ್ತೆಗಳು ಜಲಾವೃತಗೊಂಡಿವೆ. ಹಳ್ಳಗಳು ತುಂಬಿ ಹರಿಯುತ್ತಿವೆ. ಯಲ್ಲಮಗುಡ್ಡಕ್ಕೆ ಸಂಪರ್ಕಿಸುವ ರಸ್ತೆ ಸಂಚಾರ ಮುಳುಗಡೆಯಾಗಿ ಸ್ಥಗಿತಗೊಂಡಿದೆ. ಉಗುರಗೋಳದಿಂದ ಯಲ್ಲಮ ಗುಡ್ಡಕ್ಕೆ ಸಂಪರ್ಕ ರಸ್ತೆ ಕಡಿತಗೊಂಡಿದೆ. ಇದಕ್ಕೆ ಪರ್ಯಾಯವಾಗಿ ಸವದತ್ತಿ ನಗರದಿಂದ ಗುಡ್ಡಕ್ಕೆ ಹೋಗಬಹುದಾಗಿದೆ. ಇಂದಿನಿಂದ ನೂಲಹುಣ್ಣಿಮೆ ಜಾತ್ರೆ ನಡೆಯಲಿದ್ದು ಯಲ್ಲಮನ ದೇವಸ್ಥಾನದ ಗುಡ್ಡಕ್ಕೆ ಮಹಾರಾಷ್ಟ್ರ, ಗೋವಾ, ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಿಂದ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದು, ರಸ್ತೆ ಸಂಚಾರ ಸ್ಥಗಿತವಾದ ಹಿನ್ನೆಲೆಯಲ್ಲಿ ದೇವಾಲಯಕ್ಕೆ ಹೋಗಲು ಭಕ್ತರು ಪರದಾಡುವಂತಾಗಿದೆ.







### ಭಯಂಕರ ಪ್ರವಾಹ, ಸವದತ್ತಿ ಯಲ್ಲಮ್ಮ ದೇವಸ್ಥಾನಕ್ಕೆ ಜಲದಿಗ್ಬಂಧನ

**ಎಲ್ಲಿ ನೋಡಿದ್ರೂ ನೀರು**

ದೇವಾಲಯದ ಕೌಂಟರ್ ಒಳಗೂ ನೀರು ನುಗ್ಗಿದ್ದು, ಭಕ್ತರ ನಿರ್ವಹಣೆಗೆ ತೀವ್ರ ಅಡಚಣೆಯಾಗಿದೆ. ದೇವಿ ದರ್ಶನಕ್ಕೆ ಬಂದ ಭಕ್ತರು ಅತಿಯಾದ ತೊಂದರೆ ಅನುಭವಿಸುತ್ತಿದ್ದಾರೆ. ಉಗರಗೋಳ ಮಾರ್ಗ ಸಂಪೂರ್ಣವಾಗಿ ಬಂದ್ ಆಗಿರುವುದರಿಂದ ನೂರಾರು ವಾಹನಗಳು ಹಳ್ಳದ ದಡದ ಕಡೆಗಳಲ್ಲೂ ಸಾಲುಗಟ್ಟಿ ನಿಂತಿವೆ. ಭಾರೀ ಮಳೆಯಿಂದ ಹಳ್ಳ ಉಕ್ಕಿ ಹರಿದು, ರಸ್ತೆ ಸಂಪೂರ್ಣವಾಗಿ ಮುಚ್ಚಲಾಗಿದೆ. ಎಣ್ಣೆಹೊಂಡ ಪ್ರದೇಶದಲ್ಲಿ ಓರ್ವ ವ್ಯಕ್ತಿ ನೀರಿನಲ್ಲಿ ಸಿಲುಕಿದ್ದು, ಸ್ಥಳೀಯರು ಹರಸಾಹಸ ಪಟ್ಟು ರಕ್ಷಿಸಿದ್ದಾರೆ.ಇನ್ನೊಂದೆಡೆ, ಉಗರಗೋಳ ಗ್ರಾಮವೂ ಮಳೆಯ ರಭಸಕ್ಕೆ ಸಂಪೂರ್ಣ ಮುಳುಗಡೆಯಾಗಿದ್ದು, ಕನಿಷ್ಠ ಐದು ಬೈಕುಗಳು ಪ್ರವಾಹಕ್ಕೆ ಕೊಚ್ಚಿ ಹೋಗಿವೆ. ಒಂದು ಬೈಕ್ ಅನ್ನ ಸ್ಥಳೀಯರು ರಕ್ಷಿಸಿದ್ದಾರೆ. ಸಾವಧಾನ ವಹಿಸಲು ಸ್ಥಳೀಯ ಆಡಳಿತ ಹಾಗೂ ಪೊಲೀಸರು ಕಠಿಣ ಕ್ರಮ ಕೈಗೊಂಡಿದ್ದಾರೆ. ಭಕ್ತರಿಗೆ ಪರ್ಯಾಯ ಮಾರ್ಗಗಳ ಮೂಲಕ ಸಂಚಾರಕ್ಕೆ ಸೂಚನೆ ನೀಡಲಾಗುತ್ತಿದೆ.





### ಬೆಳಗಾವಿ ಜಿಲ್ಲೆಯಾದ್ಯಂತ ಧಾರಾಕಾರ ಮಳೆ

ಜಿಲ್ಲೆಯಾದ್ಯಂತ ಸುರಿದ ಧಾರಾಕಾರ ಮಳೆಗೆ ಸಾಕಷ್ಟು ಅವಾಂತರಗಳು ಸೃಷ್ಟಿಯಾಗಿದ್ದು, ಜಲಾವೃತಗೊಂಡ ರಸ್ತೆ ದಾಟಲು ಆಗದೇ ಯಲ್ಲಮ್ಮನ ಗುಡ್ಡದ ಭಕ್ತರು ಪರದಾಡಿದ್ದಾರೆ. ಮತ್ತೊಂದೆಡೆ ನಿರಂತರ ಮಳೆಗೆ ಯಲ್ಲಮ್ಮನ ಗುಡ್ಡದ ಪ್ರದೇಶದಲ್ಲಿ ಸಹ್ಯಾದ್ರಿ, ಕೊಡಚಾದ್ರಿ ಸೃಷ್ಟಿಯಾಗಿದ್ದು ಪ್ರವಾಸಿಗರನ್ನ ಕೈಬೀಸಿ ಕರೆಯುತ್ತಿದೆ. ಸುಡುಬಿಸಿಲಿನ ಬೇಗೆಗೆ ಬೆಂದಿದ್ದ ಸವದತ್ತಿ ಜನರಿಗೆ ಮಳೆರಾಯನ ತಂಪೆರಿದಿದ್ದಷ್ಟೇ ಅಲ್ಲಾ, ಸಾಕಷ್ಟು ಅವಾಂತರಗಳನ್ನೇ ಸೃಷ್ಟಿಸಿದ್ದಾನೆ. ರಭಸವಾಗಿ ಸುರಿದ ಧಾರಾಕಾರ ಮಳೆಗೆ ಯಲ್ಲಮ್ಮನ ಗುಡ್ಡಕ್ಕೆ ಸಂಪರ್ಕಿಸುವ ರಸ್ತೆಗಳು ಹಳ್ಳಗಳಿಂದ ಜಲಾವೃತಗೊಂಡು ಸಂಪೂರ್ಣ ಬಂದ್ ಆಗಿದೆ. ಇದರಿಂದಾಗಿ ದೇವಸ್ಥಾನಕ್ಕೆ ಬರೋ ಭಕ್ತರು ದೇವಿಯ ದರ್ಶನವಿಲ್ಲದೇ ಪರದಾಡಿದ್ದಾರೆ. ನೂಲಹುಣ್ಣಿಮೆ ಹಿನ್ನೆಲೆ ರೇಣುಕಾ ಯಲ್ಲಮ್ಮನ ದೇವಸ್ಥಾನದಲ್ಲಿ ಜಾತ್ರೆ ಪ್ರಾರಂಭವಾಗುತ್ತದೆ. ಹಾಗಾಗಿ ಯಲ್ಲಮ್ಮನ ಗುಡ್ಡಕ್ಕೆ ಮಹಾರಾಷ್ಟ್ರ, ಗೋವಾ, ವಿಜಯಪುರ, ಬಾಗಲಕೋಟೆ, ಗದಗ, ಧಾರವಾಡ, ಹುಬ್ಬಳ್ಳಿ ಸೇರಿದಂತೆ ಕರ್ನಾಟಕದ ಮೂಲೆಮೂಲೆಗಳಿಂದ ಭಕ್ತರು ದೇವಿಯ ದರ್ಶನಕ್ಕೆ ಆಗಮಿಸುತ್ತಾರೆ.

### ಚಿತ್ರದುರ್ಗದಲ್ಲಿ ಧಾರಾಕಾರ ಮಳೆ

ಜಿಲ್ಲೆಯ ವಿವಿಧೆಡೆ ಧಾರಾಕಾರ ಮಳೆ ಸುರಿದ ಪರಿಣಾಮ ಚಳ್ಳಕೆರೆ ತಾಲ್ಲೂಕಿನ ವಿವಿಧೆಡೆ ಜಮೀನುಗಳು ಜಲಾವೃತಗೊಂಡಿವೆ. ಭಾರೀ ಮಳೆಗೆ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲ್ಲೂಕಿನ ಗೋಪನಹಳ್ಳಿಯ ರೈತ ಮಧು ಎಂಬವರ ಜಮೀನು ಜಲಾವೃತಗೊಂಡಿದೆ. ಅಡಿಕೆ, ತೆಂಗು, ಮೆಕ್ಕೆಜೋಳ, ತರಕಾರಿ ಬೆಳೆಗಳು ಜಲಾವೃತಗೊಂಡಿದ್ದು, ನಾಲ್ಕು ಎಕರೆಗೂ ಹೆಚ್ಚು ಜಮೀನು ಜಲಮಯವಾಗಿದೆ. ಇನ್ನು ಚಳ್ಳಕೆರೆ ತಾಲ್ಲೂಕಿನ ಹುಲಿಕುಂಟೆ ಗ್ರಾಮದ ರೈತ ದಯಾನಂದ ಎಂಬವರಿಗೆ ಸೇರಿದ ಐದು ಎಕರೆ ಮೆಕ್ಕೆಜೋಳ ಜಮೀನು ಕೂಡ ಜಲಾವೃತವಾಗಿದೆ. ಕೈಗೆ ಬಂದಿದ್ದ ಬೆಳೆ ಮಳೆರಾಯನ ಅವಕೃಪೆಯಿಂದ ಹಾನಿಯಾಗಿದೆ. ಅತಿವೃಷ್ಟಿಯಿಂದ ಚಳ್ಳಕೆರೆ ಭಾಗದ ರೈತರಿಗೆ ಸಂಕಷ್ಟ ಎದುರಾಗಿದೆ.

**ಭಾರಿ ಮಳೆ ಮುನ್ಸೂಚನೆ:** ರಾಜ್ಯದಲ್ಲಿ ಮಳೆ ಮುಂದುವರೆದಿದ್ದು, ಇಂದಿನಿಂದ ಮತ್ತೆ ಐದು ದಿನಗಳ ಕಾಲ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್: ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ದಾವಣಗೆರೆ, ಚಿತ್ರದುರ್ಗ, ತುಮಕೂರು, ಬಾಗಲಕೋಟೆ, ಕೊಪ್ಪಳ, ಗದಗ, ವಿಜಯಪುರ, ರಾಯಚೂರು ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಜೋರು ಮಳೆಯಾಗಲಿದೆ. ಹಾಗಾಗಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಇನ್ನು ಬೀದರ್, ಬೆಳಗಾವಿ, ಧಾರವಾಡ, ಹಾವೇರಿ, ಯಾದಗಿರಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆ ಸಾಧ್ಯತೆಯಿದೆ. ಅದೇ ರೀತಿ ರಾಜಧಾನಿ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣವಿದ್ದು, ಮಳೆ ಬರುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ 25 ಡಿಗ್ರಿ ಸೆಲ್ಸಿಯಸ್ ಇರಲಿದ್ದು, ಕನಿಷ್ಠ ತಾಪಮಾನ 20 ಡಿಗ್ರಿ ಸೆಲ್ಸಿಯಸ್ ದಾಖಲಾಗಲಿದೆ.

# ಕಮಲ ಪಡೆ ಒಗ್ಗಟ್ಟಿನ ಹೋರಾಟ ನಡೆಸುತ್ತಾ?

• ಉದಯವಾಹಿನಿ, ಬೆಂಗಳೂರು

ಸೋಮವಾರದಿಂದ ವಿಧಾನಮಂಡಲ ಅಧಿವೇಶನ ಆರಂಭಗೊಳ್ಳಲಿದೆ. ಆದರೆ ವಿಧಾನಸಭೆಯಲ್ಲಿ ಆಡಳಿತ ಪಕ್ಷವನ್ನು ಕಟ್ಟಿಹಾಕಲು ಬಿಜೆಪಿ ಬಳಿ ಹಲವು ಅಸ್ತ್ರಗಳು ಇವೆ. ಆದರೆ, ಬಿಜೆಪಿಗೆ ಭಿನ್ನಮತವೇ ಬಹುದೊಡ್ಡ ತಲೆನೋವಾಗಿದೆ. ಈ ಭಿನ್ನಮತವನ್ನು ಕಮಲ ಪಡೆ ಹೇಗೆ ನಿಭಾಯಿಸಲಿದೆ ಎಂಬುವುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಕಳೆದ ವಿಧಾನಸಭೆ ಅಧಿವೇಶನದಲ್ಲೂ ಬಿಜೆಪಿಗೆ ಆಡಳಿತ ಪಕ್ಷದ ವಿರುದ್ಧ ಧ್ವನಿ ಎತ್ತಲು ಪ್ರಮುಖ ವಿಚಾರಗಳು ಇದ್ದವು. ಆದರೆ, ಅದನ್ನು ಸರಿಯಾದ ರೀತಿಯಲ್ಲಿ ಕಮಲ ಪಡೆ ಬಳಕೆ ಮಾಡಿಕೊಂಡಿರಲಿಲ್ಲ. ವಿಪಕ್ಷ ನಾಯಕ ಆರ್ ಅಶೋಕ್ ಒಂದು ಕಡೆಯಾದರೆ, ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರನ್ನು ಮತ್ತೊಂದು ನಡೆ ಎಂಬಂತಿತ್ತು. ಅಷ್ಟೇ ಅಲ್ಲ, ಬಿಜೆಪಿಯಲ್ಲಿನ ರೆಬೆಲ್ ತಂಡ ಕೂಡಾ ಸೂಕ್ತ ರೀತಿಯಲ್ಲಿ ಸಹಕಾರ ನೀಡುತ್ತಿರಲಿಲ್ಲ. ಶಾಸಕ ಯತ್ನಾಳ್ ಅವರಂತೂ ಪದೇ ಪದೇ ಬಿಜೆಪಿ ರಾಜ್ಯಾಧ್ಯಕ್ಷರಿಗೆ ಟಾಂಗ್ ಕೊಡುತ್ತಲೇ ಇದ್ದರು.



**ಸದನದಲ್ಲಿ ಬಿಜೆಪಿಗೆ ಭಿನ್ನಮತವೇ ಸವಾಲು!**

ಇದರಿಂದ ಒಂದು ರೀತಿಯಲ್ಲಿ ಮುಜುಗರ ಅನುಭವಿಸುವ ವಾತಾವರಣ ಸದನದಲ್ಲಿತ್ತು.

**ಈ ಬಾರಿ ಏನು?:** ಬಿಜೆಪಿ ವಿರೋಧ ಪಕ್ಷವಾಗಿ ಧ್ವನಿ ಎತ್ತಲು ಈ ಬಾರಿಯೂ ಹಲವು ಅಸ್ತ್ರಗಳು ಈಗಾಗಲೇ ಇವೆ. ಅದರಲ್ಲಿ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣ ಪ್ರಮುಖವಾಗಿದೆ. ಸರ್ಕಾರದ ವಿರುದ್ಧ ಇದನ್ನು ಪ್ರಯೋಗ ಮಾಡಲು ಬಿಜೆಪಿ ಮುಂದಾಗಿದೆ. ಆದರೆ ಇದಕ್ಕೆ ಶಾಸಕರ ಬೆಂಬಲ ಎಷ್ಟರ ಮಟ್ಟಿಗೆ ಸಿಗಲಿದೆ ಎಂಬುವುದೇ ಕುತೂಹಲ. ಇನ್ನು ಬಿಜೆಪಿ ಶಾಸಕರಾಗಿದ್ದ ಯತ್ನಾಳ್ ಇದೀಗ ಉಚ್ಚಾಟನೆ ಗೊಂಡಿದ್ದಾರೆ. ಅವರು ಉಚ್ಚಾಟನೆಗೊಂಡ ಬಳಿಕ ಇದೇ ಮೊದಲ ಬಾರಿ ಸದನಕ್ಕೆ ಆಗಮಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಸದನದಲ್ಲಿ ಅವರು ಯಾವ ರೀತಿಯಲ್ಲಿ ಬಿಜೆಪಿ ನಾಯಕತ್ವಕ್ಕೆ ಟಾಂಗ್ ನೀಡುತ್ತಾರೆ? ಇದು ಯಾವ ರೀತಿಯಲ್ಲಿ ಪರಿಣಾಮ ಬೀರಲಿದೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

**ಯಶಸ್ವಿಯಾಗುತ್ತಾ ನಾಯಕತ್ವ?;** ಈ ಕುತೂಹಲವೂ ಸದ್ಯಕ್ಕೆ ಕಾಡುತ್ತಿದೆ. ಬಿಜೆಪಿ ಶಾಸಕರಲ್ಲಿ ನಾಯಕತ್ವದ ಬಗ್ಗೆ ಅಸಮಾಧಾನ ಇದೆ. ಇನ್ನು ಬಿಜೆಪಿಯ ಆಂತರಿಕ ಕಿತ್ತಾಟದಿಂದಾಗಿ ಶಾಸಕರು ಅಸಮಾಧಾನಗೊಂಡಿದ್ದಾರೆ. ಹೀಗಿರುವಾಗ ಸದನದಲ್ಲಿ ಯಾವ ರೀತಿಯಲ್ಲಿ ಸಾಥ್ ಕೊಡುತ್ತಾರೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

### ಸಭೆ ಎಫೆಕ್ಟ್ ಆಗುತ್ತಾ?

ಅಧಿವೇಶನದ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಈಗಾಗಲೇ ಒಂದು ಸುತ್ತಿನ ಸಭೆಯನ್ನು ನಡೆಸಿದ್ದಾರೆ. ಆರ್ ಅಶೋಕ್, ವಿಜಯೇಂದ್ರ, ಅಶ್ವತ್ಥ ನಾರಾಯಣ ಸೇರಿದಂತೆ ಪ್ರಮುಖ ನಾಯಕರು ಸಭೆಯಲ್ಲಿ ಇದ್ದರು. ಅಧಿವೇಶನದಲ್ಲಿ ಯಾವ ವಿಚಾರಗಳನ್ನು ಮುಂದಿಟ್ಟುಕೊಂಡು ಹೋರಾಟ ಮಾಡಬೇಕು ಎಂಬ ಬಗ್ಗೆ ಚರ್ಚೆ ಅಗಿದೆ. ಆದರೆ ಸದನದಲ್ಲಿ ಇದು ಎಷ್ಟರ ಮಟ್ಟಿಗೆ ಜಾರಿಗೊಳ್ಳಲಿದೆ ಎಂಬುವುದೇ ಕುತೂಹಲಕ್ಕೆ ಕಾರಣವಾಗಿದೆ.

# ಕಾಂಗ್ರೇಸ್‌ಗೆ ಸಿಕ್ಕಿದೆ ಕೆ.ಸುಧಾಕರ್ ವಿರುದ್ಧ ಬ್ರಹ್ಮಾಸ್ತ್ರ!

■ ಚಿಕ್ಕಬಳ್ಳಾಪುರದ ಜಿಲ್ಲಾ ಪಂಚಾಯಿತಿ ಸಿಇಒ ಅವರ ಕಾರು ಚಾಲಕ ಬಾಬು ಆತ್ಮಹತ್ಯೆ ■ ಸಂಸದರ ನೆರವಿಗೆ ಬರ್ತಾರಾ ಬಿಜೆಪಿ ನಾಯಕರು

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಸಂಸದ ಡಾ. ಕೆ ಸುಧಾಕರ್ ವಿರುದ್ಧ ಇದೀಗ ಗಂಭೀರ ಸ್ವರೂಪದ ಆರೋಪ ಕೇಳಿಬಂದಿದೆ. ಅದು ಚಿಕ್ಕಬಳ್ಳಾಪುರದ ಜಿಲ್ಲಾ ಪಂಚಾಯಿತಿ ಸಿಇಒ ಕಾರು ಚಾಲಕ ಬಾಬು ಆತ್ಮಹತ್ಯೆ ಪ್ರಕರಣ ಇದೀಗ ರಾಜಕೀಯ ಜಟಾಪಟಿಗೆ ಕಾರಣವಾಗಿದೆ. ಸಂಸದ ಡಾ.ಕೆ. ಸುಧಾಕರ್ ಹೆಸರು ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿದ್ದಾರೆ ಎಂದು ಹೇಳಲಾಗಿದ್ದು, ಕಾಂಗ್ರೆಸ್‌ಗೆ ಇದೊಂದು ಬಹುದೊಡ್ಡ ಅಸ್ತ್ರವಾಗಿ ಸಿಕ್ಕಿದೆ. ಈ ನಡುವೆ ಕಾಂಗ್ರೆಸ್ ನಾಯಕರು ಸುಧಾಕರ್ ವಿರುದ್ಧ ಹರಿಹಾಯುತ್ತಿದ್ದು, ಬಿಜೆಪಿ ನಾಯಕರು ನೆರವಿಗೆ ಬರ್ತಾರಾ ಎಂಬ ಕುತೂಹಲವೂ ಕೆರಳಿಸಿದೆ.

**ಏನಿದು ಆರೋಪ:** ಚಿಕ್ಕಬಳ್ಳಾಪುರದ ನಗರದ ಬಾಪೂಜಿನಗರದ ನಿವಾಸಿ 32 ವರ್ಷದ ಬಾಬು ಆತ್ಮಹತ್ಯೆ ಪ್ರಕರಣ ಇದೀಗ ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಡೆತ್‌ನೋಟ್‌ನಲ್ಲಿ ಸಂಸದ ಡಾ.ಕೆ ಸುಧಾಕರ್ ಅವರ ಹೆಸರು ಬರೆದಿಟ್ಟು ಬಾಬು ಆತ್ಮಹತ್ಯೆಗೆ ಶರಣಾಗಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯಿತಿ ಸಭಾಂಗಣದ ಹಿಂಭಾಗದಲ್ಲಿಯೇ ಅವರು ಸಾವಿಗೆ ಶರಣಾಗಿದ್ದಾರೆ. ಬಾಬು ಜಿಲ್ಲಾ ಪಂಚಾಯತಿ ಸಿಇಒ ಕಾರು ಚಾಲಕನಾಗಿದ್ದರು. ಡೆತ್ ನೋಟ್‌ನಲ್ಲಿ ನನ್ನ ಸಾವಿಗೆ ಸಂಸದ ಡಾ. ಕೆ ಸುಧಾಕರ್ ಹಾಗೂ ಚಿಕ್ಕಕಾಡಿಗಾನಹಳ್ಳಿ ನಾಗೇಶ್ ಮತ್ತು ಲೆಕ್ಕ ಪರಿಶೋಧಕ ಮಂಜುನಾಥ್ ಕಾರಣ ಎಂದು ಉಲ್ಲೇಖ ಮಾಡಿದ್ದಾರೆ ಎಂದು ಹೇಳಲಾಗುತ್ತಿದೆ. ಸರ್ಕಾರಿ ಕೆಲಸ ಕೊಡಿಸುವುದಾಗಿ ಹೇಳಿ 25 ಲಕ್ಷ ಹಣ ಪಡೆದು ವಂಚನೆ ಮಾಡಿದ್ದಾರೆ ಎಂದು ಆರೋಪ ಮಾಡಲಾಗಿದೆ.

**ಕಾಂಗ್ರೆಸ್ ನಾಯಕರಿಂದ ಗಂಭೀರ ಆರೋಪ:** ಘಟನೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಅವರು ಸುಧಾಕರ್ ವಿರುದ್ಧ ಹರಿಹಾಯ್ದಿದ್ದಾರೆ. ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ್ದ ಅವರು, ಕಾರು ಚಾಲಕ ಬಾಬು ಅವರು ಆತ್ಮಹತ್ಯೆಗೆ ಮೊದಲು ಬರೆದಿರುವ ಡೆತ್ ನೋಟ್ ನಲ್ಲಿ ನನ್ನ ಸಾವಿಗೆ ಸಂಸದರೇ ಕಾರಣ ಎಂದು ಉಲ್ಲೇಖ ಮಾಡಿದ್ದಾರೆ. ಹಾಗಾಗಿ ಡೆತ್ ನೋಟ್ ನ ಪ್ರಕಾರವೇ ಪೊಲೀಸರು ಕ್ರಮ ತೆಗೆದುಕೊಂಡಿದ್ದಾರೆ. ಬಾಬು ದಲಿತ ಸಮುದಾಯಕ್ಕೆ ಸೇರಿದವರು. ಪದೇ ಪದೇ ಹಣ ಕೇಳಿದ್ದಕ್ಕೆ ಅವನು ಒತ್ತಡದಿಂದ ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಅಲ್ಲದೆ ಸಂಸದರ ರಾಜೀನಾಮೆಗೆ ಆಗ್ರಹಿಸಿದ್ದಾರೆ.



ಇನ್ನು ಸಚಿವ ಎಂಸಿ ಸುಧಾಕರ್ ಹಾಗೂ ಪ್ರಿಯಾಂಕ್ ಖರ್ಗೆ ಅವರು ಸುಧಾಕರ್ ವಿರುದ್ಧ ಗಂಭೀರ ಆರೋಪ ಮಾಡಿದ್ದರು. ಕೆಪಿಸಿಸಿ ಕಚೇರಿಯಲ್ಲಿ ಈ ವಿಚಾರದ ಕುರಿತಾಗಿ ಮಾತನಾಡಿದ್ದ ಪ್ರಿಯಾಂಕ್ ಖರ್ಗೆ ''ಇದೇ ಸಾವು ಬೇರೆ ಕಡೆ ಆಗಿದ್ದರೆ ನರೇಂದ್ರ ಮೋದಿ ತಮ್ಮ ಭಾಷಣದಲ್ಲೇ ಹೇಳಿ ಬಿಡುತ್ತಿದ್ದರು. ನಮ್ಮ ಸರ್ಕಾರ ಇದನ್ನೂ ತಾರ್ಕಿಕ ಅಂತ್ಯಕ್ಕೆ ಕೊಂಡುಯ್ಯುತ್ತದೆ. ಬಿಜೆಪಿಯವರಿಂದ ಅನ್ಯಾಯ ಆಗಿದೆ. ಹಿಂದೆ ಮಾತನಾಡಿದ ಹಾಗೆ ಈಗಲೂ ಮಾತಾಡುವ ದಮ್ಮು ತಾಕತ್ತು ಅಶೋಕ್‌ಗೆ ಛಲವಾದಿ ನಾರಾಯಣ ಸ್ವಾಮಿಗೆ ಇದೆಯಾ?'' ಎಂದು ಪ್ರಶ್ನಿಸಿದ್ದರು.

**ನೆರವಿಗೆ ಬರ್ತಾರಾ ಬಿಜೆಪಿ ನಾಯಕರು?:** ಡಾ. ಸುಧಾಕರ್ ಪರವಾಗಿ ಸದ್ಯ ವಿಪಕ್ಷ ನಾಯಕ ಆರ್ ಅಶೋಕ್ ನಿಂತಿದ್ದಾರೆ. ಈ ಕುರಿತಾಗಿ ಮಾಧ್ಯಮಗಳಿಗೆ ಹೇಳಿಕೆ ನೀಡಿರುವ ಅವರು ವಿಪಕ್ಷದ ನಾಯಕರನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ವಿರೋಧ ಪಕ್ಷದ ನಾಯಕರಿಗೆ ಕಿರುಕುಳ ನೀಡಲು ಸರ್ಕಾರ ಪೊಲೀಸರನ್ನು ಬಳಸುತ್ತಿದೆ. ಚಾಲಕ ಬಾಬು ಆತ್ಮಹತ್ಯೆ ಪ್ರಕರಣದಲ್ಲಿ, ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಅವರ ಪಾತ್ರ ಇಲ್ಲದಿದ್ದರೂ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಸಂಸದ ಡಾ.ಕೆ.ಸುಧಾಕರ್ ವಿರುದ್ಧ ಎಫ್‌ಐಆರ್

ಸಂಸದ ಡಾ.ಕೆ.ಸುಧಾಕರ್ ವಿರುದ್ಧ ಎಫ್‌ಐಆರ್ ಮಾಡಿ ಎ1 ಆರೋಪಿ ಮಾಡಿದ್ದಾರೆ. ಆತ್ಮಹತ್ಯೆಗೆ ಅವರೇ ಸಂಪೂರ್ಣ ಒತ್ತಡ ಹೇರಿದರೆ ಮಾತ್ರ ಈ ರೀತಿ ಎಫ್‌ಐಆರ್ ಮಾಡಬೇಕಾಗುತ್ತದೆ. ಆದರೆ ಸುಧಾಕರ್ ಚಾಲಕ ಬಾಬು ಅವರ ಜೊತೆ ಆಪ್ತ ಸಂಬಂಧವೇನೂ ಇಲ್ಲ. ಅಲ್ಲದೆ, ಈ ಪ್ರಕರಣದಲ್ಲಿ ಜಾತಿ ನಿಂದನೆಯ ಆರೋಪ ಬರುವುದೇ ಇಲ್ಲ. ಸುಧಾಕರ್ ಆ ವ್ಯಕ್ತಿಯನ್ನು ಎದುರಿಗೆ ನಿಲ್ಲಿಸಿಕೊಂಡು ನಿಂದಿಸಿಲ್ಲ, ಅಥವಾ ಸಂದೇಶ ಕಳುಹಿಸಿಲ್ಲ. ಕಾಂಗ್ರೆಸ್ ಸರ್ಕಾರ ವಿಪಕ್ಷಗಳ ನಾಯಕರನ್ನು ಗುರಿಯಾಗಿಸುವುದು ಸ್ಪಷ್ಟವಾಗಿದೆ ಎಂದು ಆರೋಪ ಮಾಡಿದ್ದಾರೆ. ಈ ಹಿಂದೆ ಶಾಸಕ ಬೈರತಿ ಬಸವರಾಜ್ ಅವರ ಮೇಲೂ ಇದೇ ರೀತಿ ಕ್ರಮ ಕೈಗೊಳ್ಳಲಾಗಿದೆ. ಕೊಡಗಿನಲ್ಲಿ ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಡೆತ್‌ನೋಟ್ ಬರೆದಿಟ್ಟು ಸತ್ತಿದ್ದರು. ಆದರೆ ಕಾಂಗ್ರೆಸ್ ಶಾಸಕರಾದ ಎ.ಎಸ್.ಪೊನ್ನಣ್ಣ ಹಾಗೂ ಮಂಥರ್ ಗೌಡ ಅವರ ಹೆಸರು ಎಫ್‌ಐಆರ್‌ನಲ್ಲಿ ಬರಲೇ ಇಲ್ಲ. ಪೊಲೀಸರು ಎಲ್ಲರಿಗೂ ಸಮಾನವಾಗಿ ಕೆಲಸ ಮಾಡಬೇಕು ಎಂದು ಸವಾಲು ಹಾಕಿದ್ದಾರೆ.

**ಈ ದಿನದ ದರ**

| | |
|---|---|
| ಪೆಟ್ರೋಲ್: | 103.50 ₹/L |
| ಡೀಸೆಲ್ : | 90.03 ₹/L |
| ಬಂಗಾರ: | ₹10,304/Gram24ct ₹9,445/Gram22ct |
| ಬೆಳ್ಳಿ: | ₹117.00/Gram |

# ರಾಹುಲ್ ಗಾಂಧಿಗೆ 5 ಪ್ರಶ್ನೆ ಕೇಳಿದ ಜೆಡಿಎಸ್ ಹೆಚ್.ಎಂ.ರಮೇಶ್ ಗೌಡ

## ವಿಧಾನಸಭೆ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷರು 136 ಸ್ಥಾನ ಗೆಲ್ಲುತ್ತೇವೆ ಎಂದು ಹೇಳಿದ್ದರು

• **ಉದಯವಾಹಿನಿ, ಬೆಂಗಳೂರು**

ಮತಗಳ್ಳತನ ಎಂದು ಚುನಾವಣಾ ಆಯೋಗ ಹಾಗೂ ಬಿಜೆಪಿ ವಿರುದ್ಧ ರಾಹುಲ್ ಗಾಂಧಿ ಮಾಡಿರುವ ಆರೋಪವು ಪರಮಸುಳ್ಳು ಎಂದಿರುವ ಜೆಡಿಎಸ್ ನಗರ ಘಟಕದ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡ; ಅವರಿಗೆ ಐದು ಪ್ರಶ್ನೆಗಳನ್ನು ಕೇಳಿದ್ದಾರೆ. ಅಲ್ಲದೆ, ದಾಖಲೆಗಳ ಸಮೇತ ರಾಹುಲ್ ಗಾಂಧಿ ಆರೋಪ ಸುಳ್ಳು ಎಂದು ನಿರೂಪಿಸಿರುವ ಅವರು, ಕಾಂಗ್ರೆಸ್ ಪಕ್ಷವೇ ಮತಗಳ್ಳತನದಲ್ಲಿ ನಿರತವಾಗಿದೆ ಎಂದು ದೂರಿದ್ದಾರೆ.



ಜೆಡಿಎಸ್, ಬಿಜೆಪಿ ಒಟ್ಟಾಗಿ ಲೋಕಸಭೆ ಚುನಾವಣೆ ಎದುರಿಸಿದೆವು. ಆದರೆ ಎಲ್ಲಾ ಕ್ಷೇತ್ರಗಳನ್ನು ಗೆಲ್ಲಲು ಆಗಲಿಲ್ಲ. ಆದರೂ ನಾವು ಸಾಂವಿಧಾನಿಕ ಸಂಸ್ಥೆಯಾಗಿರುವ ಚುನಾವಣೆ ಆಯೋಗವನ್ನು ದೂರುವ ಕೆಲಸ ಮಾಡಲಿಲ್ಲ. ವಿಧಾನಸಭೆ ಚುನಾವಣೆಯಲ್ಲಿ ಕೆಪಿಸಿಸಿ ಅಧ್ಯಕ್ಷರು 136 ಸ್ಥಾನ ಗೆಲ್ಲುತ್ತೇವೆ ಎಂದು ಹೇಳಿದ್ದರು.

ಇಷ್ಟು ಕರಾರುವಕ್ಕಾಗಿ ಸಂಖ್ಯೆ ಹೇಳಬೇಕು ಎಂದರೆ ಅವರೇನು ಬ್ರಹ್ಮನೇ. ಅವರು ಹೇಳಿದ ಪ್ರಕಾರವೇ 136 ಸ್ಥಾನ ಗೆದ್ದಿದ್ದಾರೆ. ಹಾಗಾದರೆ ಇವರೂ ರಿಗ್ಗಿಂಗ್ ಮಾಡಿ, ಮತಗಳ್ಳತನ ಮಾಡಿ ಗೆದ್ದಿದ್ದಾರಾ ಎಂದು ರಮೇಶ್ ಗೌಡ ವಾಗ್ದಾಳಿ ನಡೆಸಿದರು. ಪಕ್ಷದ ರಾಜ್ಯ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು; ರಾಹುಲ್ ಗಾಂಧಿ ಅವರು ಆಯೋಗಕ್ಕೆ ಐದು ಪ್ರಶ್ನೆ ಕೇಳಿದ್ದಾರೆ. ಜೆಡಿಎಸ್ ಕೂಡ ಅವರಿಗೆ ಐದು ಪ್ರಶ್ನೆ ಕೇಳುತ್ತದೆ. ನೈತಿಕತೆ ಇದ್ದರೆ ಅವರು ಈ ಪ್ರಶ್ನೆಗಳಿಗೆ ಉತ್ತರ ಕೊಡಲಿ ಎಂದು ಸವಾಲು ಹಾಕಿದರು.

**ಐದು ಪ್ರಶ್ನೆಗಳು ಇವೇ:** 1. ನೀವು ಚುನಾವಣಾ ಆಯೋಗಕ್ಕೆ ಉತ್ತರ ಕೊಡುವುದಕ್ಕೆ ಹೆದರುತ್ತಿರುವುದು ಯಾಕೆ?

2. ಕಳೆದ ವಿಧಾನಸಭೆ ಚುನಾವಣೆಯಲ್ಲಿ ರಾಮನಗರ, ಮಾಗಡಿ, ಕುಣಿಗಲ್ ಸೇರಿ ಅನೇಕ ವಿಧಾನಸಭೆ ಕ್ಷೇತ್ರಗಳಲ್ಲಿ ಗಿಫ್ಟ್ ಕೂಪನ್ ಹಂಚಿ ಗೆದ್ದಿದ್ದೀರಿ. ಇದು ಮತಗಳ್ಳತನ ಅಲ್ಲವೇ?

3. ಗೃಹಲಕ್ಷ್ಮೀ ಗ್ಯಾರಂಟಿಯನ್ನು ಚುನಾವಣಾ ಅಸ್ತ್ರವನ್ನಾಗಿ ಬಳಕೆ ಮಾಡುತ್ತೀರಿ. ಚುನಾವಣೆ ಬಂದ ಕೂಡಲೇ ನಾಲ್ಕುಐದು ತಿಂಗಳ ಗೃಹಲಕ್ಷ್ಮೀ ಹಣ ಜಮೆ ಮಾಡುತ್ತೀರಿ. ನಿಯಮಿತವಾಗಿ ಪ್ರತೀ ತಿಂಗಳು ಜಮೆ ಮಾಡುತ್ತಿಲ್ಲ, ಯಾಕೆ ಇದು ಚುನಾವಣಾ ಅಕ್ರಮ ಅಲ್ಲವೇ

4. ಕಳೆದ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ 9 ಲೋಕಸಭೆ ಕ್ಷೇತ್ರಗಳಲ್ಲಿ ಮತಗಳ್ಳತನ ಆಗಿಲ್ಲವೇ? ಆಗಿಲ್ಲದಿದ್ದರೆ ಮತಗಳ್ಳರಿಗೆ ನಿಮ್ಮ ಮೇಲೆ ವಿಶೇಷ ಪ್ರೀತಿ ಯಾಕೆ?

5. ಕಳೆದ ವಿಧಾನಸಭೆ ಚುನಾವಣೆಯಲ್ಲಿ ಮಂಡ್ಯ ಸೇರಿ ಅನೇಕ ಕ್ಷೇತ್ರಗಳಲ್ಲಿ ಅತೀ ಕಡಿಮೆ ಅಂತರದಿಂದ ನಿಮ್ಮ ಶಾಸಕರು ಗೆದ್ದಿದ್ದಾರೆ. ಹಾಗಿದ್ದರೆ ಅವರೂ ಮತಗಳ್ಳತನ ಮಾಡಿಯೇ ಗೆಲುವು ಸಾಧಿಸಿದ್ದಾರೆಯೇ ನೀವು ಚುನಾವಣಾ ಆಯೋಗಕ್ಕೆ ಐದು ಪ್ರಶ್ನೆ ಕೇಳಿದ್ದೀರಿ. ನಾನೂ ನಿಮ್ಮನ್ನು ಐದು ಪ್ರಶ್ನೆ ಕೇಳುತ್ತೇನೆ. ಉತ್ತರಿಸಿ. ಎಲೆಕ್ಷನ್ ಕಮಿಷನ್ ಉತ್ತರ ಕೊಡಿ ಎಂದರೆ ನಾನು ನಿಮ್ಮಂತೆಯೇ ಜಾರಿಕೊಳ್ಳುವುದಿಲ್ಲ. ನನ್ನ ಪ್ರಶ್ನೆಗಳಿಗೆ ಉತ್ತರ ಕೊಡಿ ಎಂದು ರಮೇಶ್ ಗೌಡರು ರಾಹುಲ್ ಗಾಂಧಿ ಅವರನ್ನು ಒತ್ತಾಯಿಸಿದರು.

> **ರಾಹುಲ್ ಗಾಂಧಿಯವರು ಅಧಿವೇಶನದಲ್ಲಿ ಇದೆಲ್ಲಾ ಮಾತಾಡಬಹುದಲ್ವಾ? ಅಲ್ಲಿ ಸಮಯ ಹಾಳು ಮಾಡಿ, ಹಾದಿಬೀದಿಯಲ್ಲಿ ಮಾತಾಡೋದು ಯಾಕೆ? ಅವರಿಗೆ ಕೇವಲ ಬಿಹಾರ ಚುನಾವಣೆಯಲ್ಲಿ ಜನರ ಗಮನ ಬೇರೆಡೆಗೆ ಸೆಳೆದು ಮತ ಗಳಿಕೆ ಮಾಡುವ ಏಕೈಕ ದುರುದ್ದೇಶದಿಂದ ಆಯೋಗದ ಮೇಲೆ ಸುಳ್ಳು ಆರೋಪ ಮಾಡುತ್ತಿದ್ದಾರೆ. ಬಿಹಾರದಲ್ಲಿ ಸೋಲುವ ಹತಾಶೆ ಅವರನ್ನು ಕಾಡುತ್ತಿದೆ ಎಂದು ರಮೇಶ್ ಗೌಡ ಟೀಕಿಸಿದರು.**

> **ರಾಹುಲ್ ಗಾಂಧಿ ಅವರು ಲೋಕಸಭೆಯ ಪ್ರತಿಪಕ್ಷ ನಾಯಕ ಎಂಬುದನ್ನು ಮರೆತಿದ್ದಾರೆ. ಅವರು ಲೋಕಸಭೆಯಲ್ಲಿ ಈ ವಿಷಯವನ್ನು ಮಾತನಾಡಬೇಕೆ ಹೊರತು ಹಾದಿ ಬೀದಿಯಲ್ಲಿ ರಂಪ ಮಾಡಬಾರದು. ಬೆಂಗಳೂರಿಗೆ ಬಂದು ಅವರದೇ ಪಕ್ಷದ ಸರ್ಕಾರ ಇರುವ ರಾಜ್ಯದಲ್ಲಿ ಆಡಳಿತ ತಂತ್ರವನ್ನು ದುರುಪಯೋಗ ಮಾಡಿಕೊಂಡು ಪ್ರತಿಭಟನೆ ಪ್ರಹಸನ ನಡೆಸಿ ಹೋಗಿದ್ದಾರೆ ಎಂದು ರಮೇಶ್ ಗೌಡರು ಕಟುವಾಗಿ ಟೀಕಿಸಿದರು.**

# ಪ್ರಧಾನಿ ಮೋದಿ ಆಗಮನ ಹಿನ್ನೆಲೆ ಸಂಚಾರ ಮಾರ್ಗ ಬದಲಾವಣೆ

• **ಉದಯವಾಹಿನಿ, ಬೆಂಗಳೂರು**

ನಮ್ಮ ಮೆಟ್ರೊದ ಹಳದಿ ಮಾರ್ಗವನ್ನು ಆಗಸ್ಟ್ 10ರಂದು ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟಿಸಲಿದ್ದು, ಹಲವು ಮಾರ್ಗಗಳಲ್ಲಿ ವಾಹನ ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ. ಜತೆಗೆ, ವಾಹನಗಳ ನಿಲುಗಡೆ ಸಹ ನಿಷೇಧಿಸಲಾಗಿದೆ. ಜಯನಗರ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ಮಾರೇನಹಳ್ಳಿ ಮುಖ್ಯರಸ್ತೆಯ ರಾಗಿಗುಡ್ಡ ಮೆಟ್ರೊ ನಿಲ್ದಾಣದ ಬಳಿ ಹಳದಿ ಮಾರ್ಗದ ಉದ್ಘಾಟನಾ ಸಮಾರಂಭ ನಡೆಯಲಿದೆ. ಪ್ರಧಾನಿ ಮೋದಿ ಸೇರಿದಂತೆ ಹಲವರು ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದು, ಸಂಚಾರ ಮಾರ್ಗವನ್ನು ಮಾರ್ಪಾಡು ಮಾಡಲಾಗಿದೆ.

**ಸಂಚಾರ ನಿರ್ಬಂಧ:** ಅಂದು ಬೆಳಿಗ್ಗೆ 11ರಿಂದ ಮಧ್ಯಾಹ್ನ 12.30ರವರೆಗೆ ಮಾರೇನಹಳ್ಳಿ ಮುಖ್ಯ ರಸ್ತೆಯ ರಾಜಲಕ್ಷ್ಮಿ ಜಂಕ್ಷನ್‌ನಿಂದ ಮಾರೇನಹಳ್ಳಿ 18ನೇ ಮುಖ್ಯರಸ್ತೆಯ ವರೆಗೆ ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಮಾರೇನಹಳ್ಳಿ ಈಸ್ಟ್ ಎಂಡ್ ಮುಖ್ಯರಸ್ತೆಯ ಜಂಕ್ಷನ್‌ನಿಂದ ಅರವಿಂದ ಜಂಕ್ಷನ್‌ವರೆಗೂ ಸಂಚಾರ ನಿರ್ಬಂಧಿಸಲಾಗಿದೆ. ಬೆಳಿಗ್ಗೆ 11.30ರಿಂದ ಮಧ್ಯಾಹ್ನ 2.30ರ ವರೆಗೆ ಸಿಲ್ಕ್ ಬೋರ್ಡ್ ಕಡೆಯಿಂದ ಎಲೆಕ್ಟ್ರಾನಿಕ್ ಸಿಟಿ ಮೇಲೇತುವೆ, ಹೊಸೂರು ರಸ್ತೆಯ ಮೂಲಕ ಹೊಸೂರು ಕಡೆಗೆ, ಹೊಸೂರು ಕಡೆಯಿಂದ ಬೆಂಗಳೂರು ನಗರದ ಕಡೆಗೆ, ಎಲೆಕ್ಟ್ರಾನಿಕ್ ಸಿಟಿ 1ನೇ ಹಂತದ ಇನ್ಫೋಸಿಸ್ ಅವೆನ್ಯೂ, ವೇಲಾಂಕಣಿ ರಸ್ತೆ, ಎಚ್.ಪಿ ಅವೆನ್ಯೂ ರಸ್ತೆಗಳಲ್ಲಿ ವಾಹನ ಸಂಚಾರ ನಿರ್ಬಂಧಿಸಲಾಗಿದೆ.

# ಗ್ರೇಟರ್ ಬೆಂಗಳೂರು ಆಡಳಿತ ಚುನಾವಣಾ ನಿಯಮಗಳ ಜಾರಿಗೆ ಅಧಿಸೂಚನೆ ಪ್ರಕಟ

• **ಉದಯವಾಹಿನಿ, ಬೆಂಗಳೂರು**

ಹೊಸದಾಗಿ ರಚಿತವಾಗಿರುವ 5 ನಗರ ಪಾಲಿಕೆಗಳಿಗೆ ಚುನಾವಣೆ ನಡೆಸುವ ಸಂಬಂಧ ರಾಜ್ಯ ಸರಕಾರವು, ಗ್ರೇಟರ್ ಬೆಂಗಳೂರು ಆಡಳಿತ (ಚುನಾವಣೆ) ನಿಯಮಗಳು–2025 ಅನ್ನು ರೂಪಿಸಿ ಕರಡು ಅಧಿಸೂಚನೆ ಹೊರಡಿಸಿದೆ. ಗ್ರೇಟರ್ ಬೆಂಗಳೂರು ಆಡಳಿತ ಕಾಯಿದೆಯಡಿ ಚುನಾವಣಾ ನಿಯಮಗಳನ್ನು ರೂಪಿಸಿದ್ದು, ಆಕ್ಷೇಪಣೆ ಸಲ್ಲಿಕೆಗೆ 15 ದಿನ ಕಾಲಾವಕಾಶ ನೀಡಿದೆ. ರಾಜ್ಯ ಚುನಾವಣಾ ಆಯೋಗದ ಮೇಲ್ವಿಚಾರಣೆ, ನಿರ್ದೇಶನ ಹಾಗೂ ನಿಯಂತ್ರಣದಲ್ಲೇ ಪಾಲಿಕೆಗಳಿಗೆ ಚುನಾವಣೆ ನಡೆಸಬೇಕೆಂದು ಪ್ರಸ್ತಾಪಿಸಲಾಗಿದೆ.

**ಚುನಾವಣಾ ಆಯೋಗದೊಂದಿಗೆ ಸಮನ್ವಯ:** ನಗರ ಪಾಲಿಕೆಗಳ ಚುನಾವಣೆಗೆ ಸಂಬಂಧಿಸಿದಂತೆ ಆಯುಕ್ತರು ಚುನಾವಣಾ ಆಯೋಗದೊಂದಿಗೆ ಸಮನ್ವಯ ಸಾಧಿಸಬೇಕು. ನಿರ್ದಿಷ್ಟ ಪ್ರದೇಶಗಳು ಆಯಾ ವಾರ್ಡ್‌ನ ಪರಿಧಿಯಲ್ಲೇ ಇರುವಂತೆ ನೋಡಿಕೊಳ್ಳಬೇಕು. ಆಯಾ ವಾರ್ಡ್‌ಗಳಿಗೆ ಅನುಗುಣವಾಗಿ ಮತದಾರರ ಪಟ್ಟಿ ಸಿದ್ಧಪಡಿಸಬೇಕು. ಪ್ರದೇಶ, ರಸ್ತೆ ವಿಭಜಿತವಾಗಬಾರದು ಎಂದು ಸೂಚಿಸಲಾಗಿದೆ.

**ಸ್ಥಳೀಯ ಪ್ರಾಧಿಕಾರದ ಅಧಿಕಾರಿಗಳಿಗೆ ನಾಮ ನಿರ್ದೇಶನ:** ಆಯುಕ್ತರು ಸರಕಾರ ಸ್ಥಳೀಯ ಪ್ರಾಧಿಕಾರದ ಅಧಿಕಾರಿಗಳನ್ನೇ ನಿರ್ದಿಷ್ಟ ವಾರ್ಡ್‌ಗಳಿಗೆ ಚುನಾವಣಾಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳನ್ನಾಗಿ ನಾಮ ನಿರ್ದೇಶನ ಮಾಡಬೇಕು ಎಂದು ಹೇಳಲಾಗಿದೆ.

# 79ನೇ ಸ್ವಾತಂತ್ರ್ಯ ದಿನಾಚರಣೆ: ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಸಿದ್ಧತೆ ಪೂರ್ಣ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ನಗರದ ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ನಡೆಯಲಿರುವ ರಾಜ್ಯ ಮಟ್ಟದ 79 ಸ್ವಾತಂತ್ರ್ಯ ದಿನಾಚರಣೆಗೆ ಸಿದ್ಧತೆಗಳು ಪೂರ್ಣಗೊಂಡಿದ್ದು, ಕಾರ್ಯಕ್ರಮ ವೀಕ್ಷಿಸಲು ಸಾರ್ವಜನಿಕರಿಗೆ ಇದೇ ಮೊದಲ ಬಾರಿಗೆ ಇ-ಪಾಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಆಸಕ್ತರು ಸೇವಾಸಿಂಧು ವೆಬ್‌ಸೈಟ್ www.sevasindhu.karnataka.gov.in ಮೂಲಕ ಆಧಾರ್ ಮೊಬೈಲ್ ಫೋನ್ ಸಂಖ್ಯೆಯನ್ನು ನಮೂದಿಸಿ ಒಟಿಪಿ ಮೂಲಕ ಇ-ಪಾಸ್ ಡೌನ್ ಲೋಡ್ ಮಾಡಿಕೊಳ್ಳಬಹುದು ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ ತಿಳಿಸಿದ್ದಾರೆ. ಇ-ಪಾಸ್‌ನೊಂದಿಗೆ ಮೂಲ ಗುರುತಿನ ಚೀಟಿ ಕಡ್ಡಾಯವಾಗಿ ಹೊಂದಿರಬೇಕು. ಬೆಳಗ್ಗೆ 8.15ರ ಒಳಗೆ ಗೇಟ್ ಸಂಖ್ಯೆ 4ರಿಂದ ಮಾತ್ರ ಮೈದಾನವನ್ನು ಪ್ರವೇಶಿಸಬೇಕು. ನಿಗದಿತ ಸಮಯದ ನಂತರ ಇ-ಪಾಸ್ ಅಮಾನ್ಯವಾಗುತ್ತದೆ.

ಇ-ಪಾಸ್ ವರ್ಗಾಯಿಸುವಂತಿಲ್ಲ. ಒಂದು ಇಪಾಸ್‌ಗೆ ಒಬ್ಬರಿಗೆ ಮಾತ್ರ ಪ್ರವೇಶ. ಕಾರ್ಯಕ್ರಮದ ಸಂದರ್ಭದಲ್ಲಿ ಇ-ಪಾಸ್‌ನ ಮುದ್ರಿತ ಪ್ರತಿ ಅಥವಾಡಿಜಿಟಲ್ (ಮೊಬೈಲ್) ಪ್ರತಿಯನ್ನು ಕಡ್ಡಾಯವಾಗಿ ಹೊಂದಿರಬೇಕು. ಆರು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಇ-ಪಾಸ್ ಬೇಕಾಗುವುದಿಲ್ಲ.

3 ಸಾವಿರ ಇ-ಪಾಸ್‌ಗಳನ್ನು ಮೊದಲು ಬಂದವರಿಗೆ ಮೊದಲ ಆದ್ಯತೆ ಮೇಲೆ ವಿತರಿಸಲಾಗುತ್ತದೆ. ಇ ಪಾಸ್ ನವರಿಗೆ ಮೈದಾನದೊಳಗೆ ಪಾರ್ಕಿಂಗ್ ಸೌಲಭ್ಯ ಒದಗಿಸಲಾಗುವುದಿಲ್ಲ. ಪೊಲೀಸ್ ಇಲಾಖೆಯ ನಿರ್ದೇಶನದಂತೆ ಸಾರ್ವಜನಿಕರು ತಮ್ಮ ವಾಹನಗಳನ್ನು ನಿಲುಗಡೆ ಮಾಡಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಳ ಮೀಸಲಾತಿ ವರದಿ ಸರಿ ಇಲ್ಲ: ಡಿಎಸ್‌ಎಸ್ ರಾಜ್ಯ ಸಂಚಾಲಕ ಡಿ.ಜಿ. ಸಾಗರ್

• **ಉದಯವಾಹಿನಿ, ಬೆಂಗಳೂರು**

ಒಳಮೀಸಲಾತಿಗೆ ಸಂಬಂಧಿಸಿದಂತೆ ನ್ಯಾ. ನಾಗಮೋಹನ್ ದಾಸ್ ನೇತೃತ್ವದ ಆಯೋಗ ಸಲ್ಲಿಸಿರುವ ವರದಿ ಕಗ್ಗಂಟಾಗಿ ಪರಿಣಮಿಸಿದೆ. ಅದರಲ್ಲಿ ಅನೇಕ ತಪ್ಪುಗಳಾಗಿದ್ದು, ಸರಿಪಡಿಸುವ ಮೂಲಕ ಎಲ್ಲರಿಗೂ ನ್ಯಾಯ ಒದಗಿಸಬೇಕು. ಈ ಸಂಬಂಧ ಎದ್ದಿರುವ ಕೂಗು ಸರಿ ಇದೆ ಎಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಡಿ.ಜಿ. ಸಾಗರ್ ತಿಳಿಸಿದರು. ಎಸ್‌ಸಿ/ಎಸ್‌ಟಿ ದಲಿತರ ಜ್ವಲಂತ ಸಮಸ್ಯೆಗಳು: ಮೀಸಲಾತಿ ಏರಿಕೆ ರದ್ದು, ಪಿಟಿಸಿಎಲ್ ಕಾಯ್ದೆ ವಿರುದ್ಧ ಕೋರ್ಟ್ ತೀರ್ಪುಗಳು ಮತ್ತು ಪರಿಹಾರಗಳು ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಒಳ ಮೀಸಲಾತಿಗಾಗಿ ಸಮೀಕ್ಷೆ ನಡೆಸಲು 65 ಸಾವಿರ ಶಿಕ್ಷಕರನ್ನು ನಿಯೋಜಿಸುವ ಮೂಲಕ ಸರ್ಕಾರ ಒಳ್ಳೆಯ ಕೆಲಸ ಮಾಡಿತ್ತು. ಆದರೆ, ಅವರಿಗೆ ಸರಿಯಾದ ತರಬೇತಿ ಇಲ್ಲದೇ ಇರುವುದು, ಮೊಬೈಲ್ ಆ್ಯಪ್‌ಗಳ ಬಳಕೆ ನೆಟ್‌ವರ್ಕ್ ಸಮಸ್ಯೆ ಇನ್ನಿತರ ಕಾರಣಗಳಿಂದ ಸಮೀಕ್ಷೆಯಲ್ಲಿ ವ್ಯತ್ಯಾಸಗಳಾಗಿವೆ ಎಂದು ಹೇಳಿದರು. ಆದಿ ದ್ರಾವಿಡ (ಎಡಿ), ಆದಿ ಕರ್ನಾಟಕ (ಎಕೆ), ಆದಿ ಆಂಧ್ರ (ಎಎ) ಎಂಬುದು ಜಾತಿಗಳೇ ಅಲ್ಲ. ಎಸ್‌ಸಿಯಲ್ಲಿ 101 ಜಾತಿಗಳಲ್ಲ. 98 ಮಾತ್ರ ಇರುವುದು



ಉದಯವಾಹಿನಿ ಚಿತ್ರ

ಎಂದು ಹಿಂದೆ ಸರ್ಕಾರ, ಆಯೋಗ ಹೇಳಿತ್ತು. ಆದರೆ, ಈಗ ಒಳಮೀಸಲಾತಿ ಶಿಫಾರಸ್ಸಿನಲ್ಲಿ ಎಡಿ, ಎಕೆ. ಎಎ ಸಮುದಾಯಗಳು ಶೇ 4ರಷ್ಟಿದ್ದಾರೆ ಎಂದು ಹೇಳಿ, ಅವರಿಗೆ ಶೇ 1ರಷ್ಟು ಮೀಸಲಾತಿ ನೀಡಲು ಶಿಫಾರಸು ಮಾಡಿರುವುದು ವಿಪರ್ಯಾಸ ಎಂದರು.

ದಲಿತ ಸಂಘರ್ಷ ಸಮಿತಿಯ ರಾಜ್ಯ ನಾಯಕ ಶ್ರೀಧರ್ ಕಲಿವೀರ ಮಾತನಾಡಿ, ದಲಿತರು ಭೂಮಿಯನ್ನು ವಿವಿಧ ಕಾರಣದಿಂದ ಕಳೆದುಕೊಂಡಿರುವುದನ್ನು ಮರಳಿ ಪಡೆಯಬೇಕಿದ್ದರೆ ಪಿಟಿಸಿಎಲ್ (ಕೆಲವು ಜಮೀನುಗಳ ಪರಭಾರೆ ನಿಷೇಧ) ಕಾಯ್ದೆಗೆ ತಿದ್ದುಪಡಿ ಮಾಡಬೇಕು. ಸರ್ಕಾರದಲ್ಲಿರುವ ಮನುವಾದಿ ಅಧಿಕಾರಿಗಳು ಬೇಕೆಂದೇ ಕೆಲವು ಜಮೀನುಗಳ' ಎಂಬುದನ್ನು 'ಮಂಜೂರಾದ ಭೂಮಿ' ಎಂದು ದಾಖಲಿಸಿ ಅನ್ಯಾಯ ಮಾಡಿದ್ದಾರೆ. ಪರಭಾರೆ ನಿಷೇಧಿತ ಭೂಮಿ ಎಂದೇ ಅದನ್ನು ಮಾಡಬೇಕು' ಎಂದು ಆಗ್ರಹಿಸಿದರು.

ಅಂಬೇಡ್ಕರ್ ನೀಡಿರುವ ಮೀಸಲಾತಿಯನ್ನು ಬಳಸಿಕೊಂಡು ಉದ್ಯೋಗ ಪಡೆದವರಿಗೆ ಬಡ್ತಿಯಲ್ಲಿ ಅನ್ಯಾಯವಾಗಬಾರದು. ಅಲ್ಲಿಯೂ ಬಡ್ತಿ ಮೀಸಲಾತಿ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕು ಎಂದು ಒತ್ತಾಯಿಸಿದರು.

> **ಜಾತಿಗಳನ್ನು ಒಡೆದು 'ಇ' ಗುಂಪು ಸೃಷ್ಟಿಸಿರುವುದು ಸರಿಯಲ್ಲ. ಸಾಮಾಜಿಕ ಹಿನ್ನೆಲೆಯನ್ನು ಗಮನಿಸದೇ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಇ ಗುಂಪು ಸೃಷ್ಟಿಸಿದ್ದಾರೆ. ಇಷ್ಟಾಗಿಯೂ ಬೇಡ ಜಂಗಮರು ಇ ಗುಂಪಿನಲ್ಲಿ ಇಲ್ಲ. ಅವರನ್ನು ಎ ಗುಂಪಿಗೆ ಸೇರಿಸಲಾಗಿದೆ. ಸಾಮಾಜಿಕವಾಗಿ ಮುಂದುವರಿದಿರುವ ಜಾತಿಗಳ ಗುರುಗಳು ಅವರು. ಅವರನ್ನು ಆದ್ಯತೆಯ 'ಎ' ಗುಂಪಿಗೆ ಸೇರಿಸಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.**

# ಗಣಿಗಾರಿಕೆ ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು ನೀಡಲು ಸರ್ಕಾರ ಹೊಸ ಯೋಜನೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಮುಚ್ಚಿದ ಗಣಿಗಳನ್ನು ಪ್ರಮುಖ ಪ್ರವಾಸಿ ತಾಣಗಳಾಗಿ ಪ್ರಚಾರ ಮಾಡಲು ರಾಜ್ಯ ಪ್ರವಾಸೋದ್ಯಮ ಇಲಾಖೆ ಉತ್ಸುಕವಾಗಿದೆ. ಇಲಾಖೆಯ ಅಧಿಕಾರಿಗಳು ಕೆಲವು ಸ್ಥಳಗಳನ್ನು ಆಯ್ಕೆ ಮಾಡಿದ್ದಾರೆ.

ಅದಕ್ಕಾಗಿ ಕ್ಯುರೇಟೆಡ್ ಪ್ರವಾಸಿ ವೇಳಾಪಟ್ಟಿಯನ್ನು ಸಿದ್ಧಪಡಿಸುವ ಕೆಲಸ ಮಾಡುತ್ತಿದ್ದಾರೆ. ಕೋಲಾರದ ಭಾರತ್ ಗೋಲ್ಡ್ ಮೈನ್ಸ್, ರಾಯಚೂರಿನ ಹಟ್ಟಿ ಗೋಲ್ಡ್ ಮೈನ್ಸ್ ಸ್ಥಳಗಳು, ಬಳ್ಳಾರಿಯಲ್ಲಿ ಮುಚ್ಚಿದ ಕೆಲವು ಗಣಿಗಾರಿಕೆ ಸ್ಥಳಗಳನ್ನು ಪಟ್ಟಿ ಮಾಡುತ್ತಿದ್ದಾರೆ. ಕೋಲಾರದಲ್ಲಿ ಗಾಲ್ಫ್ ಅರೇನಾ ನಿರ್ಮಿಸಲು ನಾವು ಯೋಜನೆಯನ್ನು ರೂಪಿಸುತ್ತಿದ್ದೇವೆ ಎಂದು ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ಹೇಳಿದರು. ಗಣಿ ಮತ್ತು ಭೂವಿಜ್ಞಾನ ಇಲಾಖೆ, ಕರ್ನಾಟಕ ಅರಣ್ಯ ಇಲಾಖೆ, ಪರಿಸರ, ಪರಿಸರ ವಿಜ್ಞಾನ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಮತ್ತು ಗಣಿ ಸಚಿವಾಲಯ ಸೇರಿದಂತೆ ಹಲವು ಸಂಸ್ಥೆಗಳಿಂದ ಅನುಮತಿ ಅಗತ್ಯವಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಇದಕ್ಕೆ ರಾಜಕೀಯ ಇಚ್ಛಾಶಕ್ತಿಯೂ ಅಗತ್ಯವಿದೆ. ನಾವು ಸಂಭಾವ್ಯ ಪ್ರವಾಸ ತಾಣಗಳನ್ನು ಪಟ್ಟಿ ಮಾಡಿ ಪ್ರಸ್ತಾವನೆಯನ್ನು ಅನುಮತಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಮುಂದೆ ಇಡಲಾಗುವುದು. 2025ರ ಅಂತ್ಯದ ವೇಳೆಗೆ ಗಣಿಗಾರಿಕೆ ಪ್ರವಾಸೋದ್ಯಮ ಪ್ರಾರಂಭಿಸುವುದು ಗುರಿಯಾಗಿದೆ ಎಂದು ಅಧಿಕಾರಿ ಹೇಳಿದರು. ಗದಗದಲ್ಲಿರುವ ಕೈಬಿಟ್ಟ ಗುಹೆಗಳನ್ನು ಪ್ರವಾಸಿ ತಾಣಗಳಾಗಿ ತೆರೆಯಲು ಅರಣ್ಯ ಇಲಾಖೆ ಎದುರು ನೋಡುತ್ತಿರುವ ಸಮಯದಲ್ಲಿ ಪ್ರಸ್ತಾವನೆ ಬಂದಿದೆ. ಕುದುರೆಮುಖದ ಕೈಬಿಟ್ಟ ಮತ್ತು ಮುಚ್ಚಿದ ಗಣಿಗಾರಿಕೆ ಸ್ಥಳಗಳನ್ನು ಪ್ರವಾಸಿ ತಾಣಗಳಾಗಿ ಬಳಸುವ ಬಗ್ಗೆ ಅರಣ್ಯ ಇಲಾಖೆಯು ಪರಿಶೀಲನೆ ನಡೆಸುತ್ತಿದೆ. ಅತಿಥಿ ಗೃಹಗಳು, ಕಚೇರಿ ಸ್ಥಳಗಳು ಮತ್ತು ಇತರ ಸ್ಥಳಗಳನ್ನು ನವೀಕರಿಸಿ, ಪ್ರವಾಸೋದ್ಯಮಕ್ಕೆ ಬಳಸಿಕೊಳ್ಳಬಹುದು, ಏಕೆಂದರೆ ಮೂಲಸೌಕರ್ಯಗಳು ಈಗಾಗಲೇ ಅಸ್ತಿತ್ವದಲ್ಲಿವೆ ಎಂದು ಅರಣ್ಯ ಇಲಾಖೆಯ ಅಧಿಕಾರಿಯೊಬ್ಬರು ಹೇಳಿದರು.

# ನಕಲಿ, ಕಳಪೆ ಗುಣಮಟ್ಟದ ಉತ್ಪನ್ನಗಳ ಮಾರಾಟದ 5 ಎಫ್‌ಐಆರ್‌ಗಳು ದಾಖಲೆ

• **ಉದಯವಾಹಿನಿ, ಬೆಂಗಳೂರು**

ನಕಲಿ, ಕಳಪೆ ಗುಣಮಟ್ಟದ ಉತ್ಪನ್ನಗಳ ಮಾರಾಟದ 5 ಎಫ್‌ಐಆರ್‌ಗಳು ದಾಖಲಾಗಿದ್ದರೂ ಕರ್ನಾಟಕದಲ್ಲಿ ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ಪರಿಣಾಮ ಬೀರಿಲ್ಲ: ಕೇಂದ್ರ, ಈ ವರ್ಷ ಕರ್ನಾಟಕದಲ್ಲಿ ನಕಲಿ, ಕಳಪೆ ಗುಣಮಟ್ಟದ ರಸಗೊಬ್ಬರಗಳ ಮಾರಾಟಕ್ಕೆ ಸಂಬಂಧಿಸಿದಂತೆ ಐದು ಎಫ್‌ಐಆರ್‌ಗಳು ದಾಖಲಾಗಿವೆ ಎಂದು ಕೇಂದ್ರ ಸರ್ಕಾರ ಹೇಳಿದೆ, ಆದರೆ ಪ್ರಸ್ತುತ ಖಾರಿಫ್ ಋತುವಿಗೆ ರಾಜ್ಯದಲ್ಲಿ ರಸಗೊಬ್ಬರಗಳ ಸಾಕಷ್ಟು ಲಭ್ಯತೆ ಇದೆ ಎಂದು ಸ್ಪಷ್ಟಪಡಿಸಿದೆ.

ಲೋಕಸಭೆಯಲ್ಲಿ ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮತ್ತು ಚಿತ್ರದುರ್ಗ ಸಂಸದ ಗೋವಿಂದ್ ಎಂ. ಕಾರಜೋಳ ಅವರ



**ಕಳಪೆ ರಸಗೊಬ್ಬರ ಮಾರಾಟ**

ಪ್ರತ್ಯೇಕ ಪ್ರಶ್ನೆಗೆ ರಾಸಾಯನಿಕ ಮತ್ತು ರಸಗೊಬ್ಬರಗಳ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಉತ್ತರಿಸಿದ್ದಾರೆ, ನಕಲಿ ಮತ್ತು ಕಳಪೆ ಗುಣಮಟ್ಟದ ರಸಗೊಬ್ಬರಗಳ ಮಾರಾಟ ಸಂಬಂಧ ಐದು ಎಫ್‌ಐಆರ್‌ಗಳು ದಾಖಲಾಗಿವೆ ಎಂದು ರಾಜ್ಯ ಸರ್ಕಾರ ಕೇಂದ್ರಕ್ಕೆ ತಿಳಿಸಿದೆ ಎಂದು ಮಾಹಿತಿ ನೀಡಿದರು. ಬಾಗಲಕೋಟೆ ಜಿಲ್ಲೆಯಲ್ಲಿ ನಕಲಿ ರಸಗೊಬ್ಬರಗಳ ಮಾರಾಟಕ್ಕೆ ಸಂಬಂಧಿಸಿದಂತೆ ಎರಡು ಎಫ್‌ಐಆರ್‌ಗಳು ದಾಖಲಾಗಿದ್ದರೆ, ಹಾವೇರಿ ಜಿಲ್ಲೆಯಲ್ಲಿ ಕಳಪೆ ಗುಣಮಟ್ಟದ ರಸಗೊಬ್ಬರಗಳ ಮಾರಾಟಕ್ಕೆ ಸಂಬಂಧಿಸಿದಂತೆ ಮೂರು ಪ್ರಕರಣಗಳನ್ನು ದಾಖಲಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಗುಣಮಟ್ಟ ನಿಯಂತ್ರಣ ಮತ್ತು ಅರಿವು ವ್ಯವಸ್ಥೆಯಿದೆ. ಪತ್ರಿಕೆ, ದೃಶ್ಯ ಮಾಧ್ಯಮ, ಕಿಸಾನ್ ಗೋಷ್ಠಿ, ಕೃಷಿ ಮೇಳ ಮತ್ತು ಕೃಷಿ ಮಹೋತ್ಸವಗಳ ಮೂಲಕ ರೈತರಿಗೆ ರಸಗೊಬ್ಬರದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದಲ್ಲಿ ರಸಗೊಬ್ಬರ ಮಾದರಿಗಳನ್ನು ಪರೀಕ್ಷಿಸಲು ಏಳು ರಸಗೊಬ್ಬರ ನಿಯಂತ್ರಣ ಪ್ರಯೋಗಾಲಯಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು, ಅವುಗಳಲ್ಲಿ ಆರು ಮಾನ್ಯತೆ ಪಡೆದಿವೆ ಎಂದು ಮಾಹಿತಿ ನೀಡಿದ್ದಾರೆ.

> **ಗ್ರಾಮೀಣ ಮಾರುಕಟ್ಟೆಗಳಲ್ಲಿ ನಕಲಿ ರಸಗೊಬ್ಬರಗಳ ಚಲಾವಣೆಯನ್ನು ಪತ್ತೆಹಚ್ಚಲು ಮತ್ತು ತಡೆಯಲು ಯಾವುದೇ ಕಾರ್ಯವಿಧಾನಗಳು ಪ್ರಸ್ತುತ ಜಾರಿಯಲ್ಲಿವೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು ನಕಲಿ, ಕಳಪೆ ರಸಗೊಬ್ಬರ ಮಾರಾಟವನ್ನು ತಡೆಯಲು 1985ರ ರಸಗೊಬ್ಬರ ನಿಯಂತ್ರಣ ಆದೇಶದ ಅನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ. ಇಂತಹ ಗೊಬ್ಬರ ಮಾರಾಟವು ಅಗತ್ಯ ವಸ್ತುಗಳ ಕಾಯ್ದೆಯಡಿ ಶಿಕ್ಷಾರ್ಹ ಅಪರಾಧವಾಗಿದೆ ಎಂದು ಸಚಿವೆ ತಿಳಿಸಿದ್ದಾರೆ.**

# ನ್ಯಾಯಬೆಲೆ ಅಂಗಡಿಗಳಲ್ಲಿ ಇ-ಪಿಒಎಸ್ ಸಾಧನ ಅಳವಡಿಕೆ

• **ಉದಯವಾಹಿನಿ, ಬೆಂಗಳೂರು**

ನ್ಯಾಯಬೆಲೆ ಅಂಗಡಿಗಳಲ್ಲಿ ಅಳವಡಿಸಲಾಗಿರುವ ಇ-ಪಿಒಎಸ್ (ಎಲೆಕ್ಟ್ರಾನಿಕ್ ಪಾಯಿಂಟ್ ಆಫ್ ಸೇಲ್) ಸಾಧನವು ಪಡಿತರ ಸಂಗ್ರಹವನ್ನು ಶೇ.6.6ರಷ್ಟು ಹೆಚ್ಚಳವಾಗುವಂತೆ ಮಾಡಿದೆ. ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ನಡೆಸಿದ ಅಧ್ಯಯನದಿಂದ ಈ ಮಾಹಿತಿ ತಿಳಿದುಬಂದಿದೆ.

ಹತ್ತಿರದ ಯಾವುದೇ ಅಂಗಡಿಗಳಲ್ಲಿ ಪಡಿತರ ಸಂಗ್ರಹಿಸುವ ಅವಕಾಶ ನೀಡಲಾಗಿದ್ದು, ಜನರು ಎಲೆಕ್ಟ್ರಾನಿಕ್ ಪಾಯಿಂಟ್-ಆಫ್-ಸೇಲ್ (ಇ-ಪೋಸ್) ಸಾಧನದ ಮೂಲಕ ಯಾವ



ಉದಯವಾಹಿನಿ ಚಿತ್ರ

ಅಂಗಡಿ ತೆರೆದಿವೆ ಎಂಬ ಮಾಹಿತಿಯನ್ನು ಪಡೆಯಬಹುದಾಗಿದೆ.

ಈ ಸಾಧನ ಅಳವಡಿಕೆಯಿಂದ ಪಡಿತರ ಸಂಗ್ರವು ಶೇ.6.6ರಷ್ಟು ಹೆಚ್ಚಳವಾಗಿದೆ ಎಂದು ಅಧ್ಯಯವು ತಿಳಿಸಿದೆ. ಈ ಹಿಂದೆ ಭಾರತದ ಸಾರ್ವಜನಿಕ ವಿತರಣಾ ವ್ಯವಸ್ಥೆ (ಪಿಡಿಎಸ್) ಅಡಿಯಲ್ಲಿ, ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಸಾಮಾನ್ಯವಾಗಿ ತಮ್ಮ ಮಾಸಿಕ ಧಾನ್ಯ ಪಡಿತರಕ್ಕಾಗಿ ಕೇವಲ ಒಂದು ನ್ಯಾಯಯುತ ಬೆಲೆ ಅಂಗಡಿಗೆ (ಎಫ್‌ಪಿಎಸ್) ತೆರಳಬೇಕಿತ್ತು. ಸಾಕಷ್ಟು ಸಂದರ್ಭದಲ್ಲಿ ಅಂಗಡಿಗಳು ಮುಚ್ಚಿರುವ, ಕೆಲವು ಅಂಗಡಿಯವರು ಜನರನ್ನು ನ್ಯಾಯಯುತವಾಗಿ ನಡೆಸಿಕೊಳ್ಳದ ಬೆಳವಣಿಗೆಗಳು ಕಂಡು ಬರುತ್ತಿದ್ದವು.

ಪ್ರಸ್ತುತ ಪರಿಚಯಿಸಲಾಗಿರುವ ವ್ಯವಸ್ಥೆಯು ನಿಯೋಜಿಸಲಾದ ಅಂಗಡಿ ಚೆನ್ನಾಗಿ ಕೆಲಸ ಮಾಡದಿದ್ದರೆ, ಫಲಾನುಭವಿಗಳು ಅದನ್ನು ಸಹಿಸಿಕೊಳ್ಳುವುದು ಅಥವಾ ಪಡಿತರ ಸಂಗ್ರಹಿಸದೆ ಹೋಗುವ ಅಗತ್ಯವಿಲ್ಲ.

# ಆಟೋಗಳಲ್ಲಿ ಚಾಲಕರ ವಿವರ ಪ್ರದರ್ಶನ ಫಲಕ ನಾಪತ್ತೆ

## ಯಾವುದೇ ರೀತಿಯ ಕಿರುಕುಳ ತಪ್ಪಿಸಿ ಪ್ರಯಾಣಿಕರಿಗೆ ಸುರಕ್ಷತೆ ಒದಗಿಸುವುದು ಇದರ ಉದ್ದೇಶ

• **ಉದಯವಾಹಿನಿ, ಬೆಂಗಳೂರು**

ಕೆಲ ಸಮಯಗಳ ಹಿಂದೆ ಆಟೋರಿಕ್ಷಾಗಳು 'ಚಾಲಕ ಪರವಾನಗಿ ಪ್ರದರ್ಶನ ವ್ಯವಸ್ಥೆಯನ್ನು ಹೊಂದಿದ್ದವು, ಚಾಲಕರಿಂದ ಯಾವುದೇ ರೀತಿಯ ಕಿರುಕುಳ ತಪ್ಪಿಸಿ ಪ್ರಯಾಣಿಕರಿಗೆ ಸುರಕ್ಷತೆ ಒದಗಿಸುವುದು ಇದರ ಉದ್ದೇಶ.

ಪ್ರಯಾಣಿಕರ ಸುರಕ್ಷತಾ ವೈಶಿಷ್ಟ್ಯವಾದ ಈ ವ್ಯವಸ್ಥೆಯನ್ನು 2004 ರಲ್ಲಿ ಬೆಂಗಳೂರಿನಲ್ಲಿ ಪರಿಚಯಿಸಲಾಯಿತು. ಇದು ಚಾಲಕನ ಹೆಸರು, ಫೋಟೋ, ಚಾಲನಾ ಪರವಾನಗಿ ವಿವರಗಳು, ವಿಳಾಸ, ಫೋನ್ ನಂಬರ್ ಮತ್ತು ರಕ್ತದ ಗುಂಪನ್ನು ತೋರಿಸುತ್ತಿತ್ತು. ಹೆಚ್ಚಿನ ಆಟೋಗಳು ಬೋರ್ಡ್‌ಗಳನ್ನು ಹಾಕಿರುತ್ತಿದ್ದವು. ಚಾಲಕರು ನಿಯಮಗಳನ್ನು ಪಾಲಿಸುವಂತೆ ಮತ್ತು ಮೀಟರ್ ಪ್ರಕಾರ ಸವಾರಿ ನಡೆಸುವುದು ಇದರ ಉದ್ದೇಶವಾಗಿತ್ತು. ಪ್ರಯಾಣಿಕರು ಒಂದು ವೇಳೆ ದೂರು ನೀಡಿದರೆ ಚಾಲಕರನ್ನು ಪತ್ತೆಹಚ್ಚಲು ಅಧಿಕಾರಿಗಳಿಗೆ ಈ ಬೋರ್ಡ್ ಗಳು ಸಹಾಯವಾಗುತ್ತಿತ್ತು.

ಆದರೆ ಇತ್ತೀಚೆಗೆ ಬೆಂಗಳೂರಿನಲ್ಲಿ ಆಟೋಚಾಲಕರು ಈ ಬೋರ್ಡ್‌ಗಳನ್ನು ಪ್ರದರ್ಶಿಸುವುದಿಲ್ಲ, ಯಾವುದೇ ಅಹಿತಕರ ಘಟನೆಯ ಸಂದರ್ಭದಲ್ಲಿ ದೂರುಗಳನ್ನು ಸಲ್ಲಿಸಲು ಪ್ರಯಾಣಿಕರಿಗೆ ಆಟೋ ನೋಂದಣಿ ಸಂಖ್ಯೆಯನ್ನು ನೀಡುವುದು ಮಾತ್ರ ಏಕೈಕ ಆಯ್ಕೆಯಾಗಿ ಉಳಿದಿದೆ. ಆಟೋಗಳಲ್ಲಿ ಫಲಕ ನಾಪತ್ತೆಯಾಗುತ್ತಿದೆ.

ಬೋರ್ಡ್‌ಗಳು ಇದ್ದಾಗ, ಚಾಲಕರು ಮೀಟರ್ ಮೂಲಕ ದರ ಹಾಕಬೇಕಾಗುತ್ತದೆ. ಪ್ರಯಾಣಿಕರನ್ನು ಗೌರವದಿಂದ ನಡೆಸಿಕೊಳ್ಳುತ್ತಾರೆ. ಆದರೆ ಈ ಬೋರ್ಡ್‌ಗಳಿಲ್ಲದೆ, ಚಾಲಕರು



ಉದಯವಾಹಿನಿ ಚಿತ್ರ

### ಒಕ್ಕೂಟ ಮುಖ್ಯಸ್ಥರು ಏನಂತಾರೆ?

**ಇದಕ್ಕೆ ವ್ಯತಿರಿಕ್ತವಾಗಿ, ಆಟೋರಿಕ್ಷಾ ಚಾಲಕರ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ರುದ್ರಮೂರ್ತಿ, ನಗರದಲ್ಲಿ ಹೆಚ್ಚಿನ ಆಟೋ ಸವಾರಿಗಳು ಖಾಸಗಿ ರೈಡ್-ಹೇಲಿಂಗ್ ಅಪ್ಲಿಕೇಶನ್‌ಗಳ ಮೂಲಕ ನಡೆಯುತ್ತವೆ, ಅಲ್ಲಿ ಎಲ್ಲಾ ವಿವರಗಳು ಲಭ್ಯವಿದೆ ಎನ್ನುತ್ತಾರೆ. ಆಟೋ ಚಾಲಕ ಜಯರಾಮ್, ನ್ಯಾಯಾಲಯದಲ್ಲಿ ಹೋರಾಡಿ ಪ್ರಕರಣವನ್ನು ಗೆದ್ದಿದ್ದೇನೆ ಎಂದು ಹೇಳಿದರು. ಮೋಟಾರು ವಾಹನ ನಿಯಮಗಳು ಬೋರ್ಡ್ ಹಾಕುವುದನ್ನು ಕಡ್ಡಾಯಗೊಳಿಸುವುದಿಲ್ಲ. ಬೋರ್ಡ್ ಪ್ರದರ್ಶಿಸದಿದ್ದಕ್ಕಾಗಿ ದಂಡ ವಿಧಿಸಲು ಸಂಚಾರ ಪೊಲೀಸರಿಗೆ ಅಧಿಕಾರವಿಲ್ಲ ಎಂದರು. ಯಾವುದೇ ಅಹಿತಕರ ಘಟನೆ ಸಂಭವಿಸಿದಲ್ಲಿ, ವಾಹನದ ನೋಂದಣಿ ಸಂಖ್ಯೆ ಸಾಕು ಎಂದು ರುದ್ರ ಮೂರ್ತಿ ಮತ್ತು ಜಯರಾಮ್ ಇಬ್ಬರೂ ಹೇಳುತ್ತಾರೆ.**

ಬೇಕಾಬಿಟ್ಟಿ ಆಟೋಚಾರ್ಜ್ ಹಾಕುತ್ತಾರೆ ಎಂದು ಖಾಸಗಿ ಕಂಪನಿ ಉದ್ಯೋಗಿ ಶರತ್ ಕುಮಾರ್ ಕೆಪಿ ಹೇಳುತ್ತಾರೆ.

**ಬೋರ್ಡ್ ಪ್ರದರ್ಶನ ಆರಂಭ:** ಆದರ್ಶ ಆಟೋ ಮತ್ತು ಟ್ಯಾಕ್ಸಿ ಚಾಲಕರ ಒಕ್ಕೂಟವು ಬೋರ್ಡ್ ಪ್ರದರ್ಶನವನ್ನು ಕಡ್ಡಾಯಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. 2000 ಇಸವಿಯ ಆರಂಭದಲ್ಲಿ ರಾಜರಾಜೇಶ್ವರಿ ನಗರದಲ್ಲಿ ವಿದೇಶಿ ಮಹಿಳೆಯ ಮೇಲೆ ಅತ್ಯಾಚಾರ ನಡೆದ ನಂತರ ಅವರು ಈ ಆಲೋಚನೆಯನ್ನು ಮುಂದಿಟ್ಟರು ಎಂದು ಅದರ ಅಧ್ಯಕ್ಷ ಮಂಜುನಾಥ್ ಎಂ ಹೇಳುತ್ತಾರೆ.

ಒಬ್ಬ ಯುವಕ ತನ್ನ ಸ್ನೇಹಿತನ ಆಟೋವನ್ನು ಎರವಲು ಪಡೆದು, ಸಿರ್ಸಿ ವೃತ್ತದಿಂದ ವಿದೇಶಿ ಪ್ರಯಾಣಿಕ ಮಹಿಳೆಯನ್ನು ಕರೆದುಕೊಂಡು ಹೋಗಿ, ನಿರ್ಜನ ಸ್ಥಳಕ್ಕೆ ಕರೆದೊಯ್ದು ಆಕೆಯ ಮೇಲೆ ಅತ್ಯಾಚಾರ ಎಸಗಿದ್ದನು. ಪೊಲೀಸರು ಪ್ರಕರಣವನ್ನು ಪರಿಹರಿಸಲು ಸಾಕಷ್ಟು ಕಷ್ಟಪಟ್ಟಿದ್ದರು.

ಚಾಲನಾ ಪರವಾನಗಿ ಪ್ರದರ್ಶನ ಆಟೋದಲ್ಲಿ ಇರುತ್ತಿದ್ದರೆ ಫಲಕದಲ್ಲಿ ಪ್ರದರ್ಶಿಸಲಾದ ಚಾಲಕನಿಗಿಂತ ವ್ಯಕ್ತಿ ಬೇರೆ ಎಂದು ಮಹಿಳೆ ಪ್ರಯಾಣಿಸುವುದನ್ನು ನಿರಾಕರಿಸಬಹುದಿತ್ತು ಎನ್ನುತ್ತಾರೆ ಅವರು. ಇತ್ತೀಚೆಗೆ ಪ್ರದರ್ಶನ ಫಲಕ ಸ್ಥಗಿತದ ಬಗ್ಗೆ ವಿಷಾದ ವ್ಯಕ್ತಪಡಿಸಿದ ಮಂಜುನಾಥ್, ಈ ವ್ಯವಸ್ಥೆಯ ಮೂಲಕ, ಪೊಲೀಸರು ನಿಜವಾದ ಪರವಾನಗಿ ಹೊಂದಿರುವವರು ಮಾತ್ರ ಆಟೋಗಳನ್ನು ಓಡಿಸುವುದನ್ನು ಖಚಿತಪಡಿಸಿಕೊಳ್ಳಬಹುದು. ಇದು ಚಾಲಕರನ್ನು ಮೇಲ್ವಿಚಾರಣೆ ಮಾಡಲು ಸಹಾಯ ಮಾಡುತ್ತದೆ, ಪ್ರಯಾಣಿಕರಿಗೆ ಸುರಕ್ಷತೆ ಒದಗಿಸುತ್ತದೆ ಎಂದರು.

### ಸಾರಿಗೆ ಸಚಿವರು ಏನಂತಾರೆ?

**ಚಾಲನಾ ಪರವಾನಗಿ ಪ್ರದರ್ಶನ ವ್ಯವಸ್ಥೆಗಳನ್ನು ಏಕೆ ಜಾರಿಗೊಳಿಸಲಾಗಿಲ್ಲ ಎಂಬುದರ ಕುರಿತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಪರಿಶೀಲಿಸುತ್ತೇನೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಪ್ರತಿಕ್ರಿಯೆ ನೀಡಿದ್ದಾರೆ.**

# ಜ.2024 ರಿಂದ ಜುಲೈ 2025 ರವರೆಗೆ 6 ಸಾವಿರ ಮರ ಕತ್ತರಿಸಿದ ಬಿಬಿಎಂಪಿ!



• **ಉದಯವಾಹಿನಿ, ಬೆಂಗಳೂರು**

ಜನವರಿ 2024 ರಿಂದ ಜುಲೈ 17, 2025 ರವರೆಗೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಗಳೂರಿನ ಸಾರ್ವಜನಿಕ ಮತ್ತು ಖಾಸಗಿ ಸ್ಥಳಗಳಲ್ಲಿ 6,021 ಮರಗಳು, 4,113 ಮರದ ಶಾಖೆಗಳನ್ನು ಕತ್ತರಿಸಿದೆ. ಬಿಬಿಎಂಪಿಗೆ ಬಂದ 21,230 ಅರ್ಜಿಗಳಲ್ಲಿ 18,357 ಮರ ಕಡಿಯುವ ಅರ್ಜಿಗಳನ್ನು ವಿಲೇವಾರಿ ಮಾಡಿದೆ. ಮರಗಳ ಗಣತಿ ವರದಿ ಇಲ್ಲದ ಕಾರಣ ನಗರವು ಒಂದು ದಶಕದಲ್ಲಿ ಎಷ್ಟು ಮರಗಳನ್ನು ಕಳೆದುಕೊಂಡಿದೆ. ಎಷ್ಟು ಮರಗಳಿವೆ ಎಂಬುದನ್ನು ತೋರಿಸಲು ನಿಗಮದ ಬಳಿ ಯಾವುದೇ ಸಂಯೋಜಿತ ದತ್ತಾಂಶವಿಲ್ಲ. ಮರಗಳ ಗಣತಿ ಕಾರ್ಯವನ್ನು ಪೂರ್ಣಗೊಳಿಸಲು ಬಿಬಿಎಂಪಿ ಅರಣ್ಯ ಕೋಶವು ಮತ್ತೆ ಟೆಂಡರ್‌ಗಳನ್ನು ಕರೆದಿಲ್ಲ, ಆದರೆ ಅಧಿಕಾರಿಗಳು ಎಲ್ಲಾ ವಾರ್ಡ್ ಕಚೇರಿಗಳಲ್ಲಿ ಕತ್ತರಿಸಲಾದ ಒಟ್ಟು ಮರಗಳ ಡೇಟಾವನ್ನು ಸಂಗ್ರಹಿಸಲು ಫೈಲ್‌ಗಳನ್ನು ಹುಡುಕುತ್ತಿದ್ದಾರೆ. ಬೆಂಗಳೂರಿನ ಹಸಿರು ಹೊದಿಕೆಯ ಸಂಪೂರ್ಣ ಚಿತ್ರಣ ಎಷ್ಟು ನಷ್ಟವಾಗಿದೆ ಎಂಬುದನ್ನು ತಿಳಿದುಕೊಳ್ಳುವ ಅಗತ್ಯವಿದೆ. ಬೆಂಗಳೂರಿನ ಶೇ. 87.6 ರಷ್ಟು ಪ್ರದೇಶವು ಕಾಂಕ್ರೀಟ್ ಆಗಿದ್ದು, ಬೆಂಗಳೂರಿನ ಶೇ. 12 ಕ್ಕಿಂತ ಕಡಿಮೆ ಜಾಗವು ಮರಗಳು ಮತ್ತು ಸರೋವರಗಳಿಂದ ಆಕ್ರಮಿಸಲ್ಪಟ್ಟಿದೆ ಎಂದು IISc, ಪರಿಸರ ವಿಜ್ಞಾನ ಕೇಂದ್ರ ವರದಿ ಬಿಡುಗಡೆ ಮಾಡಿದೆ. ಈ ವರದಿಯ ಮಾಹಿತಿಯ ಪ್ರಕಾರ ಪ್ರಕ್ರಿಯೆ ನಡೆಸಲಾಗುತ್ತಿದೆ. ಹಿಂದಿನ ಟೆಂಡರ್ ಪ್ರಕ್ರಿಯೆಯಲ್ಲಿ ಸಮಸ್ಯೆಗಳಿದ್ದವು ಹಾಗೂ ಸಮಯವೂ ಕಳೆದುಹೋಗಿತ್ತು. ಆದ್ದರಿಂದ ಮರಗಳ ಗಣತಿಗಾಗಿ ಈಗ ಮರು-ಟೆಂಡರ್ ಕರೆಯಲಾಗುತ್ತಿದೆ.

# ಲೋಕಸಭೆ ಚುನಾವಣೆಯಲ್ಲಿ ಮತಗಳ್ಳತನ ಆರೋಪ

## ಕಾನೂನು ಹೋರಾಟಕ್ಕೆ ಲೀಗಲ್ ಟೀಂ ಜೊತೆ ಚರ್ಚೆ: ಮುಖ್ಯಮಂತ್ರಿ ಸಿದ್ದರಾಮಯ್ಯ

• ಉದಯವಾಹಿನಿ, ಮೈಸೂರು



ಉದಯವಾಹಿನಿ ಚಿತ್ರ

ಮತ ಖರೀದಿಯಿಂದ ಬಾದಾಮಿ ಕ್ಷೇತ್ರದಲ್ಲಿ ಸಿಎಂ ಗೆದ್ದರು ಇಬ್ರಾಹಿಂ ಹೇಳಿಕೆ ವಿಚಾರ ಮತ್ತು ಕಾಂಗ್ರೆಸ್ ಹೋರಾಟ ಮಾಡಿದ ಬಗ್ಗೆ ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಮಾತನಾಡಿದರು. ಮತಗಳ್ಳತನದ ವಿರುದ್ಧ ರಾಹುಲ್ ಗಾಂಧಿ ಹೇಳಿರುವ ಕೆಲವು ವಿಚಾರಗಳು ಸತ್ಯ ಇದೆ. ಈ ಬಗ್ಗೆ ಮುಂದಿನ ಕಾನೂನು ಹೋರಾಟಕ್ಕೆ ಲೀಗಲ್ ಟೀಂ ಜೊತೆ ಚರ್ಚೆ ಮಾಡುತ್ತಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಮೈಸೂರಿನಲ್ಲಿ ಹೇಳಿದ್ದಾರೆ.

ನಾವು ಈ ಬಗ್ಗೆ ರೀಸರ್ಚ್ ಮಾಡುತ್ತಿದ್ದೆವು. ಮತಗಳ್ಳತನ ಆಗಿರುವುದು ಗೊತ್ತಾಗಿದೆ. ಹೀಗಾಗಿ ಹೋರಾಟ ಆರಂಭಿಸಿದ್ದೇವೆ. ಇದೆಲ್ಲಾ ಸುಳ್ಳು ಎಂಬ ಬಿಜೆಪಿ ಆರೋಪ ವಿಚಾರ. ಒಂದೇ ಕೊಠಡಿಯಲ್ಲಿ 80 ಜನ ಹೇಗಿದ್ದರು ಎಂಬುದನ್ನು ಹೇಳಲಿ.

ಅವರು ಹೋಟೆಲ್ ಉದ್ಯೋಗಿಗಳೇ ಆಗಿದ್ರೂ ಒಂದೇ ರೂಂನಲ್ಲಿ ಇರಲು ಸಾಧ್ಯನಾ ನಮ್ಮ ಸರ್ವೇ ಪ್ರಕಾರ ಲೋಕಸಭಾ ಚುನಾವಣೆಯಲ್ಲಿ 16 ಸೀಟ್ ಗೆಲ್ಲುವ ಅವಕಾಶ ಇತ್ತು, ಅದು ಸಾಧ್ಯವಾಗಿಲ್ಲ ಎಂದು ಹೇಳಿದರು.

**ಕಾನೂನು ಹೋರಾಟಕ್ಕೆ ಲೀಗಲ್ ಟೀಂ ಜೊತೆ ಚರ್ಚೆ**

**ನಾನು ಹಾಗೆ ಮಾತಾಡೇ ಇಲ್ಲ:** ಸತ್ತವರು ಕೆಟ್ಟವರು ಮತ ಹಾಕಿ ನನ್ನನ್ನು ಗೆಲ್ಲಿಸಿದರು ಎಂಬ ಸಿದ್ದರಾಮಯ್ಯ ಭಾಷಣ ವೈರಲ್ ವಿಚಾರ. ನಾನು ಆ ರೀತಿ ಮಾತೇ ಆಡಿಲ್ಲ. ಒಂದು ವೇಳೆ ಸತ್ತವರು ಕೆಟ್ಟವರಿಂದ ಮತ ಹಾಕಿಸಿಕೊಂಡಿದ್ರೇ ಅದಕ್ಕೆ ಜವಾಬ್ದಾರಿ ಯಾರು. ಚುನಾವಣಾ ಆಯೋಗ ಅದಕ್ಕೆ ಜವಾಬ್ದಾರಿ ಹೊರಬೇಕಿತ್ತು. ಏನಿತ್ತೋ ಅದನ್ನು ನೋಡ ಬೇಕಿತ್ತು ಎಂದು ಸಿಎಂ ಸಿದ್ದರಾಮಯ್ಯ ಮಾತನಾಡಿದರು.

**ಸುಳ್ಳಿನಲ್ಲಿ ಟ್ರಂಪ್, ಸಿದ್ದರಾಮಯ್ಯ ಒಂದೇ:** ಸುಳ್ಳು ಹೇಳುವುದರಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯ ಇಬ್ಬರೂ ಒಂದೇ,'' ಎಂದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಲೇವಡಿ ಮಾಡಿದರು. ಸುಕ್ಷೇತ್ರ ಮೈಲಾರಕ್ಕೆ ತೆರಳುವ ಮಾರ್ಗ ಮಧ್ಯೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಪಾಕ್ ವಿದೇಶಾಂಗ ಸಚಿವ ಕದನ ವಿರಾಮಕ್ಕೆ ಗೋಗರೆದ ಪರಿಣಾಮ ನಮ್ಮ ವಿದೇಶಾಂಗ ಸಚಿವಾಲಯ, ಪ್ರಧಾನಿ ನರೇಂದ್ರ ಮೋದಿ ಅವರು ಯುದ್ಧ ನಿಲ್ಲಿಸುವುದಕ್ಕೆ ಸಮ್ಮತಿಸಿದ್ದಾರೆ. ಆದರೆ, ಕದನ ವಿರಾಮವನ್ನು ತಾನೇ ಘೋಷಿಸಿದ್ದು ಎಂದು ಟ್ರಂಪ್ ಪ್ರಪಂಚಕ್ಕೇ ಸುಳ್ಳು ಹೇಳಿದ್ದಾರೆ. ಅದೇ ರೀತಿ ಸಿಎಂ ಕೂಡ ರಾಜ್ಯದ ಖಜಾನೆ ತುಂಬಿ ತುಳುಕುತ್ತಿದೆ. ಅಭಿವೃದ್ಧಿ ಮಹಾಪೂರವೇ ಹರಿದಿದೆ ಎಂದು ಸುಳ್ಳು ಹೇಳುತ್ತಿದ್ದಾರೆ. ಖಜಾನೆ ತುಂಬಿದ್ದರೆ ತಮ್ಮದೇ ಪಕ್ಷದ ಶಾಸಕರಿಗೆ ಕನಿಷ್ಠ 1 ಕೋಟಿ ರೂ. ಅನುದಾನ ಕೊಡುವುದಕ್ಕೂ ಯಾಕೆ 2 ವರ್ಷ ಕಾಯಬೇಕಿತ್ತು? ರಾಜ್ಯಾದ್ಯಂತ ರಸ್ತೆಗಳ ತುಂಬ ಗುಂಡಿಗಳು ಬಿದ್ದಿವೆ. ಹಿಡಿ ಮಣ್ಣು ಕಂಡಿಲ್ಲ,'' ಎಂದು ಟೀಕಿಸಿದರು.

**ಇಬ್ರಾಹಿಂ ಹೇಳಿಕೆ ಬಗ್ಗೆ ನನಗೆ ಗೊತ್ತಿಲ್ಲ. ಇಬ್ರಾಹಿಂ ನಮ್ಮ ಪಕ್ಷದಲ್ಲಿ ಇಲ್ಲ. ಆ ಸಂದರ್ಭದಲ್ಲಿ ಇಬ್ರಾಹಿಂ ನನ್ನ ಪರವಾಗಿ ಕೆಲಸ ಮಾಡಿದ್ದರು. ಮತ ಖರೀದಿ ಮಾಡಿದ್ದರು ಎಂಬುದು ನನಗೆ ಹೊಸ ವಿಚಾರ. ಈ ಬಗ್ಗೆ ನಾನು ಕೇಳೇ ಇರಲಿಲ್ಲ. ನಾನು ಬಾದಾಮಿಗೆ ಹೋಗಿದ್ದು ಎರಡು ದಿನ ಮಾತ್ರ. ಹಾಗಾದರೆ ತಮಗೆ ಗೊತ್ತಿಲ್ಲದೆ ಖರೀದಿಯಾಗಿದ್ಯಾ? ಎಂಬ ಪ್ರಶ್ನೆಗೆ. ಆ ವಿಚಾರ ಗೊತ್ತಿಲ್ಲ ಎಂದ ಸಿಎಂ ಸಿದ್ದರಾಮಯ್ಯ ಹೇಳಿದರು.**

### ಇಬ್ರಾಹಿಂ ಹೇಳಿಕೆ ಬಗ್ಗೆ ಗೊತ್ತಿಲ್ಲ

**ಹಿಂದಿನ ಚುನಾವಣೆಯಲ್ಲಿ ಬಾದಾಮಿಯಲ್ಲಿ ಸಿದ್ದರಾಮಯ್ಯ ಸೋಲುವ ಹಂತದಲ್ಲಿದ್ದರು. ಆಗ ಅವರು ಮತ್ತು ಮಾಜಿ ಶಾಸಕ ಬಿ.ಬಿ. ಚಿಮ್ಮನಕಟ್ಟಿ ಸೇರಿ ಸಾಲ ಮಾಡಿ 3000 ಮತಗಳನ್ನು ಖರೀದಿಸಿದ್ದರು. ಕೌಂಟಿಂಗ್ ದಿನ ಸಿದ್ದರಾಮಯ್ಯ ಸೋಲುವ ಭಯದಲ್ಲಿದ್ದರು. ಆಗ ನಾನು ಮ್ಯಾನೇಜ್ ಮಾಡಿದ್ದೇನೆ, 800-1000 ಚಿಕ್ಕ ಅಂತರದಲ್ಲಿ ಗೆಲ್ಲುತ್ತೀರಿ ಎಂದು ಹೇಳಿದ್ದೆ. ಆರು ತಿಂಗಳ ನಂತರ ಸಿದ್ದರಾಮಯ್ಯ ಆ ಸಾಲವನ್ನು ವಾಪಸ್ ಕೊಟ್ಟರು ಎಂದು ಇಬ್ರಾಹಿಂ ಹೇಳಿದರು.**

# ಆ. 13ರಂದು ಡಿ.ಸಿ ಕಚೇರಿ ಎದುರು ಪ್ರತಿಭಟನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ



ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ಖಂಡಿಸಿ ಆ.13ರಂದು ಆಲ್ ಇಂಡಿಯಾ ಬಹುಜನ ಸಮಾಜ ಪಕ್ಷ ಹಾಗು ಪ್ರಗತಿ ಪರ ಸಂಘಟನೆಗಳ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಕೆಡಿಎಸ್‌ಎಸ್ ರಾಜ್ಯ ಸಂಚಾಲಕ ವಿಜಯ ನರಸಿಂಹ ತಿಳಿಸಿದರು.

ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಪರಿಶಿಷ್ಟರ ಮೇಲೆ ನಿರಂತರವಾಗಿ ದೌರ್ಜನ್ಯ ನಡೆಯುತ್ತಿದೆ. ಈ ಕುರಿತು ಧ್ವನಿ ಎತ್ತುವವರ ವಿರುದ್ಧ ಪ್ರಕರಣ ದಾಖಲಿಸಲು ಮುಂದಾಗುತ್ತಾರೆ.

**ದಲಿತ ಸಂಘರ್ಷ ಸಮಿತಿ ಮುಖಂಡರ ಆರೋಪ**


ಜಿಲ್ಲಾಡಳಿತ, ಜಿಲ್ಲಾ ಉಸ್ತುವಾರಿ ಸಚಿವರು ಸಂವಿಧಾನದ ಆಶಯಗಳನ್ನು ಗಾಳಿಗೆ ತೂರಿದ್ದಾರೆ. ಜಿಲ್ಲೆಯಲ್ಲಿ ಅಪರಾಧಿಗಳಿಗೆ ನೀಡುವ ಶಿಕ್ಷೆಯ ಪ್ರಮಾಣವು ಬಹಳಷ್ಟು ಕುಸಿಯುತ್ತಿದೆ ಎಂದು ಆರೋಪಿಸಿದರು. ಚಿಂತಾಮಣಿಯಲ್ಲಿ ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಯನ್ನು ರಾತ್ರೋರಾತ್ರಿ ತೆರವುಗೊಳಿಸಲಾಗಿದೆ. ಮತ್ತೆ ಅದೇ ಜಾಗದಲ್ಲಿ ಅಂಬೇಡ್ಕರ್ ಪುತ್ಥಳಿ ಪ್ರತಿಷ್ಠಾಪಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮತಿ ನೀಡಬೇಕು ಎನ್ನುವುದು ಸೇರಿದಂತೆ 18ಕ್ಕೂ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿ ಆ.13ರಂದು ಜೈ ಭೀಮ್ ಹಾಸ್ಟೆಲ್ ಆವರಣದಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನಾ ಮೆರವಣಿಗೆ ನಡೆಯಲಿದೆ ಎಂದು ವಿವರಿಸಿದರು.

ಮುಖಂಡರಾದ ಮುನಿಕೃಷ್ಣಯ್ಯ, ನಾಗಪ್ಪ, ನಾರಾಯಣಸ್ವಾಮಿ, ಕವಾಲಿ ವೆಂಕಟರವಣಪ್ಪ, ರಮಣ್ ಅಕೇಶ್, ಸುರೇಶ್, ನಂದೀಶ್, ಮಂಜು, ನವೀನ್ ಗೋಷ್ಠಿಯಲ್ಲಿ ಪಾಲ್ಗೊಂಡಿದ್ದರು.

**ಸಮಿತಿ ರಾಜ್ಯ ಸಂಚಾಲಕ ಬಾಲಕುಂಟಹಳ್ಳಿ ಗಂಗಾಧರಪ್ಪ ಮಾತನಾಡಿ, ಕಳೆದ ಚುನಾವಣೆಯಲ್ಲಿ ಪರಿಶಿಷ್ಟರು ಕಾಂಗ್ರೆಸ್‌ಗೆ ಸಂಪೂರ್ಣ ಬೆಂಬಲ ನೀಡಿದ್ದರೂ ದಲಿತರ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಗಟ್ಟುವಲ್ಲಿ ಸರ್ಕಾರ ವಿಫಲವಾಗಿದೆ. ದಲಿತ ಮುಖಂಡರ ಮೇಲೆ ರೌಡಿಪಟ್ಟಿ ತೆರೆಯಲಾಗುತ್ತಿದೆ. ಇಂತಹ ಪ್ರಕರಣಗಳಿಗೆ ಕಡಿವಾಣ ಹಾಕದಿದ್ದಲ್ಲಿ ಮುಂದಿನ ದಿನಗಳಲ್ಲಿ ಸರ್ಕಾರಕ್ಕೆ ಬಿಸಿ ಮುಟ್ಟಿಸಲಾಗುವುದು ಎಂದರು.**

# ಅನ್ಯ ಉದ್ದೇಶಕ್ಕೆ ಪರಿಶಿಷ್ಟರ ಅನುದಾನ-ಆಕ್ರೋಶ

• ಉದಯವಾಹಿನಿ, ಕೋಲಾರ



ಉದಯವಾಹಿನಿ ಚಿತ್ರ

ಪರಿಶಿಷ್ಟರ ಹಣ ಪರಿಶಿಷ್ಟರಿಗೆ ಮಾತ್ರ ಸೇರಬೇಕೆಂದು ರಾಜ್ಯ ಸರ್ಕಾರ ಜಾರಿ ಮಾಡಿರುವ ಎಸ್‌ಸಿಎಸ್‌ಪಿ, ಟಿಎಸ್‌ಪಿ-2013 ರ ಕಾಯ್ದೆಯನ್ನು ಸಮರ್ಪಕ ಜಾರಿಗೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ. ಕೃಷ್ಣಪ್ಪ ಸ್ಥಾಪಿತ ಸಂಘಟನೆ ಕಾರ್ಯಕರ್ತರು ಜಿಲ್ಲಾಡಳಿತ ಭವನ ಮುಂದೆ ಪ್ರತಿಭಟನೆ ನಡೆಸಿದರು. ಪರಿಶಿಷ್ಟರ ಹಣ ಪರಿಶಿಷ್ಟರಿಗಾಗಿ ಮಾತ್ರ ಎನ್ನುವ ಘೋಷಣೆ ಕೂಗಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ರವಾನಿಸಿದರು.

ಪ್ರತಿಭಟನೆ ಉದ್ದೇಶಿಸಿ ಸಂಘಟನೆಯ ರಾಜ್ಯ ಸಂಘಟನಾ ಸಂಚಾಲಕ ಸೂಲಿಕುಂಟೆ ರಮೇಶ್ ಮಾತನಾಡಿ, 'ರಾಜ್ಯ ಸರ್ಕಾರ ಕಲಂ 7ಸಿ ರದ್ದುಪಡಿಸಿ ವಿವಿಧ ಇಲಾಖೆಗಳ ಮೂಲಕ ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟರ ಅನುದಾನ ಬಳಸುವುದನ್ನು ತಕ್ಷಣ ತಡೆ ಹಿಡಿಯಬೇಕು' ಎಂದು ಒತ್ತಾಯಿಸಿದರು. ಎಸ್‌ಸಿಎಸ್‌ಪಿ, ಟಿಎಸ್‌ಪಿ-2013 ರ ಕಾಯ್ದೆಯನ್ನು ಪರಿಶಿಷ್ಟರು ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿ ಅವಕಾಶಗಳನ್ನು ಶಾಸನಬದ್ಧವಾಗಿ ಹೊಂದಲು ರಾಜ್ಯ ಸರ್ಕಾರ ರೂಪಿಸಿದೆ. ಈ ಕಾಯ್ದೆಯ ಕಲಂ 73 ಮತ್ತು 7ಸಿ ರಲ್ಲಿ ಕಾಯ್ದೆಯಡಿ ನಿಗದಿಪಡಿಸಿದ ಅನುದಾನವನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಂಡು ಪರಿಶಿಷ್ಟರನ್ನು ಸರ್ಕಾರ ವಂಚಿಸುತ್ತಿದೆ ಎಂದು ದೂರಿದರು. ಸಂಘಟನೆಯ ಜಿಲ್ಲಾ ಸಂಚಾಲಕ ನಾಗನಾಳ ಮುನಿಯಪ್ಪ ಮಾತನಾಡಿ, 'ಅನ್ಯ ಕಾರ್ಯಗಳಿಗೆ ಬಳಸಿರುವ ಹಣವನ್ನು ವಾಪಸ್ ಪಡೆದು ಪರಿಶಿಷ್ಟ ಅಭಿವೃದ್ಧಿಗಾಗಿ ಉಪಯೋಗಿಸಬೇಕು.

38 ಇಲಾಖೆಗಳಲ್ಲಿರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಕಾಲಕಾಲಕ್ಕೆ ತುಂಬಬೇಕು. ಪರಿಶಿಷ್ಟರ ಅನುದಾನವನ್ನು ಬಳಕೆ ಮಾಡದೆ ಸರ್ಕಾರಕ್ಕೆ ವಾಪಸ್ ಕಳುಹಿಸುವ ಮತ್ತು ಅನ್ಯ ಕಾರ್ಯಗಳಿಗೆ ಬಳಸುವ ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಮುಖ್ಯಸ್ಥರ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು' ಎಂದು ಆಗ್ರಹಿಸಿದರು.

ಸಂಘಟನೆ ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ಮಾತನಾಡಿ, 2023 ರ ಚುನಾವಣೆಯಲ್ಲಿ ಹಿಂದಿನ ಬಿಜೆಪಿ ಸರ್ಕಾರ ದಲಿತ ವಿರೋಧಿ ಧೋರಣೆಯನ್ನು ಅನುಸರಿಸುತ್ತಿದ್ದ ಹಿನ್ನೆಲೆಯಲ್ಲಿ ಬಹುತೇಕ ಎಲ್ಲಾ ಒಳಮೀಸಲಾತಿ ಹೋರಾಟಗಾರರು ಕಾಂಗ್ರೆಸ್ ಬೆಂಬಲಿಸಿದ ಕಾರಣ ಸರ್ಕಾರ ರಚನೆಯಾಗಿರುವುದನ್ನು ಮರೆಯಬಾರದು ಎಂದರು.

# ಮನೆಗಳಿಗೆ ನುಗ್ಗಿದ ಚರಂಡಿ ನೀರು

• ಉದಯವಾಹಿನಿ, ಶ್ರೀನಿವಾಸಪುರ



ಉದಯವಾಹಿನಿ ಚಿತ್ರ

ಪಟ್ಟಣದಲ್ಲಿ ಸುರಿದ ಮಳೆಯಿಂದಾಗಿ ಅಂಬೇಡ್ಕರ್ ಪಾಳ್ಯ, ಗಫಾರ್ ಖಾನ್ ಮೊಹಲ್ಲಾ ಬಡಾವಣೆಯಲ್ಲಿನ ಚರಂಡಿ ನೀರು ಉಕ್ಕಿ ರಸ್ತೆಗೆ ಹರಿಯುತ್ತಿದೆ. ತಗ್ಗು ಪ್ರದೇಶದ ಮನೆಗಳಿಗೆ ನುಗ್ಗಿದೆ. ಮನೆ ಹಾಗೂ ಆವರಣ ಸ್ವಚ್ಛಗೊಳಿಸಿ ವರಮಹಾಲಕ್ಷ್ಮಿ ಹಬ್ಬ ಆಚರಣೆಯಲ್ಲಿ ತೊಡಗಿದ್ದರು. ಸಂಜೆ ಬಿದ್ದ ಮಳೆಯಿಂದ ಮನೆಯೊಳಗೆ ಚರಂಡಿ ನೀರು ನುಗ್ಗಿದೆ. ಇದರಿಂದ ಬಡಾವಣೆಗಳ ನಿವಾಸಿಗಳು ಪುರಸಭೆಯ ಅಧಿಕಾರಿಗಳಿಗೆ ಹಿಡಿಶಾಪ ಹಾಕಿದರು. ರಸ್ತೆಯಲ್ಲಿ ನೀರು ನಿಂತಿದ್ದ ಕಾರಣ ನಾಗರಿಕರು ಹಾಗೂ ದ್ವಿಚಕ್ರ ವಾಹನ ಸವಾರರು ಪರದಾಡಿದರು.

ಕೆಲ ದಿನಗಳ ಹಿಂದೆ ಮಳೆ ಬಂದು ಸಮಸ್ಯೆ ಆಗಿದ್ದಾಗ ಒಂದು ಭಾಗದ ಚರಂಡಿಯನ್ನು ಮಾತ್ರ ಸ್ವಚ್ಛಗೊಳಿಸಿ ಹೋಗಿದ್ದರು. ಬಿದ್ದ ಮಳೆಯಿಂದ ಚರಂಡಿ ನೀರು ರಸ್ತೆ ಉದ್ದಗಲಕ್ಕೂ ಹರಡಿಕೊಂಡು ಮನೆಗಳಿಗೆ ನುಗ್ಗಿತು. ಅಂದೇ ಎಲ್ಲಾ ಭಾಗದಲ್ಲಿ ಸರಿಪಡಿಸಿದ್ದರೆ ಈ ಸಮಸ್ಯೆ ಬರುತ್ತಿರಲಿಲ್ಲ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದರು. ಮಳೆ ಬಂದಾಗಲೆಲ್ಲಾ ಇದೇ ಸಮಸ್ಯೆ ಉಂಟಾಗುತ್ತಿದ್ದು, ಸಮಸ್ಯೆಗೆ ಸ್ಪಂದಿಸುವವರು ಇಲ್ಲ ಎಂದು ಬಡಾವಣೆಯ ನಿವಾಸಿಗಳ ತಮ್ಮ ಅಳಲು ತೋಡಿಕೊಂಡರು. ಕೇಂದ್ರ ಸರ್ಕಾರದಿಂದ ಸ್ವಚ್ಛ ಭಾರತ್ ಯೋಜನೆಗಾಗಿ ಕೋಟ್ಯಂತರ ಅನುದಾನ ಬರುತ್ತದೆ.

ಆದರೆ, ಇದು ಲೆಕ್ಕಕ್ಕೆ ಮಾತ್ರ ಅನ್ವಯಿಸುತ್ತದೆ, ಕೆಲಸ ಏನೂ ನಡೆಯಲ್ಲ ಎಂದು ಆರೋಪಿಸಿದರು. 'ಸ್ವಚ್ಛಭಾರತ್ ಯೋಜನೆಯಲ್ಲಿ ಮೊದಲ ಆದ್ಯತೆಯೇ ಚರಂಡಿ ನೈರ್ಮಲ್ಯ ಕಾಪಾಡುವುದು. ಆದರೆ ಅಧಿಕಾರಿಗಳ ನಿರ್ಲಕ್ಷ್ಯ ಇಲ್ಲಿ ಎದ್ದು ಕಾಣುತ್ತಿದೆ. ಪ್ರತಿ ವರ್ಷವೂ ಮಳೆಗಾಲ ಬಂದರೆ ಪಟ್ಟಣದ ಕೆಲ ಬಡಾವಣೆಗಳು ಚರಂಡಿಯ ನೀರು ರಸ್ತೆಯಲ್ಲಿ ಹರಿಯುತ್ತದೆ. ಇದರೊಂದಿಗೆ ತಗ್ಗು ಪ್ರದೇಶದ ಮನೆಗಳ ನುಗ್ಗಿ ಅವಾಂತರ ಸೃಷ್ಟಿ ಮಾಡುತ್ತದೆ' ಎಂದರು.

# 400 ಎಕರೆ ಖಾಸಗಿ ಬಡಾವಣೆ: ಎಂಡಿಎ ಅಸ್ತು

• ಉದಯವಾಹಿನಿ, ಮೈಸೂರು



ಉದಯವಾಹಿನಿ ಚಿತ್ರ

ನಗರ ಹಾಗೂ ಹೊರವಲಯದಲ್ಲಿ 400 ಎಕರೆಯಲ್ಲಿ ಖಾಸಗಿ ಬಡಾವಣೆಗಳನ್ನು ಅಭಿವೃದ್ಧಿಪಡಿಸಲು ಎಂಡಿಎ (ಮೈಸೂರು ಅಭಿವೃದ್ಧಿ ಪ್ರಾಧಿಕಾರ) ಅನುಮೋದನೆ ನೀಡಿದೆ. ಈ ಪ್ರಾಧಿಕಾರ ರಚನೆಯಾದ ನಂತರ ಇದೇ ಮೊದಲಿಗೆ ಶುಕ್ರವಾರ ನಡೆದ ಸಾಮಾನ್ಯ ಸಭೆಯಲ್ಲಿ ಹಲವು ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಪ್ರಾಧಿಕಾರದ ವ್ಯಾಪ್ತಿಯಲ್ಲಿ ಖಾಲಿ ಇರುವ ನಾಗರಿಕ ಸೌಕರ್ಯ (ಸಿಎ) ನಿವೇಶನಗಳನ್ನು ವಿವಿಧ ಸರ್ಕಾರಿ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟ ಸಂಸ್ಥೆಗಳಿಗೆ ಮಂಜೂರು ಮಾಡಲು ನಿರ್ಧರಿಸಲಾಯಿತು. ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ವಿವಿಧ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಸಮರ್ಪಕವಾಗಿ ಗಣಕೀಕೃತಗೊಳಿಸುವ ಬಗ್ಗೆ ತೀರ್ಮಾನಿಸಲಾಯಿತು. ಪ್ರಾಧಿಕಾರದಿಂದ ಹಂಚಿಕೆ ಮಾಡಿರುವ ಹುಡ್ಕೊ, ಇಡಬ್ಲ್ಯುಎಸ್. ಎಲ್‌ಐಜಿ, ಎಂಐಜಿ, ಎಚ್‌ಐಜಿ ಮತ್ತು ಬ್ಯಾಂಕ್‌ಗಳ ನೆರವಿನ ಮೂಲಕ ಹಂಚಿಕೆ ಮಾಡಿರುವ ಮನೆಗಳ ಮಂಜೂರಾತಿದಾರರು ಮನೆಯ ಬಾಕಿ ಕಂತನ್ನು ಬಡ್ಡಿ ಸಹಿತ ಹಣ ಪಾವತಿಸಿ ಕ್ರಯಪತ್ರ ಪಡೆಯಲು ಗಡುವು ನಿಗದಿಗೊಳಿಸಿ ಕಡೆಯ ಅವಕಾಶ ನೀಡಲು ನಿರ್ಣಯ ಕೈಗೊಳ್ಳಲಾಯಿತು.

2023ರ ಫೆ.8ರಂದು ಅಧಿಸೂಚನೆ ಹೊರಡಿಸಿ, ಪ್ರವರ್ಗ-ಬಿ, ಸಿ, ಡಿ, ಇ, ಎಫ್ ಅಡಿಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರಿಗೆ ಬಿಡಿ ನಿವೇಶನಗಳನ್ನು ಹಂಚಿಕೆ ಮಾಡಲು ಸ್ವೀಕೃತವಾದ ಅರ್ಜಿಗಳ ಸಂಬಂಧ ಉಪ ಸಮಿತಿ ರಚಿಸಲು ನಿರ್ಣಯಿಸಲಾಯಿತು.

2025-26ನೇ ಸಾಲಿನಲ್ಲಿ ತಾಂತ್ರಿಕ ಶಾಖೆಗೆ ಸಂಬಂಧಿಸಿದ ರೂ.244 ಕೋಟಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾಯೋಜನೆ ಮಂಡಿಸಿ ಅನುಮೋದನೆ ಪಡೆಯಲಾಯಿತು.

ಮೈಸೂರು ನಂಜನಗೂಡು ಸ್ಥಳೀಯ ಯೋಜನಾ ಪ್ರದೇಶದ ವಿಸ್ತರಿತ ಪ್ರದೇಶಕ್ಕೆ ಗಡಿಯ ಎಲ್ಲೆಯ ವಿವರಗಳನ್ನು ಸರ್ಕಾರದ ಅನುಮೋದನೆಗೆ ಸಲ್ಲಿಸಲು ಹಾಗೂ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅಮೃತ್ ಯೋಜನೆಯಡಿ ಜಿ.ಐ.ಎಸ್. ಅಡಿಯಲ್ಲಿ ಮಹಾಯೋಜನೆಯನ್ನು ಪರಿಷ್ಕರಿಸಲು ನಿರ್ಣಯಿಸಲಾಯಿತು.

ಪ್ರಾಧಿಕಾರದ ಅಭಿಲೇಖಾಲಯದಲ್ಲಿರುವ ದಾಖಲೆಗಳನ್ನು ಗಣ ಕೀಕೃತಗೊಳಿಸಲು, ಎಂಡಿಎ ಆಸ್ತಿಯನ್ನು ಸಂರಕ್ಷಿಸುವ ಸಂಬಂಧ ಮೊಬೈಲ್ ಆ್ಯಪ್ ಸಿದ್ಧಪಡಿಸುವ ಬಗ್ಗೆ ಚರ್ಚಿಸಿ ನಿರ್ಣಯ ಕೈಗೊಳ್ಳಲಾಯಿತು.

**ಯುದ್ಧ ಅಥವಾ ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮೃತರಾದ ಕ್ಯಾಪ್ಟನ್ ಪ್ರಾಂಜಲ್ ಎ.ವಿ. ಅವರ ಅವಲಂಬಿತರಾದ ಅದಿತಿ ಜಿ.ಮುದ್ದೆಬಿಹಾಳ್ವರ್ ಅವರಿಗೆ ಸೈನಿಕ ಕಲ್ಯಾಣ ಸಮಿತಿ ಮತ್ತು ಪುನರ್ವಸತಿ ಇಲಾಖೆಯಿಂದ ಸ್ವೀಕೃತವಾದ ಪ್ರಸ್ತಾವದಂತೆ ಒಂದು 40X60 ಅಡಿ ಅಳತೆಯ ನಿವೇಶನವನ್ನು ಉಚಿತವಾಗಿ ಮಂಜೂರು ಮಾಡಲು ನಿರ್ಣಯಿಸಲಾಯಿತು ಎಂದು ಪ್ರಾಧಿಕಾರ ತಿಳಿಸಿದೆ.**

# ಗಬ್ಬೆದ್ದು ನಾರುತ್ತಿದೆ ಮಾರುಕಟ್ಟೆ

## ವಾರಕ್ಕೊಮ್ಮೆ ಕಸ ವಿಲೇವಾರಿ: ತಿಂಗಳಿಗೆ ರೂ.7.50 ಲಕ್ಷ ವಹಿವಾಟು

• ಉದಯವಾಹಿನಿ, ತುಮಕೂರು



ಉದಯವಾಹಿನಿ ಚಿತ್ರ

ಪ್ರತಿ ದಿನ ಲಕ್ಷಾಂತರ ರೂಪಾಯಿ ವಹಿವಾಟು ನಡೆಯುವ, ಸರ್ಕಾರಕ್ಕೆ ಕೋಟಿಗಟ್ಟಲೇ ಆದಾಯ ತಂದು ಕೊಡುವ, ಸಾವಿರಾರು ಜನ ಸೇರುವ ಅಂತರಸನಹಳ್ಳಿ ಹೂವು, ಹಣ್ಣು, ತರಕಾರಿ ಮಾರುಕಟ್ಟೆ ಗಬ್ಬೆದ್ದು ನಾರುತ್ತಿದೆ.ಮಾರುಕಟ್ಟೆ 8 ಎಕರೆ ವಿಸ್ತೀರ್ಣ ಹೊಂದಿದ್ದು, ವಿವಿಧ ಬಗೆಯ 336 ಮಳಿಗೆಗಳಿವೆ.

ತಿಂಗಳಿಗೆ ರೂ.6 ಲಕ್ಷದಿಂದ ರೂ.7.50 ಲಕ್ಷ ಬಳಕೆದಾರರ ಶುಲ್ಕ ಸಂಗ್ರಹಿಸಲಾಗುತ್ತಿದೆ. ರಸ್ತೆ, ನೀರು, ನೆರಳು ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ. ಇದಕ್ಕಾಗಿ ವರ್ತಕರಿಂದ ಶುಲ್ಕವನ್ನೂ ಪಡೆಯಲಾಗುತ್ತಿದೆ. ಆದರೆ ಸಮರ್ಪಕ ನಿರ್ವಹಣೆ ಇಲ್ಲದೆ ಮಾರುಕಟ್ಟೆ ಆವರಣ ಸೊರಗಿದೆ. ಬೀದಿ ಬದಿ ವ್ಯಾಪಾರಿಗಳು, ಅಂಗಡಿ ಮಳಿಗೆ ಮಾಲೀಕರು ರಸ್ತೆಯನ್ನು ಆಕ್ರಮಿಸಿಕೊಂಡಿದ್ದಾರೆ.

ಇದರಿಂದ ವಾಹನಗಳ ಸಂಚಾರ ಕಷ್ಟಕರವಾಗುತ್ತಿದೆ. ನಿತ್ಯ ಬೆಳಗಿನ ಜಾವ 4 ಗಂಟೆ ವೇಳೆಗೆ ಮಾರುಕಟ್ಟೆಯಲ್ಲಿ ಚಟುವಟಿಕೆಗಳು ಆರಂಭವಾಗುತ್ತವೆ. ಜಿಲ್ಲೆಯ ವಿವಿಧ ಭಾಗಗಳಿಂದ ರೈತರು, ಜನರು, ವ್ಯಾಪಾರಿಗಳು ಇಲ್ಲಿಗೆ ಭೇಟಿ ನೀಡುತ್ತಾರೆ. ವಾಹನ ಸಂಚಾರಕ್ಕೆ ಸರಿಯಾದ ರಸ್ತೆ ಇಲ್ಲದೆ ಬೆಳ್ಳಂ ಬೆಳಿಗ್ಗೆಯೇ ದಟ್ಟಣೆ ಉಂಟಾಗುತ್ತದೆ. ವಾಹನ ಸವಾರರು ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಮಾರುಕಟ್ಟೆಯಲ್ಲಿ ಪ್ರತಿ ದಿನ ಕಸ ವಿಲೇವಾರಿ ಮಾಡಬೇಕು. ಆದರೆ ನಾಲ್ಕು ದಿನ, ಕೆಲವು ಸಲ ವಾರಕ್ಕೊಮ್ಮೆ ಕಸ ವಿಲೇವಾರಿಯಾಗುತ್ತದೆ. ಮಾರುಕಟ್ಟೆಗೆ ಬಂದವರು ಮೂಗು ಮುಚ್ಚಿಕೊಂಡು ಓಡಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಮಳೆಗಾಲದಲ್ಲಂತೂ ಕಸ ಕೊಳೆತು ನಾರುವುದರಿಂದ ಜನರು ಉಸಿರಾಡಲು ಪ್ರಯಾಸ ಪಡಬೇಕು. ಮಾರುಕಟ್ಟೆ ಗೇಟ್‌ನಿಂದ ಹೊರಗಡೆ ಮಹಾನಗರ ಪಾಲಿಕೆ ವ್ಯಾಪ್ತಿಗೆ ಸೇರುತ್ತದೆ. ಪ್ರಾಂಗಣ ಪೂರ್ತಿ ಎಪಿಎಂಸಿ ವ್ಯಾಪ್ತಿಗೆ ಒಳಪಡುತ್ತದೆ. ಟೆಂಡರ್ ಪಡೆದ ಸಂಸ್ಥೆಯವರು ಪ್ರತಿ ದಿನ ಕಸ ವಿಲೇವಾರಿ ಮಾಡಬೇಕು. ಆದರೆ, ಒಳ ಮತ್ತು ಹೊರಗಡೆ ಸ್ವಚ್ಛತೆಗೆ ಆದ್ಯತೆ ನೀಡಿಲ್ಲ.

ಚರಂಡಿ ವ್ಯವಸ್ಥೆ ಕಲ್ಪಿಸಿದ್ದು, ಕೆಲಸ ಅರ್ಧಂಬರ್ಧ ಆಗಿದೆ. ನೀರು ಸರಾಗವಾಗಿ ಹರಿದು ಹೋಗುತ್ತಿಲ್ಲ. ಮಳೆಗಾಲದಲ್ಲಿ ಇದು ಮತ್ತಷ್ಟು ತೀವ್ರವಾಗುತ್ತದೆ. ನೀರು ನಿಂತಲ್ಲಿಯೇ ನಿಂತು ಗಬ್ಬು ವಾಸನೆ ಬೀರುತ್ತದೆ. ಎಪಿಎಂಸಿ ಅಧಿಕಾರಿಗಳು ಮಾತ್ರ ಇತ್ತ ತಿರುಗಿಯೂ ನೋಡುತ್ತಿಲ್ಲ.

**ಪೊಲೀಸ್ ಗಸ್ತು ಬರಲ್ಲ:** ಮಾರುಕಟ್ಟೆ ಪ್ರಾಂಗಣದಲ್ಲಿ ಜೇಬು ಕಳವು ಪ್ರಕರಣಗಳು ಸಾಮಾನ್ಯವಾಗಿದ್ದು, ಪೊಲೀಸ್ ಅಪರೂಪವಾಗಿದೆ. ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಬೀಳುತ್ತಿಲ್ಲ. ಎಷ್ಟೇ ವಾಹನ ದಟ್ಟಣೆ ಇದ್ದರೂ ಯಾರೊಬ್ಬರೂ ಇತ್ತ ಸುಳಿಯುವುದಿಲ್ಲ. ಹಬ್ಬ, ಹುಣ್ಣಿಮೆಗೊಮ್ಮೆ ಪೊಲೀಸರು ಬಂದು ಹೋಗುತ್ತಾರೆ. ವರ್ಷಕ್ಕೆ ಎರಡು ಸಲ ಮಾರುಕಟ್ಟೆಗೆ ಬಂದರೆ ಹೆಚ್ಚು. ಒಂದು ರೀತಿಯಲ್ಲಿ ಅಪರೂಪದ ಅತಿಥಿಗಳಾಗಿದ್ದಾರೆ' ಎಂದು ವರ್ತಕ ಚಂದ್ರಪ್ಪ ಅಸಮಾಧಾನ ವ್ಯಕ್ತಪಡಿಸಿದರು.

**ಸರ್ವೀಸ್ ರಸ್ತೆಯಲ್ಲಿ ವಾಹನ ನಿಲುಗಡೆ**

ಮಾರುಕಟ್ಟೆಗೆ ಪ್ರತಿ ದಿನ 800ರಿಂದ 1 ಸಾವಿರ ಜನ ಭೇಟಿ ನೀಡುತ್ತಾರೆ. ಹಬ್ಬ ಹರಿದಿನಗಳಲ್ಲಿ ಜನ ಸಂದಣಿ ಹೆಚ್ಚಿರುತ್ತದೆ. ಇದುವರೆಗೆ ವಾಹನ ನಿಲುಗಡೆಗೆ ಸರಿಯಾದ ಜಾಗವೇ ಇಲ್ಲ. ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಇದೀಗ ಮಹಾನಗರ ಪಾಲಿಕೆ ಮುಂದಾಗಿದೆ. ಶಿರಾ ಗೇಟ್ ಕಡೆಯಿಂದ ಕೆಎಸ್‌ಆರ್‌ಟಿಸಿ ಡಿಪೊ ವರೆಗಿನ ಸರ್ವೀಸ್ ರಸ್ತೆಯಲ್ಲಿ ವಾಹನ ನಿಲುಗಡೆಗೆ ಅವಕಾಶ ಕಲ್ಪಿಸಲಾಗುತ್ತಿದೆ. ಶೀಟ್ ಅಳವಡಿಸಿ ಬೈಕ್ ನಿಲ್ಲಿಸಲು ಅನುಕೂಲವಾಗುವಂತೆ ಯೋಜನೆ ರೂಪಿಸಲಾಗಿದೆ.

ಮುಂದಿನ ದಿನಗಳಲ್ಲಿ ಇದು ಕಾರ್ಯರೂಪಕ್ಕೆ ಬರಲಿದೆ. ಮಾರುಕಟ್ಟೆಯಲ್ಲಿ ಮೇಲು ಚಾವಣಿ ಅಳವಡಿಸಲಾಗುವುದು' ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಈಚೆಗೆ ಭರವಸೆ ನೀಡಿದ್ದರು. ಕಾರ್ಯಕ್ರಮದ ನಿಮಿತ್ತ ಮಾರುಕಟ್ಟೆಗೆ ತೆರಳಿದ್ದ ಅವರಿಗೆ ವರ್ತಕರು ಗ್ರಾಹಕರು ಈ ಬಗ್ಗೆ ಮನವಿ ಮಾಡಿದ್ದರು. ಇದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದರು. ಮೇಲು ಚಾವಣಿ ಮಾಡಿದರೆ ಮಳೆ ಬಿಸಿಲಿಗೆ ತರಕಾರಿ ಸೊಪ್ಪು ಹಣ್ಣು ಹಾಳಾಗುವುದು ತಪ್ಪುತ್ತದೆ ಎಂಬುದು ವರ್ತಕರ ಅಭಿಪ್ರಾಯವಾಗಿದೆ.

### ಹರಾಜು ಕಟ್ಟೆಯ ಅವಸ್ಥೆ

**ಮಾರುಕಟ್ಟೆ ಆವರಣದಲ್ಲಿರುವ ಹರಾಜು ಕಟ್ಟೆ ಈಗ ಹಂದಿ ದನಗಳ ವಾಸಸ್ಥಾನವಾಗಿ ಬದಲಾಗಿದೆ. ಬೀದಿ ಬದಿ ವ್ಯಾಪಾರಿಗಳಿಗೆ ಒಂದು ನೆಲೆ ಕಲ್ಪಿಸುವ ಉದ್ದೇಶದಿಂದ 10 ವರ್ಷಗಳ ಹಿಂದೆ ಕಟ್ಟೆ ನಿರ್ಮಿಸಲಾಗಿತ್ತು. ಇದನ್ನು ಈಗ ಯಾರೂ ಅಷ್ಟಾಗಿ ಬಳಸುತ್ತಿಲ್ಲ. ದನ ಹಂದಿಗಳ ಶೆಡ್ ಆಗಿದೆ. ಕೋಟ್ಯಂತರ ರೂಪಾಯಿ ವ್ಯಯಿಸಿ ನಿರ್ಮಿಸಿದ ಕಟ್ಟೆ ಉಪಯೋಗಕ್ಕೆ ಬಾರದಂತಾಗಿದೆ. ಇದರ ಪಕ್ಕದಲ್ಲಿಯೇ ಕೊಳೆತ ಹಣ್ಣು ತರಕಾರಿ ಸೊಪ್ಪು ಸುರಿಯುತ್ತಿದ್ದಾರೆ. ಇಡೀ ಮಾರುಕಟ್ಟೆ ಕಸ ಇಲ್ಲಿಯೇ ಸಂಗ್ರಹವಾಗುತ್ತಿದೆ.**

# ಕೆಲಸಕ್ಕೆ ಜನರ ಅಲೆಸಿದರೆ ಗಂಭೀರ ಪರಿಣಾಮ ಅಧಿಕಾರಿಗಳಿಗೆ ಲೋಕಾಯುಕ್ತ ಎಸ್ಪಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚನ್ನಪಟ್ಟಣ

ಸಣ್ಣಪುಟ್ಟ ಕೆಲಸ ಕಾರ್ಯಗಳಿಗೆ ಯಾವುದೇ ಇಲಾಖೆ ಅಧಿಕಾರಿಗಳು ಸಾರ್ವಜನಿಕರನ್ನು ಸುಖಾಸುಮ್ಮನೆ ಅಲೆದಾಡಿಸುವ ದೂರು ಕೇಳಿ ಬಂದರೆ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಲೋಕಾಯುಕ್ತ ಎಸ್ಪಿ ಪಿ.ವಿ.ಸ್ನೇಹಾ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ನಗರದ ತಾಲ್ಲೂಕು ಪಂ ಸಭಾಂಗಣದಲ್ಲಿ ಜಿಲ್ಲಾ ಲೋಕಾಯುಕ್ತ ವತಿಯಿಂದ ಹಮ್ಮಿಕೊಂಡಿದ್ದ ಸಾರ್ವಜನಿಕರ ಕುಂದು ಕೊರತೆ ಸಭೆಯಲ್ಲಿ ಮಾತನಾಡಿ, ಸಾರ್ವಜನಿಕರ ಕೆಲಸ ಕಾರ್ಯ ಮಾಡಲು ಯಾವುದೇ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ತಮ್ಮ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕು ಎಂದು ಎಚ್ಚರಿಸಿದರು. ಲೋಕಾಯುಕ್ತಕ್ಕೆ ಸಲ್ಲಿಕೆಯಾಗುವ ಅರ್ಜಿಗಳನ್ನು ಸ್ಥಳದಲ್ಲೇ ಬಗೆಹರಿಸಲು ಆಗುವುದಿಲ್ಲ. ಕಾಲ ಮಿತಿಯಲ್ಲಿ ಬಗೆಹರಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಸಾರ್ವಜನಿಕರು ಸೂಕ್ತವಾದ ದಾಖಲೆ ಇಟ್ಟುಕೊಂಡು ದೂರು ಸಲ್ಲಿಸಬೇಕು. ಬಾಯಿ ಮಾತಿನಲ್ಲಿ ಹೇಳಿದರೆ ಅರ್ಥವಿಲ್ಲ. ಸಿಬ್ಬಂದಿ ಅಥವಾ ಅಧಿಕಾರಿ ಲಂಚಕ್ಕೆ ಒತ್ತಾಯಿಸಿದರೆ ಸೂಕ್ತ ಸಾಕ್ಷಿಯೊಂದಿಗೆ ಅಧಿಕಾರಿಗಳಿಗೆ ಮಾಹಿತಿ ನೀಡಿ ಅಥವಾ ಕಚೇರಿಗೆ ಭೇಟಿ ನೀಡಿ ದೂರು ದಾಖಲಿಸಿ ಎಂದರು. ಲೋಕಾಯುಕ್ತ ಡಿವೈಎಸ್‌ಪಿ.ರಾಜೇಶ್ ಮಾತನಾಡಿ, ಸಾರ್ವಜನಿಕರಿಗೆ ಅಧಿಕಾರಿಗಳು ಸೂಕ್ತವಾದ ಮಾಹಿತಿ ನೀಡುವುದಿಲ್ಲ ಎಂಬ ದೂರುಗಳು ಲೋಕಾಯುಕ್ತಕ್ಕೆ ಹೆಚ್ಚಾಗಿ ಬರುತ್ತಿವೆ. ಅಧಿಕಾರಿಗಳು ಸಾರ್ವಜನಿಕರು ಕೇಳುವ ಮಾಹಿತಿ ನೀಡಬೇಕು. ಎಲ್ಲಾ ಸರ್ಕಾರಿ ಕಚೇರಿಯಲ್ಲೂ ಸಾರ್ವಜನಿಕರಿಗೆ ಅಧಿಕಾರಿಗಳ ದೂರವಾಣಿ ಸಂಖ್ಯೆ ಸಹಿತ ಮಾಹಿತಿ ನಾಮಫಲಕ ಹಾಕಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ 20 ಅರ್ಜಿ ಸಲ್ಲಿಕೆಯಾದವು. ನಗರದ ಕೊತ್ತನಹಳ್ಳಿ ಕೆರೆ ಜಮೀನಿನಲ್ಲಿ ಖಾಸಗಿ ರಸ್ತೆ ನಿರ್ಮಾಣ ಮಾಡುತ್ತಿದ್ದರೂ ಅಧಿಕಾರಿಗಳು ಈ ಬಗ್ಗೆ ಗಮನಹರಿಸುತ್ತಿಲ್ಲ ಎಂದು ಅಪ್ಪಗೆರೆ ಪ್ರಸಾದ್ ದೂರು ನೀಡಿದರು. ದಲಿತ ಸಮುದಾಯದ ಮುಖಂಡರಾದ ಮತ್ತೀಕೆರೆ ಹನುಮಂತಯ್ಯ, ಶ್ರೀನಿವಾಸ ಅವರು ತಹಶೀಲ್ದಾರ್ ಪೊಲೀಸ್ ಇಲಾಖೆ ವತಿಯಿಂದ ದಲಿತರ ಕುಂದು ಕೊರತೆ ಸಭೆ ಮಾಡುತ್ತಿಲ್ಲ ಎಂದು ದೂರು ಸಲ್ಲಿಸಿದರು.

# ಮಿನಿ ನ್ಯೂಸ್

## ಹಳೆ ದ್ವೇಷ ಮಚ್ಚಿನಿಂದ ಹಲ್ಲೆ; ಆರು ಮಂದಿ ವಿರುದ್ಧ ದೂರು

• ಉದಯವಾಹಿನಿ, ಕನಕಪುರ

ಹಳೆ ದ್ವೇಷದ ಹಿನ್ನೆಲೆಯಲ್ಲಿ ಮೂವರ ಮೇಲೆ ಆರು ಮಂದಿ ಹಲ್ಲೆ ಮಾಡಿರುವ ಆರೋಪದ ಮೇಲೆ ಸಾತನೂರು ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ದೊಡ್ಡಾಲಹಳ್ಳಿ ಗ್ರಾಮದ ಶಿವು, ಅವರ ಸಹೋದರ ಸಿದ್ದೇಶ, ಮಾವ ಚಿಕ್ಕರಾಜು ಹಲ್ಲೆಗೊಳಗಾದವರು. ಅದೇ ಗ್ರಾಮದ ನಾರಾಯಣ ಅಲಿಯಾಸ್ ಪೋಟ್ಟೆ. ಅವರ ಮಗ ದರ್ಶನ್, ಗ್ರಾಮದ ರೇಣುಕಮ್ಮ, ಮುತ್ತುರಾಜು, ಅರ್ಜುನ್, ನರಸಯ್ಯ ವಿರುದ್ಧ ದೂರು ದಾಖಲಾಗಿದೆ.

ಆಗಸ್ಟ್ 3 ರಂದು ರಾತ್ರಿ 8ರ ಸಮಯದಲ್ಲಿ ಹಲ್ಲೆಗೊಳಗಾದ ಶಿವು ಅವರ ಅಜ್ಜಿ ಮನೆಗೆ ಹೋಗಿ ನಡೆದುಕೊಂಡು ಬರುತ್ತಿದ್ದಾಗ ಹಳೆ ದ್ವೇಷದಿಂದ ನಾರಾಯಣ ಅಲಿಯಾಸ್ ಪೊಟ್ಟೆ ದ್ವಿಚಕ್ರ ವಾಹನದಿಂದ ಬಂದು ಶಿವು ಅವರಿಗೆ ಗುದ್ದಿ ಕೆಳಗೆ ಬೀಳಿಸಿ ಕಬ್ಬಿಣದ ರಾಡಿನಿಂದ ಹಲ್ಲೆ ಮಾಡಿ ಕೊಲೆ ಮಾಡಲು ಯತ್ನಿಸಿದರು ಎಂದು ಶಿವು ದೂರಿನಲ್ಲಿ ಆರೋಪಿಸಿದ್ದಾರೆ. ನನ್ನನ್ನು ರಕ್ಷಣೆ ಮಾಡಲು ಬಂದ ನಮ್ಮ ತಾತ, ಅಜ್ಜಿಗೂ ಆರೋಪಿಗಳು ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿದ್ದಾರೆ. ನನ್ನ ತಮ್ಮ ಸಿದ್ದೇಶನಿಗೆ ಆರೋಪಿ ದರ್ಶನ್ ಮಚ್ಚಿನಿಂದ ಹಲ್ಲೆ ಮಾಡಿದ್ದಾನೆ.

## ಮತಪಟ್ಟಿ ಸಿದ್ಧವಾಗಿದ್ದು ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇದ್ದಾಗಲೇ

• ಉದಯವಾಹಿನಿ, ತುಮಕೂರು

ಲೋಕಸಭೆ ಚುನಾವಣೆಯಲ್ಲಿ ಮತ ಕಳವು ನಡೆದಿದೆ. ಆದರೆ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಇದ್ದಾಗಲೇ ಮತದಾರರ ಪಟ್ಟಿ ಸಿದ್ಧಪಡಿಸಲಾಗಿದೆ. ಆಗ ಎಲ್ಲರು ಕಣ್ಣುಮುಚ್ಚಿ ಕುಳಿತಿದ್ದರೇ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಪ್ರಶ್ನಿಸಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮತ ಕಳವಿನ ವಿಚಾರ ಮಾತನಾಡಲು ಹೋದರೆ ಮಾತನಾಡಬೇಕಾಗುತ್ತದೆ. ಅದು ಬೇರೆ ಬೇರೆ ಆಗುತ್ತದೆ. ಲೋಕಸಭೆ ಚುನಾವಣೆ ನಡೆದದ್ದು, ಮತಪಟ್ಟಿ ಸಿದ್ಧಪಡಿಸಿದ್ದು, ನಮ್ಮ ಸರ್ಕಾರದ ಅವಧಿಯಲ್ಲೇ. ಎಲ್ಲರೂ ಆಗ ಕಣ್ಣು ಮುಚ್ಚಿಕೊಂಡು ಕುಳಿತಿದ್ದರು' ಎಂದರು.

ಇಷ್ಟೆಲ್ಲ ಅಕ್ರಮಗಳು ನಡೆಯುತ್ತಿದ್ದರೂ ನೋಡಿಕೊಂಡು ಸುಮ್ಮನೆ ಇದ್ದೇವಲ್ಲ ಎಂಬ ಬಗ್ಗೆ ನಾಚಿಕೆ ಆಗಬೇಕು. ನಮ್ಮ ಕಣ್ಣು ಮುಂದೆ ಅಕ್ರಮಗಳು ನಡೆದಿರುವುದನ್ನು ನೋಡಿದರೆ ನಮಗೆ ಅವಮಾನ ಆಗಬೇಕು. ಆಗ ಸುಮ್ಮನೆ ಇದ್ದು, ಈಗ ಹೇಳುತ್ತಿದ್ದೇವೆ. ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಮುಂದೆ ಎಚ್ಚರಿಕೆಯಿಂದ ಇರುತ್ತೇವೆ' ಎಂದು ತಿಳಿಸಿದರು. ಪರಮೇಶ್ವರ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು' ಎಂದು ವಿವಿಧ ಮಠಾಧೀಶರ ಹೇಳಿಕೆಗೆ ಪ್ರತಿಕ್ರಿಯಿಸಿ, ಸ್ವಾಮೀಜಿಗಳು ಹೇಳಿದಂತೆ ನಡೆಯುವಂತಿದ್ದರೆ ರಾಜಕಾರಣಿಗಳು ಏಕೆ ಇರಬೇಕು. ಎಲ್ಲಾ ಸ್ವಾಮೀಜಿಗಳು ಸೇರಿಕೊಂಡು ತೀರ್ಮಾನ ಮಾಡಬಹುದಿತ್ತಲ್ಲವೆ ಸ್ವಾಮೀಜಿಗಳು ಹೇಳಿದಂತೆ ರಾಜಕಾರಣ ಮಾಡಲಾಗುತ್ತದೆ ಅದೇ ರೀತಿ ನಡೆಯುತ್ತದೆಯೆ' ಎಂದು ಕುಟುಕಿದರು.

## ಕೊಡಿಗೇನಹಳ್ಳಿ ಭಾಗದಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆ

• ಉದಯವಾಹಿನಿ, ಕೊಡಿಗೇನಹಳ್ಳಿ

ಎರಡು ತಿಂಗಳ ನಂತರ ಈ ಭಾಗದಲ್ಲಿ ಉತ್ತಮ ಮಳೆ ಸುರಿದ ಪರಿಣಾಮ ಸ್ಥಗಿತಗೊಂಡಿದ್ದ ಕೃಷಿ ಚಟುವಟಿಕೆಗೆ ಜೀವ ಬಂದಂತಾಗಿದೆ. ರೈತರು ಉಳುಮೆ ಜತೆಗೆ ಬಿತ್ತನೆಯಲ್ಲಿ ತೊಡಗಿದ್ದಾರೆ. ಈ ಭಾಗ ಮಳೆಯಾಶ್ರಿತ ಪ್ರದೇಶವಾಗಿರುವ ಕಾರಣ ಇಲ್ಲಿ ಮೆಕ್ಕಜೋಳ, ಶೇಂಗಾ, ರಾಗಿ, ಸಿರಿಧಾನ್ಯಗಳ ಜೊತೆಗೆ ಅವರೆ, ಅಲಸಂದಿ, ತೊಗರಿ ಬೆಳೆಯುತ್ತಾರೆ. ಈ ಬಾರಿ ಮುಂಗಾರಿನಲ್ಲಿ ಮಳೆ ಸಕಾಲಕ್ಕೆ ಬಾರದೆ ಎರಡು ತಿಂಗಳ ನಂತರ ಮಳೆ ಬಿದ್ದಿರುವುದರಿಂದ ಈಗಷ್ಟೇ ಬಿತ್ತನೆ ಆರಂಭವಾಗಿದೆ. ಮುಂದೆ ಮುಂಗಾರು ಜೊತೆಗೆ ಹಿಂಗಾರಿನಲ್ಲಿ ಮಳೆಯಾದರೆ ಮಾತ್ರ ಇಲ್ಲಿ ಬೆಳೆ ಕಾಣಬಹುದು ಇಲ್ಲವಾದರೆ ಜಾನುವಾರುಗಳಿಗೆ ಮೇವು ದೊರಕುವುದು ಕಷ್ಟಕರವಾಗಲಿದೆ ಎನ್ನುತ್ತಾರೆ ಇಲ್ಲಿನ ರೈತರು.

**ಕೂಲಿಯಾಳುಗಳಿಗೆ ಬೇಡಿಕೆ:** ಎರಡು ತಿಂಗಳಿನಿಂದ ಮಳೆ ಕೈಕೊಟ್ಟಿದ್ದರಿಂದ ರೈತರು ಅವರ ಜಮೀನುಗಳನ್ನು ಉಳುಮೆ ಮಾಡಿಸಲು ಕೂಡ ಸಾಧ್ಯವಾಗಿರಲಿಲ್ಲ. ಈಗ ಮೂರ್ನಾಲ್ಕು ದಿನಗಳಿಂದ ಉತ್ತಮ ಮಳೆಯಾಗುತ್ತಿರುವ ಕಾರಣ ಉಳುಮೆ, ಬಿತ್ತನೆ ಬೀಜ, ರಸಗೊಬ್ಬರ, ಟ್ರ್ಯಾಕ್ಟರ್ ಮತ್ತು ಕೂಲಿಯಾಳುಗಳಿಗೆ ಬೇಡಿಕೆ ಹೆಚ್ಚಾಗಿದೆ. ಈಗ ಬಿತ್ತನೆ ಮಾಡಿದರೂ ಕೂಡ ಯಾವುದೇ ಆತಂಕಪಡುವ ಅಗತ್ಯವಿಲ್ಲ. ಮುಂದೆ ಮುಂಗಾರಿನ ಜೊತೆಗೆ ಹಿಂಗಾರಿನಲ್ಲಾದರೂ ಉತ್ತಮ ಮಳೆಯಾಗಲಿದೆ ಎನ್ನುವ ಭರವಸೆ ಹವಮಾನ ಇಲಾಖೆ ನೀಡಿರುವುದರಿಂದ ಕೃಷಿ ಚಟುವಟಿಕೆಗಳಲ್ಲಿ ರೈತರು ಧೈರ್ಯವಾಗಿ ತೊಡಗಿಸಿಕೊಳ್ಳಬಹುದು ಎಂದು ಕೃಷಿ ಅಧಿಕಾರಿ ತಿಳಿಸಿದ್ದಾರೆ.

## ಭಾರಿ ಮಳೆ: ರಸ್ತೆಯಲ್ಲಿ ಹರಿದ ನೀರು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುಳಬಾಗಿಲು

ತಾಲ್ಲೂಕಿನಲ್ಲಿ ಬಿದ್ದ ಭಾರೀ ಮಳೆಗೆ ರಸ್ತೆಗಳಲ್ಲಿ ನೀರು ಹರಿಯಿತು. ಬೆಳ್ಳಂ ಬೆಳಿಗ್ಗೆಯೇ ಸುರಿಯಿತು. ಜೊತೆಗೆ ಸಂಜೆ 4 ಗಂಟೆಯಿಂದ 6 ಗಂಟೆವರೆಗೂ ಮಳೆ ಬೀಳುತ್ತಲೇ ಇತ್ತು. ನಂತರ ಜಡಿ ಮಳೆ ಸುರಿಯುತ್ತಿದ್ದು, ಜನ ಜನವಾರುಗಳ ಓಡಾಟಕ್ಕೆ ತೊಂದರೆಯುಂಟಾಯಿತು. ಮಳೆ ನೀರಿನಿಂದ ಸಾಮಿಲ್ ಮುಂಭಾಗದ ರಸ್ತೆ ಸಂಪೂರ್ಣವಾಗಿ ಮುಳುಗಿ ಕುಂಟೆಯಂತಾಗಿತ್ತು. ಮುಖ್ಯ ರಸ್ತೆಯಲ್ಲಿ ಸುಮಾರು ಮೂರು ಅಡಿಗಳಿಗಿಂತಲೂ ಹೆಚ್ಚು ಆಳ ನೀರು ನಿಂತಿದ್ದು, ಸಂಚಾರಕ್ಕೆ ಕಷ್ಟವಾಗಿತ್ತು. ರಾಷ್ಟ್ರೀಯ ಹೆದ್ದಾರಿ 75ರ ಉದ್ದಕ್ಕೂ ಬಸ್ ತಂಗುದಾಣಗಳಲ್ಲಿ ದ್ವಿಚಕ್ರ ವಾಹನ ಸವಾರರು ಆಶ್ರಯ ಪಡೆದರು. ಗ್ರಾಮೀಣ ಭಾಗದಲ್ಲಿ ಮನೆ ಮುಂದೆ ನೀರು ನಿಂತಿದ್ದು, ರಸ್ತೆಗಳಲ್ಲಿ ಕಸ, ಕಡ್ಡಿ ಕೊಚ್ಚಿ ಹೋಗುತ್ತಿದ್ದವು. ನರಸಿಂಹ ತೀರ್ಥ, ವಿರುಪಾಕ್ಷಿ ರಸ್ತೆ, ನಂಗಲಿ, ಎನ್.ವಡ್ಡಹಳ್ಳಿ, ತಾಯಲೂರು ವೃತ್ತಗಳ ಬಳಿಯ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ ನೀರು ನಿಂತು ಕುಂಟಗಳಂತಾಗಿದ್ದವು.

ಅಂತರಾಳದಿಂದ..
EDITORIAL

# ನೈಜ ಭಾರತೀಯತೆಯ ಮಾನದಂಡ; ಸುಪ್ರೀಂ ಅಭಿಪ್ರಾಯ ದುರದೃಷ್ಟಕರ

ಭಾರತಕ್ಕೆ ಸೇರಿದ 2,000 ಚ.ಕಿ.ಮೀ ಭೂಮಿಯನ್ನು ಚೀನಾ ಆಕ್ರಮಿಸಿಕೊಂಡಿದೆ ಎಂದು 'ಭಾರತ್ ಜೋಡೊ' ಯಾತ್ರೆಯ ಸಂದರ್ಭದಲ್ಲಿ ಹೇಳಿಕೆ ನೀಡಿದ್ದ ರಾಹುಲ್ ಗಾಂಧಿ ಅವರ ಮೇಲೆ ಸುಪ್ರೀಂ ಕೋರ್ಟ್ ಮಾಡಿರುವ ಟೀಕೆ-ಟಿಪ್ಪಣಿ ದುರದೃಷ್ಟಕರ. ಓರ್ವ ನೈಜ ಭಾರತೀಯ ಇಂಥ ಹೇಳಿಕೆಗಳನ್ನು ನೀಡುವುದು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ವಿಭಾಗೀಯ ಪೀಠ ಹೇಳಿದೆ. ರಾಹುಲ್ ಗಾಂಧಿ ವಿರುದ್ಧ ನಡೆಯುತ್ತಿರುವ ಮಾನಹಾನಿ ಪ್ರಕರಣಕ್ಕೆ ತಡೆ ನೀಡಲು ನಿರಾಕರಿಸಿರುವ ಅಲಹಾಬಾದ್ ಹೈಕೋರ್ಟ್ ತೀರ್ಪು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ಸಂದರ್ಭದಲ್ಲಿ ನ್ಯಾಯಪೀಠ ಈ ಕಟು ಅಭಿಪ್ರಾಯವನ್ನು ವ್ಯಕ್ತಪಡಿಸಿದೆ. ಭಾರತ ಹಾಗೂ ಚೀನಾ ಸೈನಿಕರ ನಡುವೆ 2020ರಲ್ಲಿ ನಡೆದ ಗಾಲ್ವಾನ್ ವ್ಯಾಲಿ ಸಂಘರ್ಷದ ಸಂದರ್ಭದಲ್ಲಿ ಚೀನಾದಿಂದ ಅತಿಕ್ರಮಣ ನಡೆದಿದೆ ಎಂದು ರಾಹುಲ್ ಗಾಂಧಿ ಹೇಳಿದ್ದರು. ಹೀಗೆ ಹೇಳುವ ಮೂಲಕ ಲೋಕಸಭೆಯ ವಿರೋಧ ಪಕ್ಷದ ನಾಯಕ ಸೇನೆಗೆ ಅವಮಾನ ಎಸಗಿದ್ದಾರೆ ಎಂದು ಪ್ರಕರಣ ದಾಖಲಿಸಲಾಗಿದೆ.ಮಾನಹಾನಿ ಪ್ರಕರಣ ಹಾಗೂ ಹೈಕೋರ್ಟ್‌ನಲ್ಲಿ ನಡೆಯುತ್ತಿದ್ದ ವಿಚಾರಣೆಗೆ ತಡೆ ನೀಡಬೇಕೆಂದು ಸಲ್ಲಿಸಿದ್ದ ಮನವಿ, ನ್ಯಾಯಪೀಠದ ಮುಂದಿದ್ದ ವಿಷಯಗಳು. ಪ್ರಕರಣದ ವಿಷಯಗಳಿಗೂ ರಾಹುಲ್ ಗಾಂಧಿ ಅವರ ಭಾರತೀಯತೆಗೂ ಯಾವುದೇ ಸಂಬಂಧ ಇರಲಿಲ್ಲ. ಸಂಸತ್‌ನಲ್ಲಿ ಮಾತನಾಡುವ ಬದಲು ಸಾಮಾಜಿಕ ಮಾಧ್ಯಮದಲ್ಲಿ ಅವರು ಏಕೆ ಮಾತನಾಡಿದರು ಅಥವಾ ಜವಾಬ್ದಾರಿಯುತ ಸ್ಥಾನದಲ್ಲಿರುವ ಲೋಕಸಭೆಯ ವಿರೋಧ ಪಕ್ಷದ ನಾಯಕ ವಿವಾದಕ್ಕೆ ಕಾರಣವಾದ ಸಂಗತಿಯ ಬಗ್ಗೆ ಹೇಗೆ ಮಾತನಾಡ ಬಹುದಿತ್ತು ಎನ್ನುವ ವಿಷಯವೂ ನ್ಯಾಯಪೀಠದ ಮುಂದಿರಲಿಲ್ಲ. ಸುಪ್ರೀಂ ಕೋರ್ಟ್‌ನ ಕಾನೂನಿನ ಬಲವಿಲ್ಲದ ಟೀಕೆ ಟಿಪ್ಪಣಿಯು ಅನಗತ್ಯ ಅಭಿಪ್ರಾಯಗಳನ್ನು ಸೃಷ್ಟಿಸಲು ಆಸ್ಪದ ಕಲ್ಪಿಸುವಂತಿವೆ.

**ನೈಜ ಭಾರತೀಯನೊಬ್ಬ ಹೀಗೆ ಮಾತನಾಡಲು ಸಾಧ್ಯವಿಲ್ಲ ಎನ್ನುವ ನ್ಯಾಯಪೀಠದ ಅಭಿಪ್ರಾಯ, ಹೀಗೆ ಹೇಳಿರುವ ವ್ಯಕ್ತಿ ಭಾರತೀಯನಲ್ಲ ಎಂದು ಸೂಚಿಸುವಂತಿದೆ. ಮಾನಹಾನಿ ಪ್ರಕರಣವೊಂದರ ಸಂದರ್ಭದಲ್ಲಿ ವ್ಯಕ್ತಿಯೊಬ್ಬರ ಭಾರತೀಯತೆ ಅಥವಾ ದೇಶಪ್ರೇಮದ ಬಗ್ಗೆ ನಿರ್ಣಯಿಸುವಂಥ ಮಾತುಗಳನ್ನಾಡುವುದು ನ್ಯಾಯಬದ್ಧ ಎಂದು ಹೇಳಲು ಸಾಧ್ಯವಿಲ್ಲ. ಅದರಲ್ಲೂ, ಆಡಳಿತ ಪಕ್ಷ ಮತ್ತು ಅದರ ಬೆಂಬಲಿಗರು ರಾಹುಲ್ ಗಾಂಧಿ ಅವರ ದೇಶಪ್ರೇಮವನ್ನು ಪ್ರಶ್ನಿಸು ತ್ತಿರುವ ಸಂದರ್ಭದಲ್ಲಿ ಈ ಅಭಿಪ್ರಾಯ ವ್ಯಕ್ತವಾಗಿರುವುದು ಅತ್ಯಂತ ದುರದೃಷ್ಟಕರ.**

ಲೋಕಸಭೆಯ ವಿರೋಧ ಪಕ್ಷದ ನಾಯಕನ ಹೇಳಿಕೆ ಸೇನೆಯ ವಿರುದ್ಧವಾಗಿ ಇರಲಿಲ್ಲ. ಪಾಕಿಸ್ತಾನದ ಬಾಲಾಕೋಟ್ ಮೇಲೆ 2019ರಲ್ಲಿ ನಡೆದ 'ಸರ್ಜಿಕಲ್ ಸ್ಟ್ರೈಕ್ ಬಗ್ಗೆ ಪ್ರಶ್ನೆಗಳು ಎದುರಾಗಿದ್ದವು. 'ಅಪರೇಷನ್ ಸಿಂಧೂರ' ಹಾಗೂ ಬಹುಮುಖ್ಯವಾಗಿ, ಪಾಕಿಸ್ತಾನ ದೊಂದಿಗಿನ ಯುದ್ಧದಲ್ಲಿ ಭಾರತಕ್ಕಾದ ನಷ್ಟದ ಬಗ್ಗೆಯೂ ಪ್ರಶ್ನಿಸಲಾಗಿತ್ತು. ಗಾಲ್ವಾನ್ ಕಣಿವೆಗೆ ಸಂಬಂಧಿಸಿದ ಸಂಘರ್ಷದ ಸಮಯದಲ್ಲಿ ಸರ್ಕಾರದ ನಿಲುವು ಏನಾಗಿತ್ತು ಎನ್ನುವುದರ ಬಗ್ಗೆಯೂ ಪ್ರಶ್ನೆಗಳನ್ನು ಕೇಳಲಾಗಿದೆ. ಇವೆಲ್ಲವೂ ಸರ್ಕಾರವನ್ನು ಕೇಳಿರುವ ಪ್ರಶ್ನೆಗಳೇ ಹೊರತು, ದೇಶದ ಸಶಸ್ತ್ರ ಪಡೆಗಳಿಗೆ ಸಂಬಂಧಿಸಿದವಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಶ್ನಿಸುವ ಹಕ್ಕು ವಿರೋಧ ಪಕ್ಷಗಳಿಗಿದೆ. 'ನೈಜ ಭಾರತೀಯತೆ ಎಂದು ಹೇಳುವ ಮೂಲಕ ಪ್ರಶ್ನೆ ಕೇಳುವುದನ್ನು ಹತ್ತಿಕ್ಕುವ ಪ್ರವೃತ್ತಿ ಸಮರ್ಥನೀಯವಲ್ಲ ಹಾಗೂ ಇವೆಲ್ಲ ನೈಜ ಭಾರತೀಯ ಕೇಳುವಂತಹ ಪ್ರಶ್ನೆಗಳೇ ಆಗಿವೆ. ರಾಹುಲ್ ಗಾಂಧಿ ತಮ್ಮ ಹೇಳಿಕೆಯನ್ನು ಸಂಸತ್ ನಲ್ಲಿ ಏಕೆ ನೀಡಲಿಲ್ಲ ಎಂದು ಕೇಳುವುದು ಕೂಡ ಸರಿಯಲ್ಲ. ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಉನ್ನತ ರಾಷ್ಟ್ರೀಯ ನಾಯಕರು ಸಾಮಾಜಿಕ ಮಾಧ್ಯಮಗಳಲ್ಲಿ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ ಹಾಗೂ ಅದರಿಂದ ಅವರು ಯಾವುದೇ ತೊಂದರೆ ಎದುರಿಸಿಲ್ಲ. ರಾಹುಲ್ ಗಾಂಧಿ ಅವರ ರಕ್ಷಣೆಗೆ ಕೊನೆಗೂ ಒದಗಬೇಕಾದುದು ಅವರ ಸಂಸತ್ ಸದಸ್ಯತ್ವ ಅಥವಾ ಲೋಕಸಭೆಯ ವಿರೋಧ ಪಕ್ಷದ ನಾಯಕ ಸ್ಥಾನವಲ್ಲ: ಈ ದೇಶದ ಪ್ರಜೆಯಾಗಿ ಅವರು ಹೊಂದಿರುವ ಹಕ್ಕು.



# ರಾಮಾಯಣ



## ಭರತನು ಶ್ರೀ ರಾಮನ ಪಾದುಕೆಗಳಿಗೆ ಪಟ್ಟವನ್ನು ಕಟ್ಟಿದ್ದು

• ಹಿಂದಿನ ಸಂಚಿಕೆಯಿಂದ **115 ನೆಯ ಅಧ್ಯಾಯ**

ಆಮೇಲೆ ಭರತನು ಆಯೋಧ್ಯಾಪಟ್ಟಣದಲ್ಲಿ ತಮ್ಮ ತಾಯಂದಿರು ವಾಸವಾಗಿರಬೇಕೆಂದು ಗೊತ್ತು ಮಾಡಿದನು. ತಾನು ಅತ್ಯಂತ ದುಃಖಾಕ್ರಾಂತನಾಗಿ ವಸಿಷ್ಠ ವಾಮದೇವಾದಿ ಗುರುಗಳನ್ನು ಕುರಿತು ಗುರುಗಳಿರಾ,ನಾನು ನಂದಿಗ್ರಾಮಕ್ಕೆ ಹೋಗುತ್ತೇನೆ.ನಾನು ಈ ದುಃಖವನ್ನು ಅಲ್ಲಿಯೇ ಅನುಭವಿಸಿಕೊಂಡಿರುವೆನು. ನಮ್ಮ ತಂದೆಯಾದ ದಶರಥರಾಯನು ಸ್ವಗ ನಾದನು.ನನ್ನ ಜೇಷ್ಠ ಭ್ರಾತೃವಾದ ಶ್ರೀರಾಮನು ವನಕ್ಕೆ ಹೋದನು. ಇನ್ನು ನನಗಿಲ್ಲಿ ಕಾರ್ಯವೇನು ಶ್ರೀರಾಮನು ಬರುವುದನ್ನು ಕಾಯುತ್ತಿರುವೆನು. ಅವನೇ ಅಯೋಧ್ಯೆಗೆ ರಾಜನು ಎಂದು ನುಡಿದನು,ಆ ಮಾತನ್ನು ಕೇಳಿ ಗುರುಗಳು ಭರತ, ನೀನು ಆಡಿದ ಮಾತು ಲೋಕದಲ್ಲಿ ಪ್ರಶಂಸನೀಯವಾದದ್ದು. ನಿನ್ನ ಜೇಷ್ಠ ಭಾತೃವಾದ ಶ್ರೀರಾಮನ ಮೇಲಿನ ಭಕ್ತಿಯಿಂದ ಆತನಿಗೆ ಅನುಕೂಲವಾದ ಮಾತನ್ನು ನುಡಿದೆ. ಯಾವಾಗಲೂ ಹಿರಿಯರಲ್ಲಿ ಅತ್ಯಂತ ಭಕ್ತಿಯುಳ್ಳ, ನಿನ್ನ ಚಾರಿತ್ರವನ್ನು ಯಾರು ತಾನೆ ಮೆಚ್ಚುವುದಿಲ್ಲ? ನೀನು ಮಾಡಿದ ಯೋಚನೆಯು ಸರ್ವೋತ್ಕೃಷ್ಟವಾದುದು ಎಂದು ನುಡಿದರು

ಹೋಗಿ ರಥದಿಂದಿಳಿದನು ಭರತನು ಅವರೆಲ್ಲರೂ ತನ್ನ ಮನಸ್ಸಿನಲ್ಲಿದ್ದಂತೆ ನುಡಿದದ್ದಕ್ಕೆ ಹರ್ಷಪಟ್ಟು ತನ್ನ ಸಾರಥಿಯಾದ ಸುಮಂತ್ರನನ್ನು ಕರೆದು ಶೀಘ್ರದಲ್ಲಿ ರಥವನ್ನು ಮೇರೈಸಲು ಕಟ್ಟುಮಾಡಿದನು. ತನ್ನ ತಾಯಂದಿರೆಲ್ಲರಿಗೂ ನಮಸ್ಕರಿಸಿ ಶತ್ರುಘ್ನ ಸಮೇತನಾಗಿ ರಥವನ್ನೇರಿಕೊಂಡು ನಂದಿಗ್ರಾಮಕ್ಕೆ ತೆರಳಿದನು. ವಸಿಷ್ಠ ವಾಮದೇವಾದಿ ಮುನಿಗಳೂ ಮಂತ್ರಿಗಳೂ ಭರತನ ಹಿಂದೆ ಹೊರಟರು.ಆ ಬಳಿಕ ಚತುರಂಗಬಲಗಳೂ ಪುರಜನರೂ ಹೊರಟರು. ಭರತನು ಶ್ರೀರಾಮನು ಕೊಟ್ಟ ಪಾದುಕೆಗಳನ್ನು ಮುಡಿಯ ಮೇಲೆ ಹೊತ್ತುಕೊಂಡು ಅಣ್ಣನ ಮೇಲೆ ಅತ್ಯಂತ ವಿಶ್ವಾಸವುಳ್ಳವನಾಗಿಯೂ ರಥಾರೂಢನಾಗಿಯೂ ನಂದಿಗ್ರಾಮಕ್ಕೆ ಗುರುಗಳಾದ ವಸಿಷ್ಠ ವಾಮದೇವಾದಿಗಳನ್ನು ನೋಡಿ ಗುರುಗಳಿರಾ, ನನ್ನ ಅಣ್ಣನಾದ ಶ್ರೀರಾಮನು ಈ ರಾಜ್ಯವನ್ನು ನನ್ನಲ್ಲಿ ನ್ಯಾಸವಿಟ್ಟಿರುವನು. ಆತನು ಕೊಟ್ಟ ಪಾದುಕೆಗಳು ರಾಜ್ಯದ ಯೋಗಕ್ಷೇಮವನ್ನು ನೋಡಿಕೊಳ್ಳಲು ಸಮರ್ಥವಾಗಿವೆ ಎಂದು ಹೇಳಿದನು.

ಶ್ರೀರಾಮನು ಕೊಟ್ಟ ಚಿನ್ನದ ಹಾವಿಗೆಗಳನ್ನು ಶಿರಸಾವಹಿಸಿಕೊಂಡು ಅತ್ಯಂತ ದುಃಖ ಯುಕ್ತನಾಗಿ ಮಂತ್ರಿಗಳನ್ನೂ ಪ್ರಧಾನಿಗಳನ್ನೂ ಕರೆದು ಭರತನು ಹೇಳಿದನು: ಎಲೈ ಮಂತ್ರಿಗಳಿರಾ, ಈ ಪಾದುಕೆಗಳ ಮೇಲೆ ಶ್ವೇತಚ್ಛತ್ರವನ್ನು ಹಿಡಿಯಿರಿ. ರಾಜ್ಯಪರಿಪಾಲನ ಮಾಡುವ ಧರ್ಮವು ಇವುಗಳ ಅಧೀನವಾಗಿರಲಿ, ಈ ಪಾದುಕೆಗಳೇ ನನಗೆ ಗುರುವು. ನನ್ನ ಜೇಷ್ಠಭ್ರಾತೃವಾದ ಶ್ರೀರಾಮನು ನನ್ನ ಮೇಲಿನ ದಯೆಯಿಂದ ಇವುಗಳನ್ನು ದಯಪಾಲಿಸಿರುವನು. ನಾನು ಆತನು ಬರುವ ಪರ್ಯಂತ ರಾಜ್ಯಭಾರವನ್ನು ಈ ಪಾದುಕೆಗಳಲ್ಲಿರಿಸಿ ಇವುಗಳನ್ನು ಪರಿಪಾಲಿಸಿಕೊಂಡಿದ್ದು ಆತನು ಬಂದಮೇಲೆ ಆತನ ಪಾದಗಳನ್ನು ಕಂಡು ರಾಜ್ಯಭಾರವನ್ನು ಆತನ ವಶಮಾಡಿ ಆತನ ಸೇವೆಯನ್ನು ಮಾಡಿಕೊಂಡಿರುತ್ತೇನೆ.

ಮುಂದುವರಿಯುವುದು...

# ದೇವರ ಮನೆ, ಪೂಜೆಯ ವಿಷಯಗಳು!

☛ ವಿಶ್ವಾಸ್.ಡಿ.ಗೌಡ



ದೇವರ ಮನೆ, ದೀಪಗಳು, ದೇವರ ಪೂಜಾ ಸಾಮಗ್ರಿಗಳು ಎಷ್ಟು ಶುದ್ಧವಾಗಿರುತ್ತದೋ ಅಷ್ಟೂ ಶುಭಫಲವಿರುತ್ತದೆ..

ದೇವರ ಮನೆಯಲ್ಲಿ ಒಡೆದಿರುವ, ಭಿನ್ನವಾಗಿರುವ ವಿಗ್ರಹಗಳು, ಫೋಟೋಗಳು, ಯಂತ್ರಗಳು ಇಡಬೇಡಿ.. ದೇವರ ಮನೆಯಲ್ಲಿ ಗುಡಿಸೋ ಕಸವನ್ನು ಒಂದು ಬಟ್ಟೆಯಿಂದ ಗುಡಿಸಿದರೆ ತುಂಬಾ ಒಳ್ಳೆಯದು.

ದೇವರ ಮನೆಯನ್ನು ಅರಿಸಿನ ಹಾಕಿದ ನೀರಿನಿಂದ ಶುದ್ಧ ಮಾಡಿ, ಆ ಮನೆಯಲ್ಲಿ ದೈವಕಳೆ ವೃದ್ಧಿಸಿ, ಹಣದ ಸಮಸ್ಯೆ ನಿವಾರಣೆಯಾಗುತ್ತದೆ, ನೆಲ ಒಣಗುವವರೆಗೂ ತುಳಿಯುವ ಹಾಗಿಲ್ಲ..

ದೇವರ ಮನೆಯಲ್ಲಿ ತುಂಬಾ ವಿಗ್ರಹಗಳು ಬೇಡ, ವಿಗ್ರಹಗಳು ಜಾಸ್ತಿಯಾದರೆ ನೈವೇದ್ಯದ ಪ್ರಮಾಣವೂ ಜಾಸ್ತಿ ಮಾಡಬೇಕಾಗುವುದು..


6. ತುಂಬಾ ಎತ್ತರದ ವಿಗ್ರಹಗಳು ಬೇಡ, ಅಕಸ್ಮಾತ್ತಾಗಿ ಇದ್ದರೆ ಪ್ರತಿದಿನ ಒಂದು ಸೇರು ಅಕ್ಕಿಯ ಅನ್ನವನ್ನಾದರೂ ನೈವೇದ್ಯ ಮಾಡಬೇಕಾಗುವುದು..

7. ದೇವರ ವಿಗ್ರಹಗಳನ್ನು ಮಂಗಳವಾರ, ಶನಿವಾರ ಶುಕ್ರವಾರದಂದು ಶುದ್ಧಿ ಮಾಡುವುದು ಬೇಡ..

(ಅನಿವಾರ್ಯ ಪರಿಸ್ಥಿತಿಗಳಲ್ಲಿ, ಗ್ರಹಣ ಕಾಲದಲ್ಲಿ, ಇತ್ಯಾದಿ ಸಮಯದಲ್ಲಿ ಮಾಡಬಹುದು)

8. ಪ್ರತೀ ಅಮಾವಾಸ್ಯೆ ಮತ್ತು ಪೌರ್ಣಮಿಯ ಮರುದಿನ ದೇವರ ವಿಗ್ರಹಗಲಕನ್ನು ಅರಿಸಿನದ ನೀರಿನಿಂದ ಶುದ್ಧ ಮಾಡಿ..

9. ದೇವರ ಪೂಜೆಗೆ ಆಂಜನೇಯ ಸ್ವಾಮಿ ಇರೋ ಘಂಟೆಯನ್ನೇ ಉಪಯೋಗಿಸಿ, ಆಂಜನೇಯ ದೇವರ ಪಾದವನ್ನು ಹಿಡಿದು ಘಂಟೆಬಾರಿಸಬೇಕು.. 10. ದೇವರುಗಳು ಯಾವಾಗಲೂ ಆಹಾರ ಕೇಳುತ್ತಿರುತ್ತವೆ , ದೇವರ ಹತ್ತಿರ ಮಧುಪರ್ಕ ಇರಿಸಿರಿ, ರಾತ್ರಿ ಮಲಗೋಕೆ ಮುಂಚೆ ಅದನ್ನು ಮನೆಯವರೆಲ್ಲಾ ಅಥವಾ ಹಿರಿಯರಾಗಲೀ ಭಕ್ತಿಯಿಂದ ಸೇವಿಸಿ..



11. ದೇವರ ಪೂಜೆ ಮಾಡೋವಾಗ ಆಕಳಿಕೆ ಕೋಪ, ಇವೆಲ್ಲದರಿಂದ ದೂರ ಇರಿ, ಅನಗತ್ಯ ಚಟುವಟಿಕೆಗಳು ಬೇಡ.. 12. ಸಂಧ್ಯಾವಂದನೆ ಮತ್ತು ಸ್ತ್ರೀಯರ ತುಳಸೀ ಪೂಜೆ ಇಲ್ಲದಿದ್ದರೆ ಯಾವ ಪೂಜೆಯೂ ಫಲ ಕೊಡುವುದಿಲ್ಲ..

13. ದೇವರ ಪೂಜೆಯ ಸಮಯದಲ್ಲಿ ಪುರುಷರು ಮೇಲುಹೊದಿಕೆ ಅಂದರೆ ಶಲ್ಯವನ್ನು ಧರಿಸಿರಲೇಬೇಕು..

ಇಲ್ಲದಿದ್ದರೆ ಪೂಜಾ ಫಲ ರಾಕ್ಷಸರ ಪಾಲಾಗುವುದು..

ಬರೀ ಮೈಯಲ್ಲಿ ಕುಳಿತು ಪೂಜೆ ಮಾಡುವುದು, ಊಟ ಮಾಡುವುದು ಒಳಿತಲ್ಲ..

14. ಹಣೆಯಲ್ಲಿ ಕುಂಕುಮ, ಗಂಧ, ಅಥವಾ ಭಸ್ಮ .ಇತ್ಯಾದಿ ಯಾವುದದಾರೂ ಧರಿಸದೇ ಪೂಜೆ ಮಾಡಬಾರದು.. ಧರಿಸಿಯೇ ಪೂಜೆ ಮಾಡಬೇಕು, ಇಲ್ಲದಿದ್ದರೆ ಪೂಜಾಫಲ ನಶಿಸುವುದು..

15. ದೇವರ ಪೂಜೆಗೆ ಹಸಿಯಾದ ಹಾಲನ್ನು ಮಾತ್ರ ಬಳಸಿ..

16. ದೇವರ ನೈವೇದ್ಯ ಮಾಡೋವಾಗ ವೀಳ್ಯದೆಲೆ, ಅಡಿಕೆ ತಾಂಬೂಲ ಇಲ್ಲದ ನೈವೇದ್ಯ ಫಲ ಕೊಡುವುದಿಲ್ಲ..

ನೈವೇದ್ಯ ಮಾಡೋವಾಗ ತುಳಸೀಪತ್ರೆಯನ್ನು ಬಳಸಬೇಕು..

17. ದೇವರ ಪೂಜೆಗಳು ಸಂಕಲ್ಪ ಇಲ್ಲದೇ ಮಾಡಬೇಡಿ, ಸಂಕಲ್ಪ ಇದ್ದರೆ ನಿಮ್ಮ ಪ್ರಾರ್ಥನೆಗಳು ಬೇಗ ಈಡೇರುತ್ತವೆ..

18. ದೇವರ ಮನೆಯಲ್ಲಿ ಚಿಕ್ಕದೀಪಗಳನ್ನು ಜೋಡಿಸಿ ಇಡಿ, ದೊಡ್ಡ ದೀಪಗಳಾಗಿದ್ದರೆ ಎಡಗಡೆ ಬಲಗಡೆ ಇಡಿ..

19. ಗಣಪತಿ ಪೂಜೆ, ಮನೆದೇವರ ಪೂಜೆ, ದೇವಿ ಪೂಜೆಯಿಂದ ಮಾತ್ರ ಪೂರ್ಣ ಪೂಜಾಫಲ ದೊರೆಯವುದು..

ದೇವಿಯು ಎಲ್ಲಾ ದೇವರುಗಳ ತಾಯಿಯಾದ್ದರಿಂದ ಅಮ್ಮನವರನ್ನು ಪೂಜಿಸಿದರೇ ಮನೆಗೆ ನಮಗೆ ರಕ್ಷಣೆ..

ಮನೆದೇವರ ಪೂಜೆ ಇಲ್ಲದಿದ್ದರೆ ಯಾವ ದೇವರಗಳೂ ನಿಮ್ಮ ಮನೆಯನ್ನು ರಕ್ಷಿಸುವುದಿಲ್ಲ, ಎಂಥಾ ಕಷ್ಟಬಂದರೂ ನಮ್ಮ ಮನೆಯನ್ನು ನಮ್ಮನ್ನು ರಕ್ಷಿಸುವುದು ಮನೆದೇವರೇ..!

20. ಮನೆಯ ಹೊಸ್ತಿಲನ್ನು ಪೊರಕೆಯಿಂದ ಗುಡಿಸಬೇಡಿ, ಹೊಸ್ತಿಲಲ್ಲಿ ಮಹಾಲಕ್ಷ್ಮೀ ಸಾನಿಧ್ಯ ಇರುತ್ತದೆ..

21. ಶ್ರೀ ಚಕ್ರ , ಬಲಮುರಿ ಶಂಖ, ಬಲಮುರಿ ಗಣೇಶ, ಸಾಲಿಗ್ರಾಮಗಳು, ಎರಡೂ ಪಾದ ಕಾಣಿಸೋ ಮಹಾಲಕ್ಷ್ಮೀ .. ಇತ್ಯಾದಿ ಈ ದೇವರುಗಳೆಲ್ಲಾ ಅಷ್ಟೈಶ್ವರ್ಯಗಳನ್ನು ಪ್ರಧಾನಿಸೋ ದೇವರುಗಳು, ಈ ದೇವರುಗಳ ಪೂಜೆ ತುಂಬಾ ವಿಶೇಷವಾಗಿರುತ್ತದೆ..

# ಹಿಂದುತ್ವದ ಬಂಧನ ಗಟ್ಟಿಗೊಳಿಸಿದ ರಕ್ಷಾ ಬಂಧನ !

• ಉದಯವಾಹಿನಿ, ಬೆಂಗಳೂರು

ಹಿಂದೂ ಜನಜಾಗೃತಿ ಸಮಿತಿಯು ಕಳೆದ 23 ವರ್ಷಗಳಿಂದ ಸಮಾಜದಲ್ಲಿ ರಾಷ್ಟ್ರಧರ್ಮರಕ್ಷಣೆ ಧರ್ಮಪ್ರಸಾರ, ಧರ್ಮಜಾಗೃತಿಯ ಕಾರ್ಯವನ್ನು ಮಾಡುತ್ತಿದೆ. ಈ ಬಾರಿ ರಕ್ಷಾ ಬಂಧನದ ನಿಮಿತ್ತ ಹಿಂದುತ್ವಕ್ಕಾಗಿ ಕಾರ್ಯ ಮಾಡುತ್ತಿರುವ ಹಲವಾರು ಧರ್ಮಪ್ರೇಮಿಗಳಿಗೆ, ಹಿಂದುತ್ವನಿಷ್ಠರಿಗೆ ಸಮಿತಿಯ ಕಾರ್ಯಕರ್ತರು ರಾಖಿ ಕಟ್ಟಿ ರಕ್ಷಾ ಬಂಧನದ ಶುಭಾಶಯವನ್ನು ತಿಳಿಸಿದರು.

ಭಾಜಪದ ಶಾಸಕರಾದ ಶ್ರೀ. ಛಲವಾದಿ ನಾರಾಯಣ ಸ್ವಾಮಿ, ಶಾಸಕರಾದ ಶ್ರೀ. ಸುರೇಶ್ ಕುಮಾರ್, ಯುವ ಬ್ರಿಗೇಡ್‌ನ ಸಂಸ್ಥಾಪಕರಾದ ಶ್ರೀ. ಚಕ್ರವರ್ತಿ ಸೂಲಿಬೆಲೆ, ರಾಷ್ಟ್ರ ರಕ್ಷಣಾ ಪಡೆಯ ಶ್ರೀ. ಪುನೀತ್ ಕೆರೆಹಳ್ಳಿ, ಮಾಧ್ಯಮ ಮಿತ್ರರು ಹಾಗೂ ಉದ್ಯಮಿಗಳು, ಹಿತಚಿಂತಕರು ಸೇರಿದಂತೆ ಇನ್ನು ಹಲವಾರು ಹಿಂದೂ ಬಾಂಧವರಿಗೆ ರಕ್ಷಾ ಬಂಧನದ ನಿಮಿತ್ತ ರಾಖಿ ಕಟ್ಟಿ ಶುಭಾಶಯ ತಿಳಿಸಲಾಯಿತು.



# ರಾಯರ ಮಠದಲ್ಲಿ ಋಗ್ವೇದ, ಯಜುರ್ವೇದ ಉಪಾಕರ್ಮ, ಸಾಮೂಹಿಕ ಸತ್ಯನಾರಾಯಣ ವ್ರತ ಪೂಜೆ

• ಉದಯವಾಹಿನಿ, ಬೆಂಗಳೂರು

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶದಂತೆ ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ಮತ್ತು ಶ್ರೀ ಕೃಷ್ಣ ಗುಂಡಾಚಾರ್ಯರ ನೇತೃತ್ವದಲ್ಲಿ ನೂತನ ಋಗ್ವೇದ, ಯಜುರ್ವೇದ ಉಪಾಕರ್ಮವನ್ನು ಪುರೋಹಿತರಾದ ಶ್ರೀ ನಂದ ಕಿಶೋರ್ ಆಚಾರ್ಯರು ಹಾಗೂ ಗೊಗ್ಗಿ ರಾಮಚಂದ್ರ ಆಚಾರ್ಯರು ನಡೆಸಿಕೊಟ್ಟರು



ಈ ಕಾರ್ಯಕ್ರಮವು ಬೆಳಗ್ಗೆ 6 ಗಂಟೆಯಿಂದ 9:30ವರೆಗೆ ನೆರವೇರಿತು ಈ ಸಂದರ್ಭದಲ್ಲಿ ತ್ರಿಮತಸ್ಥ ಬ್ರಾಹ್ಮಣರು ನೂತನ ಯಜ್ಞೋಪವಿತ ಧಾರಣೆ ಯೊಂದಿಗೆ ಭಗವಂತನ ಅನುಗ್ರಹಕ್ಕೆ ಪಾತ್ರರಾದರು ಹಾಗೂ ಹುಣ್ಣಿಮೆಯ ಪ್ರಯುಕ್ತ ಸನ್ನಿಧಿಯಲ್ಲಿ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆಯು ಜರುಗಿತು.

**ರಾಯರ ಸನ್ನಿಧಿ ಶ್ರೀ ಸತ್ಯನಾರಾಯಣ ಪೂಜೆ**

# ಬಾಕಿ ಬಿಲ್‌ಗಳಿಗೆ ಹಣ ಬಿಡುಗಡೆ: ಪದಾಧಿಕಾರಿಗಳೊಂದಿಗೆ ಸಭೆ

• ಉದಯವಾಹಿನಿ, ಬೆಂಗಳೂರು

ಬಾಕಿ ಬಿಲ್‌ಗಳಿಗೆ ಹಣ ಬಿಡುಗಡೆ ಸೇರಿದಂತೆ ವಿವಿಧ ವಿಚಾರಗಳನ್ನು ಆಲಿಸಲು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯ ಗುತ್ತಿದಾರರ ಸಂಘದ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿದರು. ಇಲಾಖೆಯಲ್ಲಿ ರೂ.9 ಸಾವಿರ ಕೋಟಿ ಬಿಲ್ ಪಾವತಿ ಬಾಕಿ ಇದೆ. ಹಂತ ಹಂತವಾಗಿ ಹಣ ಬಿಡುಗಡೆ ಮಾಡಬೇಕು. 2017-20ರ ಅವಧಿಯಲ್ಲಿ ಕೈಗೊಂಡ ಕಾಮಗಾರಿಗಳಿಗೆ ವ್ಯಾಟ್, ಜಿಎಸ್‌ಟಿಯ ಶೇ 12 ವ್ಯತ್ಯಾಸದ ಶೇ 8 ಜಿಎಸ್‌ಟಿ ಹಣವನ್ನು ಕೊಡಬೇಕು ಎಂದು ಮುಖ್ಯಮಂತ್ರಿ ಆದೇಶ ನೀಡಿದ್ದರೂ ಬಿಡುಗಡೆಯಾಗಿಲ್ಲ ಎಂದು ಸಂಘದ ಅಧ್ಯಕ್ಷ ಆರ್. ಮಂಜುನಾಥ್ ಸಚಿವರ ಗಮನಕ್ಕೆ ತಂದರು.



ಪ್ರತಿ 10 ವರ್ಷಕ್ಕೊಮ್ಮೆ ಗುತ್ತಿಗೆದಾರರ ಪರವಾನಗಿಯನ್ನು ನವೀಕರಿಸಲು ಹಿಂದಿನ ಸಭೆಯಲ್ಲಿ ತೀರ್ಮಾನಿಸಿದ್ದರೂ ಕಾರ್ಯರೂಪಕ್ಕೆ ಬಂದಿಲ್ಲ.

ಟೆಂಡರ್ ನಿಯಮಗಳಲ್ಲಿ ವಿಧಿಸುತ್ತಿರುವ ಷರತ್ತು ಸಡಿಲಗೊಳಿಸಲು ಸರ್ಕಾರದ ಮಟ್ಟದಲ್ಲಿ ಹಲವು ಸಭೆ ನಡೆಸಿದರೂ ಪ್ರಯೋಜನವಾಗಿಲ್ಲ. ಲೈನ್ ಆಫ್ ಕ್ರೆಡಿಟ್ ನೀಡುವಲ್ಲಿ ವಿವಿಧ ಬ್ಯಾಂಕ್‌ಗಳು ಹಿಂದೇಟು ಹಾಕುತ್ತಿರುವುದರಿಂದ ಇದನ್ನು ರದ್ದು ಮಾಡಬೇಕು.

ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಎಫ್‌ಎಸ್‌ಡಿ ಮೊತ್ತದ ಶೇ 5ರ ಬದಲಾಗಿ ಶೇ 3 ಮೊತ್ತವನ್ನು ಪಕ್ಕದ ರಾಜ್ಯಗಳು ವಿಮೆ ಅಥವಾ ಎಸ್‌ಬಿಐ ಬಾಂಡ್ ಎಂದು ಪರಿಗಣಿಸುತ್ತಿವೆ. ಅದೇ ಮಾದರಿಯನ್ನು ಇಲ್ಲಿಯೂ ತರಬೇಕು ಎಂದು ಮನವಿ ಮಾಡಿದರು. ಒಟ್ಟು 16 ಬೇಡಿಕೆಗಳನ್ನು ಸಲ್ಲಿಸಲಾಯಿತು. ಕಾಲಮಿತಿಯಲ್ಲಿ ಎಲಾ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದರು. ಇಲಾಖೆಯ ಪ್ರಧಾನ ಕಾರ್ಯದರ್ಶಿ ಆಮ್ಲನ್ ಆದಿತ್ಯ ಬಿಸ್ವಾಸ್, ಕಾರ್ಯದರ್ಶಿ ಸಿ. ಸತ್ಯನಾರಾಯಣ, ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



# ಹಬ್ಬದ ಸಂಭ್ರಮ ಹೆಚ್ಚಿಸುವ ಗರಿಗರಿ ಕೋಡುಬಳೆ ಮಾಡಿ! ಎಷ್ಟು ಸುಲಭ ಗೊತ್ತಾ

ಶ್ರಾವಣ ಮಾಸದಲ್ಲಿ ಮತ್ತೊಂದು ವಿಶೇಷ ಹಬ್ಬ ಎಂದರೆ ಅದು ಕೃಷ್ಣ ಜನ್ಮಾಷ್ಟಮಿ. ಈ ಹಬ್ಬದಲ್ಲಿ ಹಲವು ರೀತಿ ತಿಂಡಿ ಮಾಡುವುದು ನಿಮ್ಮ ಆಲೋಚನೆ ಆಗಿರಬಹುದು. ಹಾಗೆ ಶ್ರಾವಣದಲ್ಲಿ ಬಹಳಷ್ಟು ಹಬ್ಬಗಳು ಬಂದೇ ಬರುತ್ತವೆ. ಈ ಹಬ್ಬಗಳಲ್ಲಿ ಸಿಹಿ ತಿಂಡಿ, ಕರಿದ ತಿಂಡಿಗಳು ಮಾಡಿಯೇ ಮಾಡುತ್ತೀರಿ. ಹಾಗೆ ಈ ಹಬ್ಬದಲ್ಲು ಮನೆ ಮಂದಿಯಲ್ಲ ಕುಳಿತು ಸವಿಯುವಂತಹ ಹಾಗೆ ಕೃಷ್ಣನಿಗೂ ಮೆಚ್ಚಿನ ತಿಂಡಿ ಮಾಡಿ ಸವಿಯುವುದು ಹೇಗೆ ನೋಡೋಣ. ಅದ್ರಲ್ಲೂ ಕರಿದ ತಿಂಡಿಗಳೆಂದರೆ ಎಲ್ಲರಿಗೂ ಇಷ್ಟವಾಗುವಂತಹ ರುಚಿ ರುಚಿಯ ಕೋಡುಬಳೆ ಮಾಡುವ ಕುರಿತಾಗಿ ತಿಳಿದುಕೊಳ್ಳೋಣ. ಕೋಡುಬಳೆ ಎಲ್ಲಾ ಹಬ್ಬದಲ್ಲೂ ಮಾಡಬಹುದಾದ ಹಾಗೆ ಎಲ್ಲರಿಗೂ ಇಷ್ಟವಾಗುವ ತಿಂಡಿ. ಹಬ್ಬದ ಅಡುಗೆ ರುಚಿಯಾಗಬೇಕಾದ್ರೆ, ಈ ರೀತಿ ಕೋಡುಬಳೆ ಇರಬೇಕು. ಇದನ್ನು ಹಲವು ಬಗೆಯಲ್ಲಿ ಮಾಡಬಹುದು. ನಾವಿಂದು ಮಸಾಲೆ ಭರಿತವಾಗಿ ಎಲ್ಲರ ಬಾಯಲ್ಲಿ ನೀರು ತರಿಸುವಂತಹ ರುಚಿ ರುಚಿಯಾದ ಕೋಡುಬಳೆ ಮಾಡುವ ಕುರಿತಾಗಿ ತಿಳಿದುಕೊಳ್ಳೋಣ. ಹಾಗಾದ್ರೆ, ಗರಿ ಗರಿಯಾದ ಕೋಡುಬಳೆ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು, ಮಾಡಲು ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಮಸಾಲ ಕೋಡುಬಳೆ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು**

- ಅಕ್ಕಿ ಹಿಟ್ಟು
- ಮೈದಾ ಹಿಟ್ಟು
- ಹುರಿಗಡಲೆ
- ಇಂಗು
- ಉಪ್ಪು
- ಕರಿಬೇವು
- ಖಾರದ ಪುಡಿ
- ಒಣ ಕೊಬ್ಬರಿ

**ಮಸಾಲ ಕೋಡುಬಳೆ ಮಾಡುವುದು ಹೇಗೆ**

ಮೊದಲು ಒಂದು ಬೌಲ್‌ನಲ್ಲಿ ಅಳತೆ ಕಪನಲ್ಲಿ 1 ಕಪ್ ಅಕ್ಕಿ ಹಿಟ್ಟು ಹಾಕಿ ಬಳಿಕ ಇದಕ್ಕೆ ಕಾಲು ಕಪ್ ಮೈದಾ ಹಿಟ್ಟು ಹಾಕಿ ಒಂದೆರಡು ನಿಮಿಷಗಳ ಕಾಲ ಹುರಿದುಕೊಳ್ಳಬೇಕು. ಈಗ ಮಿಕ್ಸಿ ಜಾರ್‌ನಲ್ಲಿ ಕಾಲು ಕಪ್ ಹುರಿಗಡಲೆ ಹಾಕಿಕೊಂಡು ಪುಡಿ ಮಾಡಿಕೊಳ್ಳಿ. ನಂತರ ಇದಕ್ಕೆ ಕಾಲು ಕಪ್ ಒಣ ಕೊಬ್ಬರಿ, ಉಪ್ಪು ಖಾರದ ಪುಡಿ, ಇಂಗು, ಕರಿಬೇವು ಹಾಕಿ ಮತ್ತೆ ಮಿಕ್ಸರ್‌ನಲ್ಲಿ ಪುಡಿ ಮಾಡಿಕೊಳ್ಳಿ.

ಈಗ ರುಬ್ಬಿರುವ ಈ ಪುಡಿಯನ್ನು ಕೂಡ ಅಕ್ಕಿ, ಮೈದಾ ಜೊತೆಗೆ ಸೇರಿಸಿ ಮಿಕ್ಸ್ ಮಾಡಿಕೊಂಡು ಚಿಟಿಕೆ ಅಜ್ವೈನಾ ಕೂಡ ಇದಕ್ಕೆ ಹಾಕಿಕೊಳ್ಳಬೇಕು. ನಂತರ 2 ಸ್ಪೂನ್ ಬಿಸಿ ಎಣ್ಣೆ ಕೂಡ ಇದಕ್ಕೆ ಹಾಕಿಕೊಳ್ಳಬೇಕು. ನಂತರ ಚೆನ್ನಾಗಿ ಕೈಯಿಂದಲೇ ಮಿಕ್ಸ್ ಮಾಡಿಕೊಳ್ಳಿ. ಬಳಿಕ ಸ್ವಲ್ಪ ಸ್ವಲ್ಪವೇ ನೀರು ಹಾಕಿಕೊಳ್ಳುತ್ತಾ ಹಿಟ್ಟನ್ನು ಹದ ಮಾಡಿಕೊಳ್ಳಬೇಕು. ಈ ಹಿಟ್ಟು ತೀರ ತೆಳುವಾಗಿ ಇರಬಾರದು ಹಾಗೆ ದಪ್ಪವೂ ಆಗಬಾರದು. ಆ ರೀತಿ ಹದ ಮಾಡಿ. ಚಪಾತಿ ಹಿಟ್ಟಿನಂತಹ ಹದಕ್ಕೆ ಬಂದರೂ ಸಾಕಾಗುತ್ತದೆ.

ಈಗ ಸ್ವಲ್ಪ ಹಿಟ್ಟನ್ನು ತೆಗೆದುಕೊಂಡು ಚಪಾತಿ ಮಣೆಯಲ್ಲಿ ಉದ್ದ ಉದ್ದ ಕಡ್ಡಿಯ ರೀತಿಯಲ್ಲಿ ಮಾಡಿಕೊಳ್ಳಿ ಈ ಕಡ್ಡಿಯಾಕಾರವಾಗಿ ಹಿಟ್ಟನ್ನು ಲಟ್ಟಿಸಿ ಎರಡೂ ತುದಿಗಳನ್ನು ಅಂಟಿಸಿಕೊಂಡು ಕೋಡುಬಳೆ ಆಕಾರಕ್ಕೆ ತನ್ನಿ. ಇದು ನೋಡಲು ದಪ್ಪವಾಗಿರಲಿ. ಹಾಗೆ ನಿಮಗೆ ಯಾವ ಗಾತ್ರಕ್ಕೆ ಬೇಕೋ ಆ ಗಾತ್ರಕ್ಕೆ ಮಾಡಿಕೊಳ್ಳಿ. ನಂತರ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಲು ಬಿಡಿ. ಎಣ್ಣೆ ಕಾದ ಬಳಿಕ ಹಲವು ಕೋಡುಬಳೆಗಳ ಅದರಲ್ಲಿ ಹಾಕಿ ಕರಿಯಲು ಬಿಡಿ. ಚೆನ್ನಾಗಿ ಕರಿದ ಬಳಿಕ ತೆಗೆದು ಜರಡಿಯಲ್ಲಿ ಹಾಕಿಡಿ. ಇಷ್ಟಾದರೆ ಸವಿಯಲು ನಿಮ್ಮ ಮುಂದೆ ರುಚಿ ರುಚಿಯ ಕೋಡುಬಳೆ ರೆಡಿಯಾಗುತ್ತದೆ. ಹಬ್ಬದಲ್ಲಿ ಈ ಕೋಡುಬಳೆ ಸವಿಯಲು ಬಹಳ ಇಷ್ಟವಾಗುತ್ತೆ. ಹಾಗೆ ಸುಲಭವಾಗಿ ಇದನ್ನು ಮಾಡಿ ಮುಗಿಸಬಹುದು. ನೀವು ಕೂಡ ಮನೆಯಲ್ಲಿ ಇದನ್ನು ಮಾಡಿ ನೋಡಿ. ಹಲವು ದಿನಗಳ ಕಾಲ ಇಟ್ಟು ಇದನ್ನು ಸವಿಯಬಹುದು

# ತೆಂಗಿನ ಎಣ್ಣೆಯು ಚರ್ಮದ ಆರೋಗ್ಯಕ್ಕೆ ಪ್ರಯೋಜಕಾರಿ

ತೆಂಗಿನ ಎಣ್ಣೆಯು ಚರ್ಮದ ಆರೋಗ್ಯಕ್ಕೆ ಬೇಕಾಗಿರುವಂತಹ ಆರೋಗ್ಯಕಾರಿ ಗುಣಗಳನ್ನು ಹೊಂದಿದೆ. ಇದು ಚರ್ಮದ ಮೇಲಿನ ಕಲೆಗಳನ್ನು ನಿವಾರಿಸಲು ಸಹಕಾರಿಯಾಗಿದೆ. ಇದನ್ನು ಯಾವ ರೀತಿ ಹಚ್ಚೋದು ಪ್ರಯೋಜಕಾರಿ ಎನ್ನುವುದನ್ನು ತಿಳಿಯೋಣ. ಹವಾಮಾನ ಮಾಲಿನ್ಯವು ನಮ್ಮ ಆರೋಗ್ಯದ ಮೇಲೆ ಮಾತ್ರವಲ್ಲ, ನಮ್ಮ ಮುಖದ ಮೇಲೆಯೂ ಪರಿಣಾಮ ಬೀರುತ್ತದೆ. ಹಲವು ಬಾರಿ ಚರ್ಮವು ತುಂಬಾ ಒಣಗುತ್ತದೆ. ಮುಖದ ಮೇಲೆ ತುಂಬಾ ಕೆಟ್ಟದಾಗಿ ಕಾಣುವ ಕಲೆಗಳು ಸಹ ಕಾಣಿಸಿಕೊಳ್ಳುತ್ತವೆ.

ಅಂತಹ ಪರಿಸ್ಥಿತಿಯಲ್ಲಿ ಬಹಳಷ್ಟು ಮಹಿಳೆಯರು ಬ್ಯೂಟಿ ಪಾರ್ಲರ್‌ಗೆ ಹೋಗಿ ಕಲೆಯನ್ನು ತೆಗೆಸುವ ಟ್ರೀಟ್‌ಮೆಂಟ್ ಮಾಡಿಸಿಕೊಳ್ಳುತ್ತಾರೆ. ಆದರೆ ಅದು ಅಷ್ಟು ಸುಲಭವಾಗಿ ಹೋಗೋದಿಲ್ಲ. ನೀವು ಪಾರ್ಲರ್‌ಗೆ ಹೋಗದೆ ಮನೆಯಲ್ಲಿಯೇ ನಿಮ್ಮ ಚರ್ಮದ ಮೇಲಿನ ಕಲೆಗಳನ್ನು ನಿವಾರಿಸಿ ಚರ್ಮಕ್ಕೆ ಹೊಳಪನ್ನು ನೀಡಲು ನೀವು ತೆಂಗಿನ ಎಣ್ಣೆಯನ್ನು ಬಳಸಬಹುದು.



**ತೆಂಗಿನ ಎಣ್ಣೆ ಮುಖಕ್ಕೆ ಹಚ್ಚಿ**

ನೀವು ಮುಖಕ್ಕೆ ಹೊಳಪು ಬರಬೇಕಾದರೆ ರಾತ್ರಿ ಮಲಗುವ ಮೊದಲು ತೆಂಗಿನ ಎಣ್ಣೆಯನ್ನು ಮುಖಕ್ಕೆ ಹಚ್ಚಿ. ತೆಂಗಿನ ಎಣ್ಣೆಯಲ್ಲಿ ಉತ್ಕರ್ಷಣ ನಿರೋಧಕಗಳು, ಆಂಟಿಫಂಗಲ್ ಮತ್ತು ಬ್ಯಾಕ್ಟೀರಿಯಾ ವಿರೋಧಿ ಮುಂತಾದ ಹಲವು ಆರೋಗ್ಯಕಾರಿ ಗುಣಗಳಿವೆ. ಇದು ಚರ್ಮಕ್ಕೆ ಪೋಷಣೆ ಮತ್ತು ಜಲಸಂಚಯನವನ್ನು ಒದಗಿಸುತ್ತದೆ.

ಕೆಲವು ವಸ್ತುಗಳನ್ನು ತೆಂಗಿನ ಎಣ್ಣೆಯಲ್ಲಿ ಬೆರೆಸಿ ಮುಖಕ್ಕೆ ಹಚ್ಚಿದರೆ ಮುಖವು ಹೊಳೆಯುತ್ತದೆ.

**ವಿಟಮಿನ್ ಇ ಕ್ಯಾಪ್ಸುಲ್:**

ತೆಂಗಿನ ಎಣ್ಣೆಯಲ್ಲಿ ವಿಟಮಿನ್ ಇ ಕ್ಯಾಪ್ಸುಲ್‌ಗಳನ್ನು ಬೆರೆಸಿ ರಾತ್ರಿ ಮಲಗುವ ಮೊದಲು ಮುಖಕ್ಕೆ ಹಚ್ಚಿ. ಸ್ವಲ್ಪ ಹೊತ್ತು ಮಸಾಜ್ ಮಾಡಿ ಮತ್ತು ಎಣ್ಣೆ ಚರ್ಮದಲ್ಲಿ ಚೆನ್ನಾಗಿ ಹೀರಿಕೊಂಡ ನಂತರ ಅದನ್ನು ಬಿಡಿ. ನಂತರ ಅದನ್ನು ರಾತ್ರಿಯಿಡೀ ಮುಖದ ಮೇಲೆ ಬಿಡಿ ಮತ್ತು ಬೆಳಿಗ್ಗೆ ಎದ್ದ ನಂತರ ತಣ್ಣೀರಿನಿಂದ ಮುಖ ತೊಳೆಯಿರಿ. ಇದು ಚರ್ಮಕ್ಕೆ ವಿಭಿನ್ನ ಹೊಳಪನ್ನು ನೀಡುತ್ತದೆ.

**ಸುಕ್ಕು ನಿವಾರಿಸುತ್ತದೆ:** ತೆಂಗಿನ ಎಣ್ಣೆಯಲ್ಲಿ ವಿಟಮಿನ್ ಇ ಕ್ಯಾಪ್ಸುಲ್‌ಗಳನ್ನು ಬೆರೆಸಿ ಚರ್ಮವನ್ನು ಪೋಷಿಸುತ್ತದೆ. ಇದನ್ನು ಬಳಸುವುದರಿಂದ ಮುಖದ ಮೇಲಿನ ಸುಕ್ಕುಗಳು ಮತ್ತು ಸೂಕ್ಷ್ಮ ರೇಖೆಗಳು ಕಡಿಮೆಯಾಗುತ್ತವೆ. ತೆಂಗಿನ ಎಣ್ಣೆ, ವಿಟಮಿನ್ ಇ ಆಂಟಿ ಆಕ್ಸಿಡೆಂಟ್‌ಗಳ ಸಂಯೋಜನೆಯು ಚರ್ಮವನ್ನು ಬಾಹ್ಯ ಮಾಲಿನ್ಯದಿಂದ ಉಂಟಾಗುವ ಹಾನಿಯಿಂದ ರಕ್ಷಿಸುತ್ತದೆ. ಮುಖದ ತ್ವಚೆಯನ್ನು ಕೋಮಲವಾಗಿಸುತ್ತದೆ.

**ಮೊಸರಿನೊಂದಿಗೆ ಬೆರೆಸಿ ಹಚ್ಚಿ:** ತೆಂಗಿನ ಎಣ್ಣೆಯನ್ನು ಮೊಸರಿನೊಂದಿಗೆ ಬೆರೆಸಿ ಹಚ್ಚುವುದರಿಂದ ಚರ್ಮಕ್ಕೆ ಹೊಳಪು ಬರುತ್ತದೆ. ಒಂದು ಚಮಚ ಮೊಸರನ್ನು ಒಂದು ಚಮಚ ತೆಂಗಿನ ಎಣ್ಣೆಯಲ್ಲಿ ಬೆರೆಸಿ ರಾತ್ರಿ ಮಲಗುವ ಮೊದಲು ಮುಖ ಮತ್ತು ಕುತ್ತಿಗೆಗೆ ಹಚ್ಚಿ. 30 ನಿಮಿಷಗಳ ಕಾಲ ಹಾಗೆಯೇ ಬಿಡಿ ಮತ್ತು ನಂತರ ಸಾಮಾನ್ಯ ನೀರಿನಿಂದ ಮುಖ ತೊಳೆಯಿರಿ. ತೆಂಗಿನಕಾಯಿ ಮತ್ತು ಮೊಸರಿನ ಮಿಶ್ರಣವು ಚರ್ಮವನ್ನು ಹೈಡ್ರೇಟ್ ಮಾಡಲು ಮತ್ತು ಕೊಳೆಯನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ.

**ತೆಂಗಿನ ಎಣ್ಣೆ ಗುಣಪಡಿಸುವಿಕೆಯನ್ನು ಬೆಂಬಲಿಸುತ್ತದೆ:** ತೆಂಗಿನ ಎಣ್ಣೆಯು ನಮ್ಮ ದೇಹದಲ್ಲಿ ಉತ್ಕರ್ಷಣ ನಿರೋಧಕಗಳು ಮತ್ತು ಕಾಲಜನ್ ಮಟ್ಟವನ್ನು ಹೆಚ್ಚಿಸುವ ಸಾಮರ್ಥ್ಯವನ್ನು ಹೊಂದಿದೆ. ಈ ಎರಡೂ ನಮ್ಮ ಚರ್ಮದ ನೈಸರ್ಗಿಕ ಪುನರುತ್ಪಾದನೆ ಮತ್ತು ದುರಸ್ತಿ ಪ್ರಕ್ರಿಯೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ** ನಿಮ್ಮ ವಿಶ್ವಾಸ ಬೆಳೆಯುತ್ತದೆ , ಪ್ರಗತಿ ನಿಶ್ಚಿತವಾಗಿದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

**ವೃಷಭ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

**ಮಿಥುನ** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ಕರ್ಕಾಟಕ** ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು.

**ಸಿಂಹ** ನೀವು ಧೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು.

**ಕನ್ಯಾ** ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು.

**ತುಲಾ** ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ –ಅವರು ಒತ್ತಡದಲ್ಲಿರಬಹುದು.

**ವೃಶ್ಚಿಕ** ಕೆಲಸದಲ್ಲಿ ಎಲ್ಲರೂ ಪ್ರಾಮಾಣಿಕವಾಗಿ ನಿಮ್ಮನ್ನು ಆಲಿಸುತ್ತಾರೆ. ದಿನ ಉತ್ತಮವಾಗಿದೆ, ಇಂದು ನಿಮಗಾಗಿ ಸಮಯವನ್ನು ತೆಗೆದುಕೊಳ್ಳಿ ನಿಮ್ಮ ನ್ಯೂನತೆಗಳು ಮತ್ತು ಸಾಮರ್ಥ್ಯಗಳ ಬಗ್ಗೆ ಗಮನ ಹರಿಸಿ.

**ಧನಸ್ಸು** ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು.

**ಮಕರ** ಖಿನ್ನತೆಯನ್ನು ಹೊಡೆದೋಡಿಸಿ. ಇದು ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು.

**ಕುಂಭ** ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಮೀನ** ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

### ಕ್ಷೇತ್ರದಲ್ಲಿ ಸಾಕಷ್ಟು ಅನುದಾನ ಬಿಡುಗಡೆ ಮಾಡಿ ಅಭಿವೃದ್ಧಿ ಮಾಡಿರುವೆ: ಸಚಿವ ಡಾ.ಶರಣಪ್ರಕಾಶ ಪಾಟೀಲ


# ಪ್ರಜಾಪ್ರಭುತ್ವದಲ್ಲಿ ಜನರ ವಿಶ್ವಾಸ ಉಳಿಸಿಕೊಳ್ಳಬೇಕು

• **ಉದಯವಾಹಿನಿ, ಚಿಂಚೋಳಿ**

ಸೇಡಂ ವಿಧಾನಸಭಾ ಮತಕ್ಷೇತ್ರದ ಚಿಂಚೋಳಿ ತಾಲ್ಲೂಕಿನ 32ಹಳ್ಳಿಗಳು ಸಮಗ್ರ ಅಭಿವೃದ್ಧಿಗಾಗಿ ಸಾಕಷ್ಟು ಅನುದಾನ ಬಿಡುಗಡೆಗೊಳಿಸಿ ಡಾಂಬರೀಕರಣ ರಸ್ತೆಗಳು,ಸಿಸಿರಸ್ತೆಗಳು,ಗುಡಿ ಗೋಪೂರಗಳ ಅಭಿವೃದ್ಧಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅಭಿವೃದ್ಧಿ ಮಾಡಿದ್ದೇನೆ,ಪ್ರಜಾಪ್ರಭುತ್ವದಲ್ಲಿ ಜನರ ವಿಶ್ವಾಸ ಉಳಿಸಿಕೊಂಡಿದ್ದೇನೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.

ತಾಲ್ಲೂಕಿನ ಬೆಡಕಪಳ್ಳಿ ಗ್ರಾಮದಲ್ಲಿ ಶನಿವಾರ 2022–23ನೇ ಸಾಲಿನ ಕೆಕೆಆರ್ ಡಿಬಿ ಮೆಗಾ ಮೈಕ್ರೋ ಯೋಜನೆ ಯಡಿಯಲ್ಲಿ ಪೆಂಚನಪಳ್ಳಿ ಗ್ರಾಮದಿಂದ ಬೆಡಕಪಳ್ಳಿ ಗ್ರಾಮದವರೆಗೆ 226.78 ಲಕ್ಷ ಅನುದಾನದಲ್ಲಿ ರಸ್ತೆ ನಿರ್ಮಾಣದ ಅಡಿಗಲ್ಲು ನೇರವೇರಿಸಿ ಮಾತನಾಡಿದ ಅವರು,ಸುಲೇಪೇಟ ಸೇಡಂ ರಸ್ತೆ 5ಕೋಟಿ ರೂ.ನಿರ್ಮಾಣ ಟೆಂಡರ್ ಹಂತದಲ್ಲಿ,ಬುರಕಪಳ್ಳಿ ಕುಂಚಾವರಂ ರಸ್ತೆ 08ಕೋಟಿ ರೂ.ಟೆಂಡರ್ ಹಂತದಲ್ಲಿ,ಕಲ್ಯಾಣ ಪಂಥದಲ್ಲಿ ಹಲಕೋಡಾ ಪೋತಂಗಲ್ ರಸ್ತೆ,ಜಟ್ಟೂರ ವೆಂಕಟಾಪೂರ ರಸ್ತೆ,ಗಡಿಕೇಶ್ವಾರ ಸುಲೇಪೇಟ ರಸ್ತೆ,ಕೊಡಂಪಳ್ಳಿ ಗಡಿಕೇಶ್ವಾರ ರಸ್ತೆ,ಈರಕಪಳ್ಳಿ ರಸ್ತೆ ಪೂರ್ಣ ಮಾಡಲಾಗಿದೆ,ರಾಯಕೋಡ ಪೆಂಚನಪಳ್ಳಿ ಗಡಿಕೇಶ್ವಾರ ರಸ್ತೆ ಕೂಡ ಮಾಡಲಾಗುತ್ತಿದೆ.

ಮತ್ತೆ 250ಕೋಟಿ ಅನುದಾನದಲ್ಲಿ 4ಕಾಮಗಾರಿಗಳು ಮಾಡಲು ಕೈಗೆತ್ತಿಕೊಳ್ಳಲಾಗಿದೆ,ಗಣಾಪೂರ ನಿಡಗುಂದಾ ರಸ್ತೆ,ಹಲಕೋಡಾ ಜಟ್ಟೂರ ಮಧ್ಯದಲ್ಲಿ ಏತ ನೀರಾವರಿ





☛ ಉದಯವಾಹಿನಿ ಚಿತ್ರ

**ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದನಂತರ ಕಲಬುರಗಿಯಲ್ಲಿ ಟ್ರಾಮಾ ಸೆಂಟರ್ ಸ್ಥಾಪನೆ 100ಹಾಸಿಗೆ ಮಾಡಿ ಬಡವರಿಗೆ ಅನುಕೂಲವಾಗಿದೆ,ಒಂದು ಮೆಡಿಕಲ್ ಕಾಲೇಜು ಪ್ರಾರಂಭ,ಜಯದೇವ ಆಸ್ಪತ್ರೆ,ಜೀಮ್ಸ್ ಆಸ್ಪತ್ರೆ,92ಕೋಟಿಯಲ್ಲಿ 200ಹಾಸಿಗೆಯ ತಾಯಿ ಮಗು ಆಸ್ಪತ್ರೆ ನಿರ್ಮಾಣ,100ಕೋಟಿ ರೂ.ಯಲ್ಲಿ ನಿಮ್ಹಾನ್ಸ್ ಆಸ್ಪತ್ರೆ,ಹೀಗೆ ಹತ್ತಾರು ಕೆಲಸಗಳು ಅಭಿವೃದ್ಧಿ ಮಾಡಿದ್ದೇವೆ ಬಡವರು ಮಧ್ಯಮವರ್ಗದವರಿಗೆ ಅನುಕೂಲವಾಗುತ್ತಿದೆ. ಜಿಲ್ಲೆಯಲ್ಲಿಯೇ ಸಾಕಷ್ಟು ಅಭಿವೃದ್ಧಿ ಕೆಲಸಗಳು ಮಾಡಿದ್ದೇವೆ ದೊಡ್ಡ ದೊಡ್ಡ ಆಸ್ಪತ್ರೆಗಳು ಕಟ್ಟಿದ್ದೇವೆ ಬಡವರು ಮಧ್ಯಮವರ್ಗದವರು ಎಲ್ಲರೂ ಸರ್ಕಾರಿ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಪಡೆದುಕೊಳ್ಳಬೇಕು. ಭೂತಪೂರ ರಾಯಕೋಡ ಬ್ರೀಜ್ ಮೇಲ್ದರ್ಜೆಗೆ ಏರಿಸಲು 3ಕೋಟಿ ರೂ.ಕ್ರೀಯಾಯೋಜನೆ ಮಾಡಲಾಗಿದೆ ಶೀಘ್ರದಲ್ಲೇ ಕೆಲಸ ಪ್ರಾರಂಭವಾಗಲಿದೆ.** – ಡಾ.ಶರಣಪ್ರಕಾಶ ಪಾಟೀಲ, ವೈದ್ಯಕೀಯ ಶಿಕ್ಷಣ ಸಚಿವ

**ರಸ್ತೆ ನಿರ್ಮಾಣಕ್ಕೆ ಅಡಿಗಲ್ಲು**

ಯೋಜನೆಯು 80ಕೋಟಿ ರೂಪಾಯಿಯಲ್ಲಿ ಮಾಡಿ ರೈತರಿಗೆ ಆರ್ಥಿಕವಾಗಿ ಸಬಲರಾಗಲು ಅನುಕೂಲವಾಗಲಿದೆ,ರಾಜ್ಯ ಸರ್ಕಾರವು ಐದು ಗ್ಯಾರಂಟಿಯು ವರ್ಷಕ್ಕೆ 54ಸಾವಿರ ಕೋಟಿ ರೂಪಾಯಿ ಬಡವರ ಮನೆ ಬಾಗಿಲಿಗೆ ಮುಟ್ಟಿಸುತ್ತಿದ್ದು ಜೋತೆಯಲ್ಲಿ ಅಭಿವೃದ್ಧಿ ಕೂಡ ಮಾಡಲಾಗುತ್ತಿದೆ ಬಡವರು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳುತ್ತಿದ್ದಿರೆ,ಕಾಂಗ್ರೇಸ್ ಕೇಂದ್ರದಲ್ಲಿ ಇರುವಾಗ ನರೇಗಾ ಯೋಜನೆ,ಆಹಾರ ಭದ್ರತೆ ಕಾಯ್ದೆ,ಐಟಿಐ ಅಂಥಹ ಕೆಲಸ ಮಾಡಿದೆ ಆದರೆ ಬಿಜೆಪಿಗರು ಬರೀ ಜಾತಿ ಜಾತಿಗಳ ಮಧ್ಯೆ ಜಗಳ ಹಚ್ಚುವ ಕೆಲಸ ಮಾಡುತ್ತಿದ್ದಾರೆ. ಭೂತಪೂರ ಬ್ರೀಜ್ ಉನ್ನತಿಕರಣಕ್ಕೆ ಹಾಗೂ ಯಲ್ಲಮ್ಮ ಗೇಟ್ ಹತ್ತಿರ ಎರಡು ಕಾಮಗಾರಿಗೆ 03ಕೋಟಿ ರೂಪಾಯಿ ಕ್ರೀಯಾಯೋಜನೆ ಮಾಡಲಾಗಿದೆ. ಯುವನಿಧಿ ಗ್ಯಾರಂಟಿಯು ರಾಜ್ಯದಲ್ಲಿ 30ಲಕ್ಷ ಯುವಕರು ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ ಎಂದರು. ಬಾಬುರಾವ ಪಾಟೀಲ,ಮಹಾದೇವಪ್ಪಾ ಪೋಲಿಸ್ ಪಾಟೀಲ ಮಾತನಾಡಿದರು. ಗೋಪಾಲ ರಾಂಪೂರೆ ಸ್ವಾಗತಿಸಿದರು, ಉದಯಕುಮಾರ ನಿರೂಪಿಸಿದರು,ಮಹಾದೇವ ಪಾಟೀಲ ವಂದಿಸಿದರು.

ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ, ಬಸವರಾಜ ಪಾಟೀಲ ಊಡಗಿ, ಶಿವರಶರಣರೆಡ್ಡಿ ಪಾಟೀಲ, ಬಾಬುರಾವ ಪಾಟೀಲ,ಗೋಪಾಲರೆಡ್ಡಿ,ಪಾರ್ವತಿ ಗುಂಡಪ್ಪಾ,ಇಇ ಪ್ರಭಯ್ಯಸ್ವಾಮಿ, ಜಗನ್ನಾಥ ಚಿಂತಪಳ್ಳಿ,ಮಹ್ಮದ್ ಗೌಸ, ಅಂಬರಾಯ ಪಾಟೀಲ, ಚಂದ್ರಶೇಖರ ರೆಡ್ಡಿ,ಮಂಜುನಾಥರೆಡ್ಡಿ, ಸೋಮಶೇಖರ, ಶಿವರಶರಣರೆಡ್ಡಿ ಭಕ್ತಂಪಳ್ಳಿ, ಸಮಲ್ಲಿಕಾರ್ಜುನ ಪಾಲಾಮೋರ್, ಜಗದೀಶಪಾಟೀಲ,ಡಿಹೆಚ್‌ಓ ರಾಯಚೂರು ಲಕ್ಷ್ಮಿನರಸಿಂಹರೆಡ್ಡಿ, ವೆಂಕಕರೆಡ್ಡಿ ಜಟ್ಟೂರ, ಸೂಭಾನರೆಡ್ಡಿ, ಶಿವಕುಮಾರ ಸಜ್ಜನ , ಮಲ್ಲಿಕಾರ್ಜುನ ಬುಶೆಟ್ಟಿ,ಶರಣುಪಾಟೀಲ,ಆನಂದ ಟೈಗರ್, ಚಾಂದಪಾಷ ಮೋಮೀನ್,ನಾಸೀರ್ ಹುಸೇನ್, ದೇವೀಂದ್ರಪ್ಪ ಹೋಳ್ಕರ್, ಕೆ.ಮಹೇಶ, ತಾಹೇರ್ ಪಟೇಲ, ಅಬ್ದುಲ್ ಬಾಷೀದ್, ಪ್ರಭುಲಿಂಗ ಬುಳ್ಳಾ, ಟಿಹೆಚ್‌ಓ ಮಹ್ಮದ್ ಗಫಾರ್, ಬಾಬುಮಿಯ್ಯ ಮೋಮೀನ್, ಸಿದ್ರಾಮ ನಿಷ್ಠಿ, ಬಸವರಾಜ ಹೂಡದಳ್ಳಿ, ಸಂಗಪ್ಪ ಬೊರಂಚಿ, ಅನೇಕರಿದ್ದರು.


# ಉಗರಗೋಳದ ಯಲ್ಲಮ್ಮ ದೇವಸ್ಥಾನಕ್ಕೆ ಜಲದಿಗ್ಬಂಧನ

• **ಉದಯವಾಹಿನಿ ಬೆಳಗಾವಿ**

ಜಿಲ್ಲೆಯಾದ್ಯಂತ ಸುರಿದ ಧಾರಾಕಾರ ಮಳೆಗೆ ಸಾಕಷ್ಟು ಅವಾಂತರಗಳು ಸೃಷ್ಟಿಯಾಗಿದ್ದು, ಜಲಾವೃತಗೊಂಡ ರಸ್ತೆ ದಾಟಲು ಆಗದೇ ಯಲ್ಲಮ್ಮನ ಗುಡ್ಡದ ಭಕ್ತರು ಪರದಾಡಿದ್ದಾರೆ. ಮತ್ತೊಂದೆಡೆ ನಿರಂತರ ಮಳೆಗೆ ಯಲ್ಲಮ್ಮನ ಗುಡ್ಡದ ಪ್ರದೇಶದಲ್ಲಿ ಸಹ್ಯಾದ್ರಿ, ಕೊಡಚಾದ್ರಿ ಸೃಷ್ಟಿಯಾಗಿದ್ದು ಪ್ರವಾಸಿಗರನ್ನ ಕೈಬೀಸಿ ಕರೆಯುತ್ತಿದೆ.

**ಭಕ್ತರಿಗೆ ದೇವಿಯ ದರ್ಶನವಿಲ್ಲದೇ ಪರದಾಟ**

ಸುಡುಬಿಸಿಲಿನ ಬೇಗೆಗೆ ಬೆಂದಿದ್ದ ಸವದತ್ತಿ ಜನರಿಗೆ ಮಳೆರಾಯನ ತಂಪೆರಿದಿದ್ದಷ್ಟೇ ಅಲ್ಲಾ, ಸಾಕಷ್ಟು ಅವಾಂತರಗಳನ್ನೇ ಸೃಷ್ಟಿಸಿದ್ದಾನೆ. ರಭಸವಾಗಿ ಸುರಿದ ಧಾರಾಕಾರ ಮಳೆಗೆ ಯಲ್ಲಮ್ಮನ ಗುಡ್ಡಕ್ಕೆ ಸಂಪರ್ಕಿಸುವ ರಸ್ತೆಗಳು ಹಳ್ಳಗಳಿಂದ ಜಲಾವೃತಗೊಂಡು ಸಂಪೂರ್ಣ ಬಂದ್ ಆಗಿದೆ. ಇದರಿಂದಾಗಿ ದೇವಸ್ಥಾನಕ್ಕೆ ಬರೋ ಭಕ್ತರು ದೇವಿಯ ದರ್ಶನವಿಲ್ಲದೇ ಪರದಾಡಿದ್ದಾರೆ. ನೂಲಹುಣ್ಣಿಮೆ ಹಿನ್ನೆಲೆ ಶ್ರೀ ರೇಣುಕಾ ಯಲ್ಲಮ್ಮನ ದೇವಸ್ಥಾನದಲ್ಲಿ ಜಾತ್ರೆ ಪ್ರಾರಂಭವಾಗುತ್ತದೆ. ಹಾಗಾಗಿ ಯಲ್ಲಮ್ಮನ ಗುಡ್ಡಕ್ಕೆ ಮಹಾರಾಷ್ಟ್ರ, ಗೋವಾ, ವಿಜಯಪುರ, ಬಾಗಲಕೋಟೆ, ಗದಗ, ಧಾರವಾಡ, ಹುಬ್ಬಳ್ಳಿ ಸೇರಿದಂತೆ ಕರ್ನಾಟಕದ ಮೂಲೆಮೂಲೆಗಳಿಂದ ಭಕ್ತರು ದೇವಿಯ ದರ್ಶನಕ್ಕೆ ಆಗಮಿಸುತ್ತಾರೆ. ಉಗರಗೋಳದ ಗ್ರಾಮದಲ್ಲಿ ರಸ್ತೆ ಸಂಪೂರ್ಣವಾಗಿ ಬಂದ್ ಆಗಿದ್ದರಿಂದ ಭಕ್ತರು ಪರದಾಡಿದ್ದರು.



☛ ಉದಯವಾಹಿನಿ ಚಿತ್ರ

**ರಾಮದುರ್ಗ ತಾಲ್ಲೂಕಿನಲ್ಲೂ ಭಾರೀ ಪ್ರಮಾಣದಲ್ಲಿ ಮಳೆಯಾಗಿದ್ದು, ತಾಲ್ಲೂಕಿನ ಕಿಲ್ಲಾತೋರಗಲ್ ಬಳಿ ಗುಡ್ಡ ಕುಸಿತವಾಗಿದೆ. ನಡುರಸ್ತೆಯಲ್ಲೇ ಬೃಹತ್ ಕಲ್ಲು ಬಂಡೆಗಳು ಉರುಳಿ ಬಿದಿದ್ದು, ಯಾವುದೇ ವಾಹನ ಸಂಚಾರವಿಲ್ಲದೇ ಭಾರೀ ಅನಾಹುತವೊಂದು ತಪ್ಪಿದೆ. ಮಳೆಯಿಂದ ಏನೆಲ್ಲಾ ಅನಾಹುತ ಆಗಿದೇ ಅನೋದನ್ನ ಪರಿಶೀಲನೆ ಮಾಡುತ್ತಿದ್ದೇವೆ ಎಂದು ಸವದತ್ತಿ ತಹಶೀಲ್ದಾರರು ಮಾಹಿತಿ ನೀಡಿದ್ದಾರೆ.** –ತಹಶೀಲ್ದಾರ್

ಅಷ್ಟೇ ಅಲ್ಲದೇ ಉಗರಗೋಳ ಗ್ರಾಮದಲ್ಲಿ ಕೊಚ್ಚಿ ಕೊಂಡು ಹೋಗುತ್ತಿರುವ ಬೈಕ್ ರಕ್ಷಣೆಗೆ ವ್ಯಕ್ತಿಯೊಬ್ಬರು ಹರಸಾಹಸ ಪಟ್ಟಿದ್ದಾರೆ. ಜೊತೆಗೆ ಯಲ್ಲಮ್ಮನ ಗುಡ್ಡದ ಎಣ್ಣೆ ಹೊಂಡದಲ್ಲಿ ರಭಸವಾಗಿ ಹರಿಯುತ್ತಿರುವ ಮಳೆಯ ನೀರಿನಲ್ಲಿ ವ್ಯಕ್ತಿಯೊಬ್ಬರು ಸಿಲುಕಿದ್ದರು.ಇನ್ನು, ಸವದತ್ತಿ ತಾಲ್ಲೂಕಿನಾದ್ಯಂತ ಸುರಿದ ಭಾರೀ ಮಳೆಯಿಂದಾಗಿ ಸಹ್ಯಾದ್ರಿ–ಕೊಡಚಾದ್ರಿಯನ್ನೇ ಮೀರಿಸುವಂತೆ ಸುಕ್ಷೇತ್ರ ಯಮ್ಮಲ್ಲನ ಗುಡ್ಡದ ಸುತ್ತಮುತ್ತಲಿನ ಪ್ರದೇಶ ನಿರ್ಮಾಣವಾಗಿದೆ.

ಬೆಟ್ಟ–ಕಲ್ಲುಬಂಡೆಗಳ ಮೇಲೆ ಎಲ್ಲೆಂದರಲ್ಲಿ ಸುಂದರ ಕಿರುಜಲಪಾತಗಳು ಸೃಷ್ಟಿಯಾಗಿದ್ದು, ಬೆಟ್ಟದಿಂದ ನೀರು ಜಾರಿ ದುಮ್ಮಿಕ್ಕುತ್ತಿದೆ. ಬೆಟ್ಟದಿಂದ ಜಾರುವ ನೀರ್ಝರಿಗಳ ದೃಶ್ಯ ನೋಡುಗರ ಕಣ್ಮನ ಸೆಳೆಯುತ್ತಿದೆ. ಮತ್ತೊಂದೆಡೆ ಯಲ್ಲಮ್ಮನ ಗುಡ್ಡದಲ್ಲಿ ಭಾರಿ ಮಳೆಗೆ ಎಣ್ಣೆಹೊಂಡ ಸಂಪೂರ್ಣ ಜಲಾವೃತಗೊಂಡರೆ, ಧಾರಾಕಾರ ಮಳೆಯ ನೀರು ಶ್ರೀರೇಣುಕಾ ಯಲ್ಲಮ್ಮನ ದೇವಸ್ಥಾನಕ್ಕೆ ನುಗ್ಗಿದೆ. ದೇವಸ್ಥಾನ ಕೌಂಟರ್‌ಗಳು, ದೇವಸ್ಥಾನ ಗರ್ಭಗುಡಿ ಹೀಗೆ ದೇವಸ್ಥಾನ ಸುತ್ತಲೂ ಮಳೆ ನೀರು ಆವರಿಸಿಕೊಂಡಿದೆ. ಉತ್ತರ ಕರ್ನಾಟಕ ಶಕ್ತಿದೇವತೆ ಯಲ್ಲಮ್ಮನ ದೇವಿಗೂ ಮಳೆರಾಯ ಜಲದಿಗ್ಬಂಧನ ಹಾಕಿದ್ದಾನೆ.

## ವಡಗೇರಾ ತಾಲ್ಲೂಕಿನೆಲ್ಲಡೆ ರಸಗೊಬ್ಬರ ಕೊರತೆ ಉಸ್ತುವಾರಿ ಸಚಿವರು ಗಮನ ಹರಿಸಲಿ

• **ಉದಯವಾಹಿನಿ ವಡಗೇರಾ**

ತಾಲ್ಲೂಕಿನೆಲ್ಲಡೆ ಡಿಎಪಿ ಯೂರಿಯಾ ರಸ ಗೊಬ್ಬರದ ಕೊರತೆ ಇದ್ದು ರೈತರು ತೀವ್ರ ಸಂಕಷ್ಟಕ್ಕೆ ತುತ್ತಾಗಿದ್ದು ಜಿಲ್ಲಾ ಉಸ್ತುವಾರಿ ಸಚಿವರು ಶಾಸಕರು ಗಮನಹರಿಸಿ ರೈತರ ಸಮಸ್ಯೆಗೆ ಸ್ಪಂದಿಸುವಂತೆ ರಾಜ್ಯ ರೈತ ಸಂಘ ಹಸಿರು ಸೇನೆ ತಾಲ್ಲೂಕು ಗೌರವಾಧ್ಯಕ್ಷ ಶರಣು ಜಡಿ ಆಗ್ರಹಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ರಸಗೊಬ್ಬರ ಸಮಸ್ಯೆಗೆ ಜನಪ್ರತಿನಿಧಿಗಳು ಅಧಿಕಾರಿಗಳೇ ನಿರ್ಲಕ್ಷವೇ ಪ್ರಮುಖ ಕಾರಣ ಎಂದು ಕಿಡಿಕಾರಿದ್ದಾರೆ. ರೈತರು ದಿನವಿಡೀ ರಸಗೊಬ್ಬರ ಕೇಂದ್ರಗಳ ಮುಂದೆ ಸರತಿ ಸಾಲಿನಲ್ಲಿ ನಿಂತರೂ ಕೂಡ ಸಮರ್ಪಕ ರಸಗೊಬ್ಬರ ದೊರೆಯುತ್ತಿಲ್ಲ ಒಬ್ಬ ರೈತರಿಗೆ ಎರಡು ಚೀಲಗಳಂತೆ ನೀಡುತ್ತಿದ್ದಾರೆ ಇದರಿಂದ ರೈತರಿಗೆ ಯಾವುದೇ ಪ್ರಯೋಜನವಿಲ್ಲ ಆನೆ ಹೊಟ್ಟೆಗೆ ಅರೆಕಾಸಿನ ಮಜ್ಜಿಗೆ ಹಾಕಿದಂತೆ ಆಗುತ್ತಿದೆ ಕೆಲವು ರೈತರು ರಾತ್ರಿಯೇ ಅಂಗಡಿ ಮುಂದೆ ಅನ್ನ ನೀರು ಇಲ್ಲದೆ ಮಳೆ ಚಳಿಯನ್ನದೆ ರಾತ್ರಿಯಿಡೀ ಅಲ್ಲಿಯೇ ಜಾಗರಣೆ ಮಾಡುವಂತ ಪರಿಸ್ಥಿತಿ ಎದುರಾಗಿದೆ ಇನ್ನು ಕೆಲವು ರೈತರು ನೆರೆಯ ತೆಲಂಗಾಣ ಆಂಧ್ರಪ್ರದೇಶಕ್ಕೆ ರಸಗೊಬ್ಬರ ತರಲು ತೆರಳುತ್ತಿರುವುದು ದುರಾದೃಷ್ಟಕರ ಸಂಗತಿ ರೈತರ ಸ್ಥಿತಿ ದಿನ ದಿನಕ್ಕೆ ಗಂಭೀರವಾಗುತ್ತಿದೆ ಈಗಾಗಲೇ ಉತ್ತಮ ಮಳೆಯಾಗಿದ್ದು ರಸ ಗೊಬ್ಬರದ ಅವಶ್ಯಕತೆ ಇದೆ ಕೇಂದ್ರ ರಾಜ್ಯ ಸರ್ಕಾರಗಳು ರಸಗೊಬ್ಬರದ ವಿಷಯದಲ್ಲಿ ರಾಜಕೀಯ ಮಾಡುವುದನ್ನು ಬಿಟ್ಟು ರೈತರಿಗೆ ಸಮರ್ಪಕ ರಸಗೊಬ್ಬರ ಒದಗಿಸುವಲ್ಲಿ ಕ್ರಮ ಕೈಗೊಳ್ಳಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ರಾಜ್ಯ ರೈತ ಸಂಘ ಹಸಿರು ಸೇನೆ ತಾಲೂಕು ಘಟಕದ ವತಿಯಿಂದ ಉಗ್ರ ಹೋರಾಟ ಮಾಡುವುದಾಗಿ ತಾಲ್ಲೂಕು ಗೌರವಾಧ್ಯಕ್ಷ ಶರಣು ಜಡಿ ವಡಗೇರಾ ಎಚ್ಚರಿಸಿದ್ದಾರೆ.



☛ ಉದಯವಾಹಿನಿ ಚಿತ್ರ



## ಧಾರಾಕಾರ ಮಳೆಗೆ ಹೊಲಗದ್ದೆಗಳಲ್ಲಿ ಬೆಳೆಗಳು ಜಲಾವೃತ,ರೈತರು ಕಂಗಾಲು

• **ಉದಯವಾಹಿನಿ,ಚಿಂಚೋಳಿ**

ತಾಲ್ಲೂಕಿನಲ್ಲಿ ಕಳೆದ ಎರಡು ದಿನಗಳಿಂದ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದ ಹೊಲಗದ್ದೆಗಳಲ್ಲಿ ನೀರು ನಿಂತುಕೊಂಡು ರೈತರು ಬೆಳೆದ ಬೆಳೆಗಳು ಸಂಪೂರ್ಣವಾಗಿ ಜಲಾವೃತವಾಗಲಿವೆ ರೈತರು ಕಂಗಾಲಾಗಿದ್ದಾರೆ, ಹಳ್ಳಕೊಳ್ಳಗಳು ನದಿಗಳು ತುಂಬಿ ಹರಿಯುತ್ತಿವೆ. ಸಾರ್ವಜನಿಕರು ತೊಂದರೆ ಪಡಬೇಕಾಗುತ್ತಿದೆ,ಕೆಳದಂಡೆ ಮುಲ್ಲಾಮಾರಿ ನದಿಗೆ ನಾಗರಾಳ ಜಾಲಶಯದಿಂದ ನೀರು ಬಿಡಲಾಗುತ್ತಿರುವುದರಿಂದ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಬ್ರೀಜ್ಡ್ ಗಳು ಚಿಮ್ಮಾನಚೋಡ, ಗಾರಂಪಳ್ಳಿ ,ತಾದಲಾಪೂರ,ಗರಗಪಳ್ಳಿ, ಅಣವಾರ,ಪೋಲಕಪಳ್ಳಿ ಬ್ರೀಜ್ಡ್ ಗಳು ಸಹ ಜಲಾವೃತವಾಗಿವೆ. ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಕೆಳಹಂತದಲ್ಲಿರುವ ಬ್ರೀಜ್ಡ್ ಗಳು ಮೇಲ್ದರ್ಜೆಗೆ ಏರಿಸಿಬೇಕು ಎಂದು ಯುವ ಹೋರಾಟಗಾರ ಗೋಪಾಲ ಗಾರಂಪಳಿ ಒತ್ತಾಯಿಸಿದ್ದಾರೆ.



☛ ಉದಯವಾಹಿನಿ ಚಿತ್ರ

## ಸಿಬ್ಬಂದಿ ಕೊರತೆ ನೀಗಿಸಲು ಮನವಿ

• **ಉದಯವಾಹಿನಿ ಭಾಲಿ**

ಕರ್ನಾಟಕ ರಾಜ್ಯ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪನವರಿಗೆ ಬೀದರಿನ ಅನುದಾನಿತ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರುಗಳ ನಿಯೋಗ ಭೇಟಿ ನೀಡಿ, ಅನುದಾನಿತ ಶಾಲಾ ಕಾಲೇಜುಗಳಲ್ಲಿ ತೆರವಾದ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಮನವಿ ಮಾಡಿದರು. ಬೀದರಿನ ಅನುದಾನಿತ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷರುಗಳ ನಿಯೋಗ, ಬೆಂಗಳೂರಿನ ಶಿಕ್ಷಣ ಸಚಿವರ ಶ್ರೀಅಮ್ಮಾ ನಿವಾಸ ಕಚೇರಿಗೆ ಭೇಟಿನೀಡಿ, ಸುಮಾರು ವರ್ಷಗಳಿಂದ ನಿವೃತ್ತಿ, ನಿಧನಗಳಿಂದ ತೆರವಾದ ಶಿಕ್ಷಕರ ಹುದ್ದೆಗಳನ್ನು ತಕ್ಷಣವೇ ಭರ್ತಿಮಾಡಿ, ಬಡ ಮಕ್ಕಳ ಶೈಕ್ಷಣಿಕ ವ್ಯವಸ್ಥೆಗೆ ಅನುಕೂಲ ಮಾಡಿಕೊಡಬೇಕು.

ಶಿಕ್ಷಕರ ಕೊರತೆಯಿಂದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶದಲ್ಲಿ ತುಂಬಾ ವ್ಯತ್ಯಾಸವಾಗುತ್ತಿದೆ. ಕಾರಣ ಆದಷ್ಟು ಬೇಗ ಕ. ಕರ್ನಾಟಕ ಭಾಗದ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಾಲಾ ಕಾಲೇಜುಗಳಲ್ಲಿಯ ಶಿಕ್ಷಕರ ಕೊರತೆ ನೀಗಿಸಬೇಕು ಎಂದು ಒತ್ತಾಯಿಸಿದರು.

## ಅಧಿಕ ಮಳೆ: ತೊಗರಿ ಬೆಳೆ ಹಾನಿ

• **ಉದಯವಾಹಿನಿ ಕಲಬುರಗಿ,**

ಜಿಲ್ಲೆಯ ಹಲವೆಡೆ ಅಧಿಕ ಮಳೆಯಿಂದಾಗಿ ತೊಗರಿ ಬೆಳೆ ಹಾನಿಯಾಗಿದೆ. ಬಿತ್ತನೆಯಾದ ಒಟ್ಟಾರೆ ಪ್ರದೇಶದಲ್ಲಿ ಶೇ.50 ರಷ್ಟು ಬೆಳೆ ಹಾನಿಯಾಗಿದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ತಿಳಿಸಿದ್ದಾರೆ.

ತೊಗರಿ ಕಣಜ ಎಂದೇ ಕರೆಯಲ್ಪಡುವ ಕಲಬುರಗಿ ಜಿಲ್ಲೆಯಲ್ಲಿ ಈ ಬಾರಿ ತೊಗರಿ ಇಳುವರಿ ಕಡಿಮೆಯಾಗುವ ಸಾಧ್ಯತೆಗಳಿಗೆ ಎಂದು ಅವರು ತಿಳಿಸಿದ್ದಾರೆ. ಬೆಳೆ ಹಾನಿಯಾದ ಪ್ರದೇಶಗಳಿಗೆ ಕೃಷಿ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಬೆಳೆ ಹಾನಿಯ ಸಮೀಕ್ಷೆ ನಡೆಸುವುದರ ಮೂಲಕ ಬೆಳೆಹಾನಿಯಾದ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಒದಗಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಬಸ್ ವ್ಯವಸ್ಥೆ ಮಾಡಿ ಪುಣ್ಯ ಕಟಗೋಳ್ರಿ... ವಿದ್ಯಾರ್ಥಿಗಳ ಗೋಳು

• **ಉದಯವಾಹಿನಿ ಯಾದಗಿರಿ**

ಸಮರ್ಪಕ ಸಾರಿಗೆ ವ್ಯವಸ್ಥೆ ಕಲ್ಪಿಸುವಂತೆ ವಡಗೇರಾ ತಾಲ್ಲೂಕಿನ ಹಾಲಗೇರಾ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ದಿಡೀರ್ ಸಾರಿಗೆ ಬಸ್ ತಡೆದು ಸಾಯಂಕಾಲ ಪ್ರತಿಭಟನೆ ನಡೆಸಿದ್ದಾರೆ.

ಯಾದಗಿರಿಯಿಂದ ಹಾಲಗೇರಾ ಮಾರ್ಗವಾಗಿ ಕಂದಳ್ಳಿ ಗ್ರಾಮಕ್ಕೆ ಸುಮಾರು 5:ಗಂಟೆಗೆ ಬಸ್ ಇದೆ ಈ ಬಸ್ಸು ಯಾದಗಿರಿಯಿಂದ ಬರುವಾಗಲೇ ಜನರನ್ನು ತುಂಬಿಕೊಂಡು ಬರುತ್ತದೆ ಕಾಲು ಇಡಲು ಕೂಡ ಜಾಗ ಇರುವುದಿಲ್ಲ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಈ ಭಾಗದ ಸುಮಾರು ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಶಿಕ್ಷಣ ಕಲಿಯಲು ಬರುತ್ತಾರೆ. ಹಾಲಗೇರಾ ಪ್ರೌಢಶಾಲೆ ಮಕ್ಕಳು ಗೋಡಿಹಾಳ, ಕುಮನೂರು, ಅರ್ಜುಣಗಿ, ಕಂದಳ್ಳಿಗೆ, ತೆರಳಬೇಕಾದರೆ ದಿನನಿತ್ಯ ಒಬ್ಬರ ಮೇಲೆ ಒಬ್ಬರು ಬಿದ್ದು ಹೋಗುವಂತ ಪರಿಸ್ಥಿತಿಯಿದೆ ಕೆಲವೊಂದು ಬಾರಿ ಸಾರಿಗೆ ಬಸ್ಸಿನ ಚಾಲಕರು ಬಸ್ ನಿಲ್ಲಿಸದೆ ಹಾಗೆ ಹೋದಾಗ ವಿದ್ಯಾರ್ಥಿಗಳು ಹತ್ತಾರು ಕಿಲೋಮೀಟರು ನಡೆದುಕೊಂಡೆ ಹೋಗಬೇಕು ಕೂಡಲೇ ಸಂಬಂಧಿಸಿದ ಸಾರಿಗೆ ಇಲಾಖೆಯ ಅಧಿಕಾರಿಗಳು ಸಾಯಂಕಾಲ 5:ಗಂಟೆ ಸುಮಾರಿಗೆ ಇನ್ನೊಂದು ಬಸ್ಸಿನ ವ್ಯವಸ್ಥೆ ಕಲ್ಪಿಸಬೇಕು ಒಂದು ವೇಳೆ ವಿಳಂಬ ಮಾಡಿದ್ದಲ್ಲಿ ನಾವು ಎಲ್ಲಾ ವಿದ್ಯಾರ್ಥಿಗಳು ಸೇರಿ ರಸ್ತೆಗೆ ಮುಳ್ಳು ಕಂಟಿ ಹಚ್ಚಿ ಪ್ರತಿಭಟನೆ ಮಾಡಬೇಕಾಗುತ್ತೆ ಎಂದು ವಿದ್ಯಾರ್ಥಿಗಳು ಒತ್ತಾಯಿಸಿದ್ದಾರೆ.



☛ ಉದಯವಾಹಿನಿ ಚಿತ್ರ

## ಪ್ಯಾರ ಮೆಡಿಕಲ್ ಕಾಲೇಜಿನಲ್ಲಿ ವಿಶ್ವ ಸಂಸ್ಕೃತ ದಿನ ಆಚರಣೆ

• **ಉದಯವಾಹಿನಿ ಸಿಂಧನೂರು**

ನಗರದ ಸನ್ ರೈಸ್ ಡಿ ಫಾರ್ಮಸಿ , ನರ್ಸಿಂಗ್ , ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ವಿಶ್ವ ಸಂಸ್ಕೃತ ದಿನಾಚರಣೆ ಅಂಗವಾಗಿ ಶ್ರೀ ಮನೋಜಕುಮಾರ ಬಾಪಟ. (ಒ.ಂ. ಸಂಸ್ಕೃತ. ಉಪನ್ಯಾಸಕರು ಹಾಗೂ ಸಂಸ್ಕೃತ ಪಂಡಿತರು ) ಇವರು ಗಿಡಕ್ಕೆ ನೀರು ಹಾಕುವುದರ ಮೂಲಕ ಉದ್ಘಾಟಿಸಿ ವಿಶೇಷ ಉಪನ್ಯಾಸ ನೀಡಿದ ಅವರು ಭಾರತೀಯ ಮೂಲ ಭಾಷೆ ಸಂಸ್ಕೃತ ಭಾಷೆ, ಭಾರತೀಯ ಎಲ್ಲಾ ಜ್ಞಾನ ವಿಜ್ಞಾನವು ಸಂಸ್ಕೃತದಲ್ಲಿ ಇದೆ. ಸಂಸ್ಕೃತ ಭಾಷೆ ಎಲ್ಲ ಭಾಷೆಗಳ ಮೂಲವಾಗಿದ್ದು, ದೇಶವನ್ನು ಒಂದು ಸೂತ್ರದ ಅಡಿಯಲ್ಲಿ ಜ್ಞಾನವನ್ನು ಕೊಡಲು ಬಹು ಸುಲಭ. ಇದೊಂದು ಯಾವುದೇ ಜಾತಿ, ಮತ , ಪಂಥದ ಭಾಷೆಯಲ್ಲದೆ ಸರ್ವ ಮಾನವ ಜನಾಂಗಕ್ಕೆ ಅಮೃತ ಪ್ರಾಯವಾಗಿದೆ...ವೇದ ವೇದಾಂತ ಪುರಾಣ, ರಾಮಾಯಣ ಮಹಾಭಾರತ, ಇನ್ನಿತರ ಅದ್ಭುತ ಗ್ರಂಥಗಳು.ಆಯುರ್ವೇದ ವಿಧಾನ ಶಾಸ್ತ್ರ, ಲೋಹ ಶಾಸ್ತ್ರ ಇನ್ನಿತರ ವೈಜ್ಞಾನಿಕ ಶಾಸ್ತ್ರಗಳು ಈ ಭಾಷೆಯ ಹಿರಿಮೆ.



☛ ಉದಯವಾಹಿನಿ ಚಿತ್ರ

**ಭಾರತೀಯ ಮೂಲ ಭಾಷೆ ಸಂಸ್ಕೃತ**

ಭಾರತದಲ್ಲಿ ಪ್ರತಿ ವರ್ಷ ಶ್ರಾವಣಿ ಪೂರ್ಣಿಮೆಯ ಪವಿತ್ರ ಸಂದರ್ಭವನ್ನು ಸಂಸ್ಕೃತ ದಿನವನ್ನಾಗಿ ಆಚರಿಸಲಾಗುತ್ತದೆ. 1969 ರಲ್ಲಿ, ಭಾರತ ಸರ್ಕಾರದ ಶಿಕ್ಷಣ ಸಚಿವಾಲಯದ ಆದೇಶದ ಮೂಲಕ, ಕೇಂದ್ರ ಮತ್ತು ರಾಜ್ಯ ಮಟ್ಟದಲ್ಲಿ ಸಂಸ್ಕೃತ ದಿನವನ್ನು ಆಚರಿಸಲು ಸೂಚನೆಗಳನ್ನು ನೀಡಲಾಯಿತು. ಅಂದಿನಿಂದ ಭಾರತದಾದ್ಯಂತ ಶ್ರಾವಣ ಪೂರ್ಣಿಮೆಯಂದು ಸಂಸ್ಕೃತ ದಿನವನ್ನು ಆಚರಿಸಲಾಗುತ್ತದೆ. ಪ್ರಾಚೀನ ಭಾರತದಲ್ಲಿ ಬೋಧನಾ ಅವಧಿಯು ಈ ದಿನದಂದು ಪ್ರಾರಂಭವಾದ ಕಾರಣ ಈ ದಿನವನ್ನು ಆಯ್ಕೆ ಮಾಡಲಾಗಿದೆ.

## ರೋಗಿಗಳ ಚಿಕಿತ್ಸೆಗೆ ಅಸಡ್ಡೆ ಸಹಿಸಲಾಗದು: ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಎಚ್ಚರಿಕೆ

• **ಉದಯವಾಹಿನಿ ಬೀದರ್**

ಬ್ರಿಮ್ಸ್ ಆಸ್ಪತ್ರೆಯಲ್ಲಿ ಅವ್ಯವಸ್ಥೆ ಹೆಚ್ಚಾಗಿದೆ. ಸೂಕ್ತ ಚಿಕಿತ್ಸೆ ಸಿಗದಿರುವ ಬಗ್ಗೆ ಹಾಗೂ ಅಗತ್ಯ ವ್ಯವಸ್ಥೆ ಕಲ್ಪಿಸದಿರುವ ಬಗ್ಗೆ ದಿನವೂ ರೋಗಿಗಳ, ಕುಟುಂಬಸ್ಥರ ಗೋಳು ಸಾಮಾನ್ಯವಾಗಿವೆ. ಸಮಸ್ಯೆ ಹೊತ್ತು ಬರುವವರಿಗೆ ಸೂಕ್ತ ಚಿಕಿತ್ಸೆ ನೀಡದೇ ಅಸಡ್ಡೆ ವಹಿಸುವುದು ಸಹಿಸಲಾಗದು ಎಂದು ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಎಚ್ಚರಿಸಿದ್ದಾರೆ. ಬ್ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ, ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಎಖ್ಖೆಳ್ಳಿಯಲ್ಲಿ ಇತ್ತೀಚೆಗೆ ನಾಯಿ ಕಡಿದು ಗಾಯಗೊಂಡ ಮಕ್ಕಳು ಸೇರಿದಂತೆ ಇತರೆ ರೋಗಿಗಳ ಆರೋಗ್ಯ ವಿಚಾರಿಸಿದ ಅವರು, ಆಸ್ಪತ್ರೆಯಲ್ಲಿ ಸಿಗುತ್ತಿರುವ ಚಿಕಿತ್ಸೆ ಹಾಗೂ ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದರು. ರೋಗಿಗಳು ಹಾಗೂ ಸಂಬಂಧಿಕರು ಹಲವಾರು ಗೋಳು ತೋಡಿಕೊಂಡಿದ್ದಕ್ಕೆ ಶಾಸಕರು ಬ್ರಿಮ್ಸ್ ಅವ್ಯವಸ್ಥೆ ಬಗ್ಗೆ ಸಿಡಿಮಿಡಿಗೊಂಡರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 750 ಹಾಸಿಗೆ ಆಸ್ಪತ್ರೆಯಿದೆ. ಕೋಟ್ಯಂತರ ಹಣ ಬರುತ್ತಿದೆ. ಇಷ್ಟಾದರೂ ಸೂಕ್ತ ಚಿಕಿತ್ಸೆ ಕಲ್ಪಿಸದಿರುವುದು ನೋವಿನ ಸಂಗತಿ. ಬರುವ ಆ.11ರಂದು ಶುರುವಾಗಲಿರುವ ವಿಧಾನಮಂಡಲ ಅಧಿವೇಶನದಲ್ಲಿ ಈ ವಿಷಯ ಪ್ರಸ್ತಾಪಿಸಿ ಗಡಿ ಜನರ ಆರೋಗ್ಯದ ಹಿತದಿಂದ ಸರ್ಕಾರದ ಗಮನ ಸೆಳೆಯುವೆ ಎಂದರು. ಮನ್ನಾಎಖ್ಖೆಳ್ಳಿಯಲ್ಲಿ ನಾಯಿ ಕಡಿತದಿಂದ ಗಾಯಗೊಂಡ ಬಾಲಕನಿಗೆ ಬ್ರಿಮ್ಸ್ ಆಸ್ಪತ್ರೆಗೆ ತರಲಾಗಿತ್ತು. ಆದರೆ ಇಲ್ಲಿ ರೇಬಿಸ್ ಇಂಜೆಕ್ಷನ್ ಇಲ್ಲ ಎಂದು ವೈದ್ಯರು ಹೇಳಿದರು. ಹೊರಗಿನಿಂದ ಇಂಜೆಕ್ಷನ್ ತರಬೇಕಾಯಿತು. ಔಷಧಿ ಕೊರತೆ ಇರುವ ಬಗ್ಗೆ ಚಿಕಿತ್ಸೆ ಬಾಲಕನ ಪಾಲಕರು ನನಗೆ ದೂರವಾಣಿ ಮೂಲಕ ತಿಳಿಸಿದರು. ನಾನು ತಕ್ಷಣ ಜಿಲ್ಲಾಧಿಕಾರಿಗಳ ಗಮನಕ್ಕೆ ವಿಷಯ ತಂದಿದ್ದೇನೆ. ಡಿಸಿ ಅವರು ವಿಷಯ ಗೊತ್ತಾದ ತಕ್ಷಣ ಬ್ರಿಮ್ಸ್ ಭೇಟಿ ನೀಡಿ ಸಮಗ್ರ ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ರೇಬಿಸ್ ಇಂಜೆಕ್ಷನ್ ಸ್ಟಾಕ್ ಇರುವುದು ಪತ್ತೆಯಾಗಿದೆ. ಸ್ಟಾಕ್ ಇದ್ದರೂ ಇಂಜೆಕ್ಷನ್ ಕೊಡದಿರುವುದು ತಪ್ಪು ಎಂದು ಕಿಡಿಕಾರಿದರು.



☛ ಉದಯವಾಹಿನಿ ಚಿತ್ರ

# ವಾಹನಗಳ ಉದ್ಘಾಟನೆ, ವಿವಿಧ ಅಭಿವೃದ್ಧಿ ಕಾಮಗಾರಿಗಳ ಗುದ್ದಲಿ ಪೂಜೆ

### ನಾಗರೀಕರು ಮನೆಯಲ್ಲಿಯೇ ಹಸಿ ಕಸ–ಒಣ ಕಸ ವಿಂಗಡಿಸಿ, ನಗರಸಭೆ ವಾಹನಗಳಿಗೆ ನೀಡಬೇಕು: ಕೆ.ಸಿ.ವೀರೇಂದ್ರ ಪಪ್ಪಿ

• **ಉದಯವಾಹಿನಿ ಚಿತ್ರದುರ್ಗ**

ಚಿತ್ರದುರ್ಗ ನಗರದ ಪ್ರತಿ ವಾರ್ಡ್‌ಗೂ ಸಹ ಮುಂದಿನ ವಾರದಿಂದ ಕಸ ಸಂಗ್ರಹಣೆ ವಾಹನ ಬರಲಿದ್ದು, ನಗರದ ನಾಗರೀಕರು ಮನೆಯಲ್ಲಿಯೇ ಹಸಿ ಕಸ–ಒಣ ಕಸ ವಿಂಗಡಿಸಿ, ನಗರಸಭೆ ವಾಹನಗಳಿಗೆ ನೀಡಬೇಕು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳದರು.

ನಗರದ ನಗರಸಭೆ ಕಚೇರಿ ಆವರಣದಲ್ಲಿ ಶನಿವಾರ ಚಿತ್ರದುರ್ಗ ನಗರಸಭೆಗೆ ವಿವಿಧ ಯೋಜನೆಗಳಡಿ ಖರೀದಿಸಿರುವ ವಾಹನಗಳ ಉದ್ಘಾಟನೆ ಹಾಗೂ ವಿವಿಧ ಅಭಿವೃದ್ಧಿ ಕಾಮಗಾರಿಗಳ ಗುದ್ದಲಿ ಪೂಜೆ ಕಾರ್ಯಕ್ರಮ ನೆರವೇರಿಸಿ ಅವರು ಮಾತನಾಡಿದರು.

ಸಾರ್ವಜನಿಕರು ಚರಂಡಿ, ಗುಂಡಿ, ರಸ್ತೆ ಸೇರಿದಂತೆ ಅನ್ಯ ಸ್ಥಳಗಳಲ್ಲಿ ಕಸ ಹಾಕದೆ, ಒಂದು ಕಡೆ ಸಂಗ್ರಹಿಸಿ, ನಗರಸಭೆಯ ಕಸ ಸಂಗ್ರಹಣೆಯ ವಾಹನಗಳಿಗೆ ನೀಡಬೇಕು. ಕಸವನ್ನು ವೈಜ್ಞಾನಿಕವಾಗಿ ವಿಂಗಡಿಸಿ ವಿಲೇವಾರಿ ಮಾಡುವುದು ಪ್ರತಿಯೊಬ್ಬ ನಾಗರಿಕರ ಕರ್ತವ್ಯವಾಗಿದೆ ಎಂದು ಹೇಳಿದರು.

2023–24ನೇ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನ ರೂ. 100 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರಸಭೆ ವ್ಯಾಪ್ತಿಯ ದಿನನಿತ್ಯದ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ ಪ್ರತಿ ಮನೆಯ ಕಸ ಸಂಗ್ರಹಣೆಗಾಗಿ ಮಿನಿ ಟಿಪ್ಪರ್‌ಗಳು, ರೂ.29.16 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರಸಭೆ ಕಚೇರಿ ಹಿಂಭಾಗದಲ್ಲಿ ಘನತ್ಯಾಜ್ಯ ವಿಲೇವಾರಿ ಘಟಕದ ವಾಹನಗಳನ್ನು ನಿಲುಗಡೆಗೆ ಶೆಡ್ ನಿರ್ಮಾಣ ಕಾಮಗಾರಿ, 2021–22ನೇ ಅನ್ ಡಿಸ್ಟ್ರಿಬ್ಯೂಟ್ ಮಿಲಿಯನ್ ಪ್ಲಸ್ ಸಿಟಿ ಅನುದಾನ ರೂ.24 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರಸಭೆಗೆ ವ್ಯಾಪ್ತಿಯಲ್ಲಿ ಒಳಚರಂಡಿ ನಿರ್ವಹಣೆಗಾಗಿ ಮಿನಿ ಜಟ್ಟಿಂಗ್ ಯಂತ್ರ, 2022–23ನೇ 15ನೇ ಹಣಕಾಸು ಮೂಲ ಅನುದಾಬ ರೂ.18 ಲಕ್ಷ ವೆಚ್ಚದ ಚಿತ್ರದುರ್ಗ ನಗರಸಭೆ ವ್ಯಾಪ್ತಿಗೆ ಜೀಪ್ ಮೌಂಟೆಂಡ್ ಸಿಲ್ಟ್ ತೆಗೆಯುವ ವಾಹನ, ಎಸ್‌ಎಫ್‌ಸಿ ಮತ್ತು ನಗರಸಭೆ ನಿಧಿ ರೂ.24 ಲಕ್ಷ ವೆಚ್ಚದಲ್ಲಿ 2022–23, 2023–24 ಮತ್ತು 2024–25ನೇ ಸಾಲಿನ ಎಸ್‌ಎಫ್‌ಸಿ ಮತ್ತು ನಗರಸಭೆ ನಿಧಿಯಡಿಯಲ್ಲಿ ಶೇ.5ರ ಯೋಜನೆಯಡಿಯಲ್ಲಿ ವಿಕಲಚೇತನರಿಗೆ 15 ಮೂರು ಚಕ್ರದ ವಾಹನ, ಸಿಎಸ್ ಆರ್ ಅನುದಾನದಲ್ಲಿ ಬಿಇಎಲ್ ಸಂಸ್ಥೆಯಿಂದ ಸಿ.ಎಸ್ ಆರ್ ಅನುದಾನದಲ್ಲಿ ಘನತ್ಯಾಜ್ಯ ವಸ್ತು ವಿಲೇವಾರಿಗೆ ವಿದ್ಯುತ್ ಚಾಲಿತ 18 ಮೂರು ಚಕ್ರದ ಆಟೋ ವಾಹನಗಳನ್ನು ಹಾಗೂ 2 ಫಾಗಿಂಗ್ ವಾಹನಗಳನ್ನು ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ ಉದ್ಘಾಟಿಸಿದರು. ಚಿತ್ರದುರ್ಗ ನಗರದ ಲಿಡ್ಕರ್ ಕಟ್ಟಡದ ಮುಂಭಾಗದಲ್ಲಿ 2025–26ನೇ ಸಾಲಿನ 15ನೇ ಹಣಕಾಸು ಅನುದಾನ ರೂ.25 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರದ ವಾರ್ಡ್ ನಂ.27ರಲ್ಲಿ ಲಿಡ್ಕರ್ ಪಕ್ಕದ ರಸ್ತೆ ಮತ್ತು ಏರೋಪ್ಲೇನ್ ಬಿಲ್ಡಿಂಗ್ ಹತ್ತಿರ ಸಿ.ಸಿ.ರಸ್ತೆ ನಿರ್ಮಾಣ ಹಾಗೂ ಯುಜಿಡಿ ಕಾಮಗಾರಿಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಉಪಾಧ್ಯಕ್ಷೆ ಶಕೀಲಾಭಾನು, ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸರುಲ್ಲಾ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಪೌರಾಯುಕ್ತೆ ಎಂ. ರೇಣುಕಾ ಸೇರಿದಂತೆ ನಗರಸಭೆ ಸದಸ್ಯರು ಇದ್ದರು.



☛ ಉದಯವಾಹಿನಿ ಚಿತ್ರ

**ವಾರ್ಡಿಗೊಂದು ಕಸ ಸಂಗ್ರಹಣೆ ವಾಹನ**

**ಮಳಿಗೆ ನಿರ್ಮಾಣ ಕಾಮಗಾರಿ ಚಾಲನೆ**

**ಚಿತ್ರದುರ್ಗ ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ ಉದ್ಯಮ ನಿಧಿ ಅನುದಾನ ರೂ.43 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರದ ಮೆದೇಹಳ್ಳಿ ರಸ್ತೆಯ ಖಾಸಗಿ ಬಸ್ ನಿಲ್ದಾಣದಲ್ಲಿ ನೆಲ ಹಾಗೂ ಮೊದಲ ಅಂತಸ್ತು ವಾಣಿಜ್ಯ ಮಳಿಗೆ ನಿರ್ಮಾಣ ಕಾಮಗಾರಿ ಚಾಲನೆ, ಚಿತ್ರದುರ್ಗ ನಗರದ ಮಾರುತಿ ನಗರದ ರೈಲ್ವೆ ಟ್ರ್ಯಾಕ್ ಪಕ್ಕದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನ ರೂ.30 ಲಕ್ಷ ವೆಚ್ಚದಲ್ಲಿ ವಾರ್ಡ್ ನಂ.19ರ ಮೆದೇಹಳ್ಳಿ ರಸ್ತೆಯ ರೈಲ್ವೆ ಟ್ರ್ಯಾಕ್ ಬಲಭಾಗ ಮಾರುತಿ ನಗರದಲ್ಲಿ ಸಿ.ಸಿ.ಚರಂಡಿ ಮತ್ತು ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಿದರು.**

**ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ**

**ತುರುವನೂರು ರಸ್ತೆಯ ವಿ.ಆರೆಸ್ ಲೇಔಟ್‌ನಲ್ಲಿ ಮಧ್ಯಾಹ್ನ 1.40ಕ್ಕೆ ನಗರಸಭೆ ನಿಧಿ ಅನುದಾನ ರೂ.42.20 ಲಕ್ಷ ವೆಚ್ಚದಲ್ಲಿ ಚಿತ್ರದುರ್ಗ ನಗರದ ತುರುವನೂರು ರಸ್ತೆಯ ವಿ.ಆರ್.ಎಸ್. ಲೇಔಟ್‌ನಲ್ಲಿ ಚರಂಡಿ ಮತ್ತು ಡೆಕ್‌ಸ್ಲಾಬ್ ನಿರ್ಮಾಣ ಕಾಮಗಾರಿ, ಮಧ್ಯಾಹ್ನ 2ಕ್ಕೆ 2021–22ನೇ ಸಾಲಿನ 15ನೇ ಹಣಕಾಸು ಅನುದಾನ ರೂ.32.58 ಲಕ್ಷ ವೆಚ್ಚದಲ್ಲಿ ವಾರ್ಡ್ ನಂ.29ರ ಬ್ಯಾಂಕ್ ಕಾಲೋನಿ ರಾಮಚಂದ್ರಪ್ಪ ಮನೆಯಿಂದ ತಿಪ್ಪಾರೆಡ್ಡಿಯವರ ಮನೆಯವರೆಗೆ ಸಿ.ಸಿ.ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಯಿತು.**

## ಇಬ್ಬರು ಯೋಧರು ಹುತಾತ್ಮ

**ಶ್ರೀನಗರ:** ಭಯೋತ್ಪಾದಕರ ವಿರುದ್ಧದ ಕಾರ್ಯಾಚರಣೆ ಮುಂದುವರೆದಿದ್ದು, ದಕ್ಷಿಣ ಕಾಶೀರದ ಕುಲ್ಗಾಮ್ ಜಿಲ್ಲೆಯ ಅಕಾಲ್ ಪ್ರದೇಶದಲ್ಲಿ ಉಗ್ರರೊಂದಿಗೆ ನಡೆಯುತ್ತಿರುವ ಎನ್ ಕೌಂಟರ್‌ನಲ್ಲಿ ಇಬ್ಬರು ಯೋಧರು ಹುತಾತ್ಮರಾಗಿದ್ದಾರೆ.

ಭಯೋತ್ಪಾದಕರೊಂದಿಗಿನ ಕಾರ್ಯಾಚರಣೆ 9ನೇ ದಿನಕ್ಕೆ ಕಾಲಿಟ್ಟಿದ್ದು, ಭಯೊತ್ಪಾದನಾ ವಿರೋಧಿ ಸುದೀರ್ಘ ಕಾರ್ಯಾಚರಣೆ ಇದಾಗಿದೆ. ಸೇನಾಧಿಕಾರಿಗಳ ಮಾಹಿತಿ ಪ್ರಕಾರ ಹುತಾತರಾದ ಸೈನಿಕರನ್ನು ಲ್ಯಾನ್ಸ್ ನಾಯಕ್ ಪ್ರೀತ್ ಪಾಲ್ ಸಿಂಗ್ ಮತ್ತು ಅರ್ಮಿಂದರ್ ಸಿಂಗ್ ಎಂದು ಗುರುತಿಸಲಾಗಿದೆ.

ಆ.1 ರಂದು ಪ್ರಾರಂಭವಾದ ಕಾರ್ಯಾಚರಣೆಯಲ್ಲಿ ಈವರೆಗೆ 9 ಮಂದಿ ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ. ಮೊದಲ ಎರಡು ದಿನಗಳಲ್ಲಿ ಇಬ್ಬರು ಭಯೋತ್ಪಾದಕರನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿತ್ತು ಎಂದು ಭಾರತೀಯ ಸೇನೆ ದೃಢಪಡಿಸಿದೆ.

## ಪಾಕ್ ಪಡೆಗಳಿಂದ ಅಫ್ಘಾನಿಸ್ತಾನ ಗಡಿ ಬಳಿ 47 ಉಗ್ರರ ಹತ್ಯೆ

**ಬಲೂಚಿಸ್ತಾನ:** ಕಳೆದ ಎರಡು ದಿನಗಳಲ್ಲಿ ಅಫ್ಘಾನಿಸ್ತಾನ ಗಡಿ ಬಳಿಯ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಪಾಕಿಸ್ತಾನ ಭದ್ರತಾ ಪಡೆಗಳು ಕನಿಷ್ಠ 47 ಭಯೋತ್ಪಾದಕರನ್ನು ಹತ್ಯೆ ಮಾಡಿವೆ ಎಂದು ಪಾಕ್ ಸೇನೆ ಮಾಧ್ಯಮ ವಿಭಾಗ ತಿಳಿಸಿದೆ. ಆಗಸ್ಟ್ 7-8 ರ ಮಧ್ಯರಾತ್ರಿ ಝೋಬ್ ಜಿಲ್ಲೆಯ ಸಂಬಾಜಾದಲ್ಲಿ ಭದ್ರತಾ ಪಡೆಗಳು ಉಗ್ರ ವಿರೋಧಿ ಕಾರ್ಯಾಚರಣೆ ನಡೆಸಿ 33 ಭಯೋತ್ಪಾದಕರನ್ನು ಕೊಂದಿವೆ ಎಂದು ಇಂಟರ್-ಸರ್ವೀಸಸ್ ಪಬ್ಲಿಕ್ ರಿಲೇಶನ್ಸ್ ಪ್ರಕಟಣೆಯಲ್ಲಿ ತಿಳಿಸಿದೆ.

ಆಗಸ್ಟ್ 8-9 ರ ಮಧ್ಯರಾತ್ರಿ ಅಫ್ಘಾನಿಸ್ತಾನ ಗಡಿಯಲ್ಲಿರುವ ಸಂಬಾಜಾ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆದ ಮತ್ತೊಂದು ಕಾರ್ಯಾಚರಣೆಯಲ್ಲಿ ಇನ್ನೂ 14 ಭಯೋತ್ಪಾದಕರನ್ನು ತಟಸ್ಥಗೊಳಿಸಲಾಗಿದೆ ಎಂದು ಐಎಸ್‌ಪಿಆರ್ ತಿಳಿಸಿದೆ.

ಹತ್ಯೆಗೀಡಾದ ಭಯೋತ್ಪಾದಕರಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರ, ಮದ್ದುಗುಂಡುಗಳು ಮತ್ತು ಸ್ಫೋಟಕಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ ಎಂದು ಐಎಸ್‌ಪಿಆರ್ ಹೇಳಿದೆ.

## ಚೀನಾಕ್ಕೆ ವಿನಾಯ್ತಿ ನೀಡಿ ಭಾರತದ ಮೇಲೆ ಅಮೆರಿಕ ದುಪ್ಪಟ್ಟು ಸುಂಕ

**ವಾಷಿಂಗ್ಟನ್:** ರಷ್ಯಾ ಮತ್ತು ಚೀನಾದಿಂದ ಭಾರತವನ್ನು ದೂರ ತರುವ ಅಮೆರಿಕದ ದಶಕಗಳ ಪ್ರಯತ್ನಗಳಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಧಕ್ಕೆ ತಂದಿದ್ದಾರೆ ಎಂದು ಅವರ ಮಾಜಿ ಆಪ್ತ ಜಾನ್ ಬೋಲ್ಟನ್ ಹೇಳಿದ್ದಾರೆ. ರಷ್ಯಾದ ತೈಲ ಖರೀದಿಸಲು ಅಮೆರಿಕವು ಭಾರತದ ಮೇಲೆ ಹೇರಿರುವ ಭಾರಿ ಸುಂಕದ ಅಂಶವನ್ನು ಉಲ್ಲೇಖಿಸಿ ಮಾತನಾಡಿರುವ ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರರು ಆದ ಬೋಲ್ಟನ್, ಚೀನಾದೊಂದಿಗೆ ಮೃಧುತ್ವದೊಂದಿಗೆ ಭಾರತದ ವಿರುದ್ಧ ಟ್ರಂಪ್ ಪಕ್ಷಪಾತ ಮಾಡುತ್ತಿದ್ದಾರೆ. ಇದು ಅಗಾಧವಾದ ತಪ್ಪು ಎಂದಿದ್ದಾರೆ.

ಟ್ರಂಪ್ ಏಪ್ರಿಲ್‌ನಲ್ಲಿ ಚೀನಾದೊಂದಿಗೆ ಕಿರು ವ್ಯಾಪಾರ ವಾರ್ ನಲ್ಲಿ ತೊಡಗಿದ್ದರು ಆದರೆ ತದನಂತರ ಯಾವುದೇ ಬಿಕ್ಕಟ್ಟು ಸೃಷ್ಟಿಯಾಗದಂತೆ ತಡೆಹಿಡಿಯಲಾಗಿತ್ತು. ಒಪ್ಪಂದವೊಂದು ಇನ್ನೂ ಬಾಕಿಯಿದೆ. ಈ ಮಧ್ಯೆ ಭಾರತದ ವಿರುದ್ಧ ಶೇ.50 ರಷ್ಟು ಸುಂಕ ವಿಧಿಸಿದ್ದಾರೆ. ಸುಂಕಗಳು ಯುಎಸ್‌ಗೆ ಕೆಟ್ಟ ಫಲಿತಾಂಶ ಕ್ಕೆ ಕಾರಣವಾಗಿವೆ. ಏಕೆಂದರೆ ಭಾರತವು ನಿರೀಕ್ಷಿಸಿದ್ದಕ್ಕಿಂತ ತುಂಬಾ ಋಣಾತ್ಮಕವಾಗಿ ಪ್ರತಿಕ್ರಿಯಿಸಿದೆ. ಏಕೆಂದರೆ ಚೀನಾಕ್ಕೆ ಸುಂಕ ವಿಧಿಸಲಾಗುತ್ತಿಲ್ಲ ಎಂದು ಬೋಲ್ಟನ್ ಹೇಳಿದ್ದಾರೆ.

ಸಿಎನ್‌ಎನ್‌ನೊಂದಿಗೆ ಮಾತನಾಡಿದ ಅವರು, ರಷ್ಯಾವನ್ನು ನೋಯಿಸುವ ಉದ್ದೇಶದಿಂದ ಭಾರತದ ಮೇಲೆ ದುಪ್ಪಟ್ಟು ಶುಲ್ಕದಿಂದ ಭಾರತ ರಷ್ಯಾ, ಚೀನಾಕ್ಕೆ ಹತ್ತಿರವಾಗಬಹುದು. ಬಹುಶಃ ಅಮೆರಿಕ ವಿರುದ್ಧ ಒಟ್ಟಿಗೆ ಮಾತುಕತೆ ನಡೆಸುವಂತೆ ಮಾಡಬಹುದು.ಚೀನಿಯರ ಮೇಲಿನ ಟ್ರಂಪ್ ಅವರ ಮೃದುತ್ವ ಮತ್ತು ಭಾರತದ ಮೇಲಿನ ಭಾರೀ ಸುಂಕಗಳು ಭಾರತವನ್ನು ರಷ್ಯಾ ಮತ್ತು ಚೀನಾದಿಂದ ದೂರ ತರಲು ದಶಕಗಳ ಅಮೆರಿಕದ ಪ್ರಯತ್ನಗಳಿಗೆ ಅಪಾಯವನ್ನುಂಟುಮಾಡುತ್ತವೆ ಎಂದು ಟ್ರಂಪ್ ಅವರ ಮಾಜಿ ಆಪ್ತರು ಪ್ರತಿಪಾದಿಸಿದ್ದಾರೆ.

## ಹಳಿತಪ್ಪಿದ ಎರಡು ಗೂಡ್ಸ್‌ರೈಲು, ಸಂಚಾರದಲ್ಲಿ ಭಾರಿ ವ್ಯತ್ಯಯ

**ಸೆರೈಕೆಲಾ:** ಜಾರ್ಖಂಡ್‌ನ ಸೆರೈಕೆಲಾ-ಖಾರ್ಸ್ವಾನ್ ಜಿಲ್ಲೆಯ ಚಾಂಡಿಲ್ ನಿಲ್ದಾಣದ ಬಳಿ ಬೆಳಗ್ಗೆ ಎರಡು ಗೂಡ್ಸ್ ರೈಲುಗಳ 20ಕ್ಕೂ ಹೆಚ್ಚು ಬೋಗಿಗಳು ಹಳಿತಪ್ಪಿದ್ದು, ಆಗ್ನೇಯ ರೈಲ್ವೆಯ ಚಾಂಡಿಲ್-ಟಾಟಾನಗರ ವಿಭಾಗದ ನಡುವಿನ ರೈಲು ಸೇವೆಯ ಮೇಲೆ ಪರಿಣಾಮ ಬೀರಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಘಟನೆಯಲ್ಲಿ ಯಾರಿಗೂ ಯಾವುದೇ ಗಾಯಗಳಾಗಿರುವ ಬಗ್ಗೆ ವರದಿಯಾಗಿಲ್ಲ ಎಂದು ಅವರು ಹೇಳಿದ್ದಾರೆ. ರೈಲು ಹಳಿತಪ್ಪಿದ ಪರಿಣಾಮ ಚಾಂಡಿಲ್‌ನಿಂದ ಹೊರಡುವ ಮತ್ತು ಆಗಮಿಸುವ ರೈಲು ಸೇವೆಗಳಲ್ಲಿ ವ್ಯತ್ಯಯವಾಗಿದೆ ಎಂದು ಹಿರಿಯ ವಿಭಾಗೀಯ ವಾಣಿಜ್ಯ ವ್ಯವಸ್ಥಾಪಕ(ಆದ್ರಾ ವಿಭಾಗ) ವಿಕಾಶ್ ಕುಮಾರ್ ಅವರು ತಿಳಿಸಿದ್ದಾರೆ. ಪಾಟ್ನಾ-ಟಾಟಾನಗರ ವಂದೇ ಭಾರತ್ ಎಕ್ಸ್‌ಪ್ರೆಸ್, ಟಾಟಾ-ಕತಿಹಾರ್ ಎಕ್ಸ್‌ಪ್ರೆಸ್, ಟಾಟಾ-ಆರಾ ಎಕ್ಸ್‌ಪ್ರೆಸ್ ರೈಲು ರದ್ದಾಗಿವೆ ಎಂದು ರೈಲ್ವೆ ಪ್ರಕಟಣೆ ತಿಳಿಸಿದೆ.

## ಯುಎಸ್ ಆಮದು ಸುಂಕದಿಂದ ಚಿನ್ನದ ಗಟ್ಟಿಗಳಿಗೆ ವಿನಾಯ್ತಿ ಸಾಧ್ಯತೆ

**ಚೆನ್ನೈ:** ಅಮೆರಿಕ ಇತ್ತೀಚೆಗೆ ವಿಧಿಸಲಾದ ಸುಂಕಗಳಿಂದ ಚಿನ್ನದ ಗಟ್ಟಿ ಆಮದುಗಳಿಗೆ ವಿನಾಯಿತಿ ನೀಡುವ ನಿರೀಕ್ಷೆಯಿದೆ. ಬುಲಿಯನ್ ಮಾರುಕಟ್ಟೆಯಲ್ಲಿನ ಸಪಿರಿಳಿತ ಇದಕ್ಕೆ ಕಾರಣ ಎನ್ನಲಾಗಿದೆ.

ಜುಲೈ 31, 2025 ರಂದು ಅಮೆರಿಕದ ಕಸ್ಟಮ್ಸ್ ಮತ್ತು ಬಾರ್ಡರ್ ಪ್ರೊಟೆಕ್ಷನ್ ಹೊರಡಿಸಿದ ಆದೇಶವೊಂದರಲ್ಲಿ ಒಂದು ಕಿಲೋ ಮತ್ತು 00-ಔನ್ಸ್ ಚಿನ್ನದ ಬಾರ್ ಗಳನ್ನು ಸುಂಕದ ವರ್ಗದ ಅಡಿಯಲ್ಲಿ ಮರುವರ್ಗೀಕರಿಸಲಾಗಿದೆ ಮತ್ತು ಅವುಗಳನ್ನು ಶೇ. 39 ರಷ್ಟು ಪರಸ್ಪರ ಸುಂಕಕ್ಕೆ ಒಳಪಡಿಸಲಾಗಿದೆ. ಇದು ಅಂತಹ ಚಿನ್ನಕ್ಕೆ ವಿನಾಯಿತಿ ಸಿಗಲಿದೆ ಎಂಬ ಧೀರ್ಘಾ ಕಾಲದ ಊಹೆಯನ್ನು ಸುಳ್ಳು ಮಾಡಿದೆ. ಯುಎಸ್ ನಿರ್ಧಾರ ಜಾಗತಿಕ ಬುಲಿಯನ್ ಮಾರುಕಟ್ಟೆಯಲ್ಲಿ ಚಿನ್ನದ ಸಾಗಾಟಕ್ಕೆ ಅಡ್ಡಿಯನ್ನುಂಟು ಮಾಡಿದೆ. ಈ ಬಾರ್‌ಗಳ ಪ್ರಮುಖ ಪೂರೈಕೆದಾರರಾದ ಸ್ವಿಸ್ ರಿಫೈನರ್‌ಗಳು ಅಮೆರಿಕಕ್ಕೆ ಚಿನ್ನ ಸಾಗಾಣಿಕೆಯನ್ನು ರದ್ದುಗೊಳಿಸಿದ್ದಾರೆ.

ಇದರಿಂದಾಗಿ ಪ್ರತಿ ಔನ್ಸ್ ಚಿನ್ನದ ಬೆಲೆಯು ಸುಮಾರು 3.534 ಡಾಲರ್ ಗೆ ತಲುಪಿದೆ ಎಂದು ವರದಿಗಳು ಹೇಳಿವೆ.


ಮುಂಬರುವ ಆದೇಶದಲ್ಲಿ ಯುಎಸ್ ಆದೇಶ ತಪ್ಪು ಮಾಹಿತಿ ಎಂದು ಹೊರಡಿಸಲಿದ್ದು, ಚಿನ್ನದ ಬಾರ್ ಆಮದು ಸುಂಕದಿಂದ ವಿನಾಯಿತಿ ಪಡೆಯುವುದು ಖಚಿತ ಎಂದು ಶ್ವೇತ ಭವನದ ಅಧಿಕಾರಿಗಳು ಹೇಳಿದ್ದಾರೆ. ಈ ಕ್ರಮವು ಮಾರುಕಟ್ಟೆಯಲ್ಲಿ ವಿಶ್ವಾಸವನ್ನು ಮರುಸ್ಥಾಪಿಸುವ ನಿರೀಕ್ಷೆಯಿದೆ.

ದಿಢೀರ್ ಸುಂಕಗಳ ಏರಿಕೆ ನ್ಯೂಯಾರ್ಕ್ ಮತ್ತು ಲಂಡನ್‌ನಲ್ಲಿನ ಬುಲಿಯನ್ ವ್ಯಾಪಾರ ಕೇಂದ್ರಗಳ ಮೇಲೆ ತೀವ್ರ ಅಡ್ಡಿಯನ್ನುಂಟು ಮಾಡಬಹುದು. ಅಮೆರಿಕದ ಭವಿಷ್ಯದ ಮಾರುಕಟ್ಟೆಯ ರಚನೆಯನ್ನು ದುರ್ಬಲಗೊಳಿಸಬಹುದು ಎಂದು ಉದ್ಯಮದ ಪ್ರಮುಖರು ಎಚ್ಚರಿಸಿದ್ದಾರೆ. ಈ ಸಂಬಂಧ ಕಾರ್ಯಕಾರಿ ಆದೇಶ ಶೀಘ್ರದಲ್ಲಿಯೇ ಹೊರಬೀಳುವ ಸಾಧ್ಯತೆಯಿದೆ.

## ವಿಚ್ಛೇದನ ಬದಲಿಗೆ ಪತಿಯಿಂದ ಮಗು ಕೇಳಿದ ಪತ್ನಿ

**ನಾಂದೇಡ್:** ಗಂಡ ಹೆಂಡತಿ ನಡುವಿನ ವಿವಾದವು ಮಾತುಕತೆಯ ಮೂಲಕ ಪರಿಹರಿಸಲಾಗದಷ್ಟು ಹೆಚ್ಚಾದಾಗ, ವಿಚ್ಛೇದನದ ಹಾದಿ ಅನಿವಾರ್ಯವಾಗುತ್ತದೆ.ವಿಚ್ಛೇದನದ ನಂತರ, ಇಬ್ಬರ ಸಂಬಂಧವು ಕೊನೆಗೊಳ್ಳುವುದರ ಜೊತೆಗೆ ಇಬ್ಬರ ದಾರಿಗಳು ಬೇರೆ ಬೇರೆ ಆಗುತ್ತದೆ. ದೇಶಾದ್ಯಂತ ಕೌಟುಂಬಿಕ ನ್ಯಾಯಾಲಯಗಳಲ್ಲಿ ಅನೇಕ ವಿಚ್ಛೇದನ ಪ್ರಕರಣಗಳು ನಡೆಯುತ್ತಿವೆ, ಅದರಲ್ಲಿ ಒಂದು ವಿಶಿಷ್ಟ ಪ್ರಕರಣ ಬೆಳಕಿಗೆ ಬಂದಿದೆ. ಈ ಪ್ರಕರಣವನ್ನು ಕೇಳಿ ನ್ಯಾಯಾಧೀಶರು ಸಹ ಆಶ್ಚರ್ಯಚಕಿತರಾಗಿದ್ದಾರೆ.

ಮಹಾರಾಷ್ಟ್ರದ ನಾಂದೇಡ್ ಕೌಟುಂಬಿಕ ನ್ಯಾಯಾಲಯದಲ್ಲಿ ದಂಪತಿಗಳ ಪ್ರಕರಣ ಬಹು ಚರ್ಚೆಯ ವಿಷಯವಾಗಿದೆ. ಪತ್ನಿ ವಿಚ್ಛೇದನಕ್ಕೆ ಪ್ರತಿಯಾಗಿ ತನ್ನ ಪತಿಯಿಂದ ಮಗುವನ್ನು ಕೇಳಿದ್ದಾಳೆ. ತನ್ನ ಪತಿಯಿಂದ ಒಮ್ಮೆ ಗರ್ಭಿಣಿಯಾಗಲು ಬಯಸುತ್ತೇನೆ ಎಂದು ನ್ಯಾಯಾಲಯದಲ್ಲಿ ಹೇಳಿದ್ದಾಳೆ. ಈ ಬೇಡಿಕೆ ನ್ಯಾಯಾಲಯದಲ್ಲಿ ಕೆಲ ಕಾಲ ಮೌನ ಸೃಷ್ಟಿಸಿದೆ ಈ ದಂಪತಿಗೆ ಈಗಾಗಲೇ ಒಂದು ಮಗು ಇದೆ, ಆದರೆ ಪತ್ನಿ ವಿಚ್ಛೇದನಕ್ಕೆ ಮುನ್ನ ಮತ್ತೊಂದು ಮಗುವನ್ನು ಬಯಸಿ ತಮ್ಮ ಬೇಡಿಕೆ ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಮಹಿಳೆಯ ಈ ಬೇಡಿಕೆಯನ್ನು ಆಲಿಸಿದ ನ್ಯಾಯಾಲಯವು ಆಕೆಗೆ ತಾಯಿಯಾಗಲು ಅವಕಾಶ ನೀಡಿದೆ.



ನ್ಯಾಯಾಲಯ ಐವಿಎಫ್ ತಂತ್ರಜ್ಞಾನದ ಮೂಲಕ ಗರ್ಭಧರಿಸಲು ಅವಕಾಶ ಮಾಡಿಕೊಟ್ಟಿದೆ. ಇದು ದೈಹಿಕ ಸಂಬಂಧವಿಲ್ಲದೆಯೂ ಗರ್ಭಧಾರಣೆಯನ್ನು ಸಾಧ್ಯವಾಗಿಸುತ್ತದೆ. ಈ ಪ್ರಕ್ರಿಯೆಗೆ ಪುರುಷನ ವೀರ್ಯ ಮಾತ್ರ ಬೇಕಾಗುತ್ತದೆ, ಆದರೆ ಇದಕ್ಕಾಗಿ ವೆಚ್ಚಗಳನ್ನು ಸಹ ಭರಿಸುತ್ತದೆ.

ಈ ಪ್ರಕ್ರಿಯೆಯ ವೆಚ್ಚವನ್ನು ಮಹಿಳೆಯೇ ಭರಿಸಬೇಕೆಂದು ನ್ಯಾಯಾಲಯವು ನಿರ್ದೇಶಿಸಿದೆ ಮತ್ತು ಮಹಿಳೆ ಅದಕ್ಕೆ ಒಪ್ಪಿಕೊಂಡಿದ್ದಾರೆ. ಆ ಮಹಿಳೆ ತನ್ನ ಮೊದಲ ಮಗುವಿಗೆ ಸಹೋದರ ಅಥವಾ ಸಹೋದರಿಯ ಸಂತೋಷವನ್ನು ನೀಡಲು ಬಯಸುವುದಾಗಿ ಮತ್ತು ಇದಕ್ಕಾಗಿ ಎರಡನೇ ಮಗುವನ್ನು ತಾನೇ ಬೆಳೆಸುವುದಾಗಿ ಹೇಳುತ್ತಾಳೆ. ವಿಚ್ಛೇದನಕ್ಕೆ ಮುಂಚಿತವಾಗಿ, ಮಹಿಳೆಗೆ ಇಬ್ಬರು ಮಕ್ಕಳನ್ನು ಬೇಡುವ ಹಕ್ಕಿದೆ ಎಂಬ ಅಂಶ ಗಮನಿಸಿ ಮತ್ತು, ಇದನ್ನು ಗಮನದಲ್ಲಿಟ್ಟುಕೊಂಡು ನ್ಯಾಯಾಧೀಶರು ಈ ತೀರ್ಪು ನೀಡಿದ್ದಾರೆ. ಇದರ ನಂತರವೇ ಇಬ್ಬರೂ ವಿಚ್ಛೇದನ ಪಡೆಯುತ್ತಾರೆ.

● ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸುವ ಉದ್ದೇಶದಿಂದ ಇಬ್ಬರು ನಾಯಕರು ಮುಖಾಮುಖಿ

# ಒಂದೆಡೆ ರಷ್ಯಾದ ತೈಲ ಖರೀದಿಗೆ ವಿರೋಧ, ಇನ್ನೊಂದೆಡೆ ಪುಟಿನ್ ಭೇಟಿ

**ವಾಷಿಂಗ್ಟನ್:** ಅಧಿಕಾರಕ್ಕೆ ಬಂದ ದಿನದಿಂದ ಗೊಂದಲ ಮತ್ತು ವಿವಾದಕಾರೀ ನಿರ್ಧಾರದಿಂದಲೇ ಸುದ್ದಿಯಲ್ಲಿರುವ ಅಮೆರಿಕಾದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್ ನಲ್ಲಿ ಶಾಂತಿ ಸ್ಥಾಪನೆಗಾಗಿ, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರನ್ನು ಭೇಟಿಯಾಗಲಿದ್ದಾರೆ. ಆಗಸ್ಟ್ ಹದಿನೈದಕ್ಕೆ ಈ ಇಬ್ಬರು ಜಾಗತಿಕ ನಾಯಕರ ಭೇಟಿ ಅಲಾಸ್ಕದಲ್ಲಿ ನಿಗದಿಯಾಗಿದೆ.

ಉಕ್ರೇನ್‌ನಲ್ಲಿ ಸುಮಾರು ಮೂರುವರೆ ವರ್ಷಗಳಿಂದ ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸುವ ಉದ್ದೇಶದಿಂದ ಇಬ್ಬರು ನಾಯಕರು ಭೇಟಿಯಾಗಲಿದ್ದಾರೆ. ಈ ಭಾಗದಲ್ಲಿ ಶಾಂತಿ ನೆಲೆಸುವ ಒಳ್ಳೆಯ ಉದ್ದೇಶದಿಂದ, ವಿಶ್ವದ ಇಬ್ಬರು ಪ್ರಬಲ ನಾಯಕರು ಮುಖಾಮುಖಿಯಾಗಲಿದ್ದಾರೆ.

ಇದೇ, ಅಮೆರಿಕವು ಕೆಲವು ದಿನಗಳ ಹಿಂದೆ, ರಷ್ಯಾ ಜೊತೆಗಿನ ವಾಣಿಜ್ಯ ಸಂಬಂಧಕ್ಕಾಗಿ ಭಾರತಕ್ಕೆ ಹೆಚ್ಚುವರಿ ಸುಂಕವನ್ನು ಜಡಾಯಿಸಿದ್ದರು. ರಷ್ಯಾ ಮತ್ತು ಭಾರತದ ಆರ್ಥಿಕತೆ ಹಳಿ ತಪ್ಪಿ ಹೋಗಿದೆ ಎನ್ನುವ ದುರಂಹಕಾರದ ಹೇಳಿಕೆಯನ್ನೂ ಟ್ರಂಪ್ ನೀಡಿದ್ದರು. ಈಗ, ಅದೇ ರಷ್ಯಾ ಜೊತೆಗೆ ಮಾತುಕತೆಗೆ ಮುಂದಾಗಿದ್ದಾರೆ.

- ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಭೇಟಿಯಾಗಲಿರುವ ಡೊನಾಲ್ಡ್ ಟ್ರಂಪ್
- ಭಾರತ ರಷ್ಯಾದಿಂದ ತೈಲ ಖರೀದಿಸುತ್ತಿರುವುದಕ್ಕೆ ಡೊನಾಲ್ಡ್ ಟ್ರಂಪ್ ವಿರೋಧ
- ಮೊದಲ ಬಾರಿಗೆ ಟ್ರಂಪ್ - ವ್ಲಾಡಿಮಿರ್ ಪುಟಿನ್ ಭೇಟಿ, ಅಲಾಸ್ಕದಲ್ಲಿ

ಉಕ್ರೇನ್ ದೇಶದ ಹಲವು ಪ್ರದೇಶಗಳನ್ನು ರಷ್ಯಾ ಈಗಾಗಲೇ ವಶ ಪಡಿಸಿಕೊಂಡಿದೆ. ಯುದ್ಧವನ್ನು ನಿಲ್ಲಿಸಲು ಅಮೆರಿಕ ಸಾಧ್ಯವಾದ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿವೆ. ಕೆಲವು ಪ್ರದೇಶಗಳನ್ನು ಎರಡು ದೇಶ ವಿನಿಮಯ ಮಾಡಿಕೊಳ್ಳುವ ಮೂಲಕ, ಉಭಯ ದೇಶಗಳಿಗೂ ಅನುಕೂಲವಾಗುವ ಒಪ್ಪಂದ ಮಾಡಿಕೊಳ್ಳಲು ಪ್ರಯತ್ನ ನಡೆಯಲಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.



> ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಸೇರಿದಂತೆ ಹಲವು ದೇಶಗಳ ನಾಯಕರ ಜೊತೆಗಿನ ಮಾತುಕತೆಯ ನಂತರ, ಟ್ರಂಪ್ ಅವರು ಪುಟಿನ್ ಅವರನ್ನು ಭೇಟಿಯಾಗುತ್ತಿರುವ ವಿಚಾರವನ್ನು ಸಾಮಾಜಿಕ ಮಾಧ್ಯಮದ ಮೂಲಕ ಪ್ರಕಟಿಸಿದ್ದಾರೆ. ಎರಡು ದೇಶಗಳ ನಡುವಿನ ಸಂಘರ್ಷ ಕೊನೆಗಾಣಿಸಲು ಈ ಮಾತುಕತೆ ಫಲಪ್ರದವಾಗಬಹುದು.
> -ಡೊನಾಲ್ಡ್ ಟ್ರಂಪ್

> ಡೊನಾಲ್ಡ್ ಟ್ರಂಪ್ ಮತ್ತು ವ್ಲಾಡಿಮಿರ್ ಪುಟಿನ್ ಜೊತೆಗಿನ ನಿರ್ಣಾಯಕ ಮಾತುಕತಯ ವೇಳೆ, ಒಪ್ಪಂದಕ್ಕೆ ಬರುವ ಸಾಧ್ಯತೆಯಿದೆ. ಒಪ್ಪಂದದಲ್ಲಿ ಭೂಮಿಯನ್ನು ವಿನಿಮಯ ಮಾಡಿಕೊಳ್ಳುವ ಸಾಧ್ಯತೆಯಿದೆ ಎಂದು ವಿದೇಶಿ ಮಾಧ್ಯಮಗಳು ವರದಿ ಮಾಡಿವೆ. ರಷ್ಯಾದ ಮೇಲೆ ಒತ್ತಡವನ್ನು ಹಾಕಿದರೆ, ಕದನ ವಿರಾಮ ಏರ್ಪಡಲು ಸಾಧ್ಯ.
> -ವೊಲೊಡಿಮಿರ್ ಝೆಲೆನ್ಸ್ಕಿ

ಟ್ರಂಪ್ ನೀವ್ಯಾಕೆ ಹೀಗೆ?

ಸರಿಯಾದ ಒತ್ತಡವನ್ನು ಜಾಗತಿಕ ನಾಯಕರು ರಷ್ಯಾದ ಮೇಲೆ ಹಾಕಿದರೆ, ಪುಟಿನ್ ಕದನವಿರಾಮಕ್ಕೆ ಒಪ್ಪಿಕೊಳ್ಳುತ್ತಾರೆ. ಇಲ್ಲದಿದ್ದರೆ ಇದು ಬರೀ ಚರ್ಚೆಯಾಗಿಯೇ ಉಳಿದುಕೊಳ್ಳಲಿದೆ ಎಂದು ಉಕ್ರೇನ್ ದೇಶದ ಅಧ್ಯಕ್ಷ ವೊಲೊಡಿಮಿರ್ ಝುಲೆನ್ಸ್ಕಿ ಹೇಳಿದ್ದಾರೆ.

ಲುಹಾನ್ಸ್ಕ, ಡೊನೆಟ್ಸ್ಕ, ಝಪೋರಿಝಿಯಾ ಮತ್ತು ಖೆರ್ಸನ್ ಪ್ರದೇಶವನ್ನು ರಷ್ಯಾದ ಭಾಗವೆಂದು ಪುಟಿನ್ ಹೇಳಿಕೊಂಡಿದ್ದಾರೆ. 2014ರಲ್ಲಿ ಕ್ರಿಮಿಯಾ ಎನ್ನುವ ಪ್ರದೇಶವನ್ನು ರಷ್ಯಾ ತನ್ನ ವಶಕ್ಕೆ ಪಡೆದುಕೊಂಡಿತ್ತು. ಆದರೂ, ಈ ನಾಲ್ಕು ಪ್ರದೇಶಗಳಲ್ಲಿ ರಷ್ಯಾ ತನ್ನ ಸಂಪೂರ್ಣ ಹಿಡಿತವನ್ನು ಇನ್ನೂ ಸಾಧಿಸಿಲ್ಲ. ಉಕ್ರೇನ್ ಅಧ್ಯಕ್ಷರಿಗೆ ರಾಜಕೀಯವಾಗಿ ಸವಾಲಾಗಿರುವ ಸದ್ಯದ ಪರಿಸ್ಥಿತಿಯಲ್ಲಿ ಯಾವ ತ್ಯಾಗಕ್ಕೆ ಝೆಲೆನ್ಸ್ಕಿ ಮುಂದಾಗಲಿದ್ದಾರೆ ಎನ್ನುವುದನ್ನು ಕಾದು ನೋಡಬೇಕಿದೆ.

ಉಕ್ರೇನ್ ತನ್ನ ಭಾಗವನ್ನು ಕಳೆದುಕೊಳ್ಳಲು ಸಿದ್ದವಿಲ್ಲ ಎಂದಿರುವ ಅಧ್ಯಕ್ಷರು, ಪರಿಸ್ಥಿತಿ ತಿಳಿಯಾಗಲು ಕೆಲವೊಂದು ತ್ಯಾಗಕ್ಕೂ ಸಿದ್ದರಾಗಬೇಕು ಎಂದು ಹೇಳಿದ್ದಾರೆ. ಟ್ರಂಪ್ ಅವರ ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಈಗಾಗಲೇ ಮೂರು ತಾಸು, ರಷ್ಯಾದ ಅಧ್ಯಕ್ಷರ ಜೊತೆ ಮಾತುಕತೆಯನ್ನು ನಡೆಸಿದ್ದಾರೆ.

## ಮೇಘಸ್ಫೋಟ ದುರಂತ: 729 ಮಂದಿ ಸ್ಥಳಾಂತರ

**ಉತ್ತರಕಾಶಿ:** ಉತ್ತರಾಖಂಡದ ಉತ್ತರಕಾಶಿಯಲ್ಲಿ ಈ ವಾರದ ಆರಂಭದಲ್ಲಿ ಸಂಭವಿಸಿದ ಹಠಾತ್ ಪ್ರವಾಹ ಮತ್ತು ಭೂಕುಸಿತದ ನಂತರ ಅನೇಕ ಪ್ರಾಣಗಳನ್ನು ಬಲಿ ತೆಗೆದುಕೊಂಡು ನಂತರ ಪ್ರವಾಹದಲ್ಲಿ ಸಿಲುಕೊಂಡಿರುವ ಜನರನ್ನು ಸ್ಥಳಾಂತರ ಮಾಡಲು ನಾಲ್ಕು ಹೆಲಿಕಾಪ್ಟರ್‌ಗಳನ್ನು ಸೇವೆಗೆ ಬಳಸಲಾಗಿದೆ. ವಿಪತ್ತು ಪೀಡಿತ ಧರಾಲಿ ಪ್ರದೇಶದ ಭಾಗಗಳಿಂದ 729 ಜನರನ್ನು ಸ್ಥಳಾಂತರಿಸಲಾಗಿದೆ. ಮಂಗಳವಾರ ಮಣ್ಣಿನ ಕುಸಿತ ಮತ್ತು ಹಠಾತ್ ಪ್ರವಾಹದ ನಂತರ ಇನ್ನೂ ಸಂಪರ್ಕ ಕಡಿತಗೊಂಡಿವೆ.

ದುರಂತದ ನಂತರ ನಾಲ್ಕು ಸಾವುಗಳು ಮತ್ತು 49 ಜನರು ನಾಪತ್ತೆಯಾಗಿದ್ದಾರೆ ಎಂದು ಜಿಲ್ಲಾಡಳಿತ ದೃಢಪಡಿಸಿದೆ. ಉತ್ತರಾಖಂಡ ನಾಗರಿಕ ವಿಮಾನಯಾನ ಪ್ರಾಧಿಕಾರದ ನಾಲ್ಕು ಹೆಲಿಕಾಪ್ಟರ್ಗಳು ಜಿಲ್ಲೆಯ ವಿವಿಧ ಸ್ಥಳಗಳಲ್ಲಿ ಆಶ್ರಯ ಪಡೆದಿರುವ ಜನರನ್ನು ರಕ್ಷಿಸಲು ರಕ್ಷಣಾ ಕಾರ್ಯಾಚರಣೆಯ ಐದನೇ ದಿನದಲ್ಲಿ ಕಾರ್ಯಾಚರಣೆಯನ್ನು ಪ್ರಾರಂಭಿಸಿವೆ. ಶನಿವಾರ ಬೆಳಗ್ಗೆ ಜಾಲಿಗ್ರಾಂಟ್ ವಿಮಾನ ನಿಲ್ದಾಣದಿಂದ ಚಿನೂಕ್ ಹೆಲಿಕಾಪ್ಟರ್ ಜನರೇಟರ್ ಸೆಟ್ ಅನ್ನು ಪರಿಹಾರ ಶಿಬಿರಕ್ಕೆ ಸಾಗಿಸಿದೆ. ದಿಢೀರ್ ಪ್ರವಾಹದಿಂದ ಧಾರಾಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಪೂರೈಕೆಗೆ ತೀವ್ರ ತೊಂದರೆಯಾಗಿದೆ. ಪೀಡಿತ ಪ್ರದೇಶಗಳಿಗೆ ರಸ್ತೆ ಸಂಪರ್ಕವನ್ನು ಸುಧಾರಿಸಲು ಯುದ್ಧದ ಆಧಾರದ ಮೇಲೆ ಗಂಗ್ನಾನಿ ಬಳಿಯ ಲಿಮ್ಚಿಗಡದಲ್ಲಿ ಬೈಲಿ ಸೇತುವೆಯನ್ನು ನಿರ್ಮಿಸಲಾಗುತ್ತಿದೆ. ಅದರ ನಿರ್ಮಾಣದ ಕೆಲಸವು ರಾತ್ರಿಯಿಡೀ ನಡೆದಿದ್ದು, ಮುಂದಿನ 24 ಗಂಟೆಗಳಲ್ಲಿ ಅದು ಸಿದ್ಧವಾಗಲಿದೆ. ಗಂಗೋತ್ರಿ ಹೆದ್ದಾರಿಯು ಹಲವಾರು ಹಂತಗಳಲ್ಲಿ ನಿರ್ಬಂಧಿಸಲ್ಪಟ್ಟಿದೆ. ಧಾರಾಲಿಯಲ್ಲಿ ಪ್ರವಾಹದಿಂದ ನಾಶವಾದ ಪ್ರದೇಶದಲ್ಲಿ ಬಿದ್ದಿರುವ ಅವಶೇಷಗಳು ಕಾಣೆಯಾದವರನ್ನು ಹುಡುಕಲು ಅಗತ್ಯವಾದ ಸುಧಾರಿತ ಸಾಧನಗಳನ್ನು ಸಾಗಿಸುವ ಪ್ರಯತ್ನಗಳಿಗೆ ಅಡ್ಡಿಯುಂಟುಮಾಡುತ್ತಿದೆ.



## ಚೀನಾದಲ್ಲಿ ಪ್ರವಾಹಕ್ಕೆ ಸಿಲುಕಿ 10 ಜನ ಸಾವು, 33 ಮಂದಿ ನಾಪತ್ತೆ

**ಹ್ಯಾಂಗ್ಝೌ :** ಚೀನಾದ ವಾಯುವ್ಯ ಭಾಗದ ಯುಝಾಂಗ್ ಕೌಂಟಿಯಲ್ಲಿ ದಿಢೀರ್ ಪ್ರವಾಹ ಅಪ್ಪಳಿಸಿ 10 ಜನರು ಸಾವನ್ನಪ್ಪಿದ್ದಾರೆ ಮತ್ತು 33 ಜನರು ಕಾಣೆಯಾಗಿದ್ದಾರೆ ಎಂದು ಮಾಧ್ಯಮ ವರದಿ ಮಾಡಿದೆ. ಚೀನಾದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಲನ್ಝೌ ನಗರದ ಸಮೀಪವಿರುವ ಪರ್ವತ ಪ್ರದೇಶಗಳಲ್ಲಿ ದಿಢೀರ್ ಪ್ರವಾಹ ಮತ್ತು ಭೂಕುಸಿತ ಸಂಭವಿಸಿದೆ ಎನ್ನಲಾಗಿದೆ. ಕ್ಸಿಂಗ್ಲಾಂಗ್ ಪರ್ವತ ಪ್ರದೇಶದಲ್ಲಿ ಭಾರೀ ಮಳೆಯಿಂದಾಗಿ ವಿದ್ಯುತ್ ಮತ್ತು ದೂರಸಂಪರ್ಕ ಸೇವೆಗಳು ಸ್ಥಗಿತಗೊಂಡವು. ಇದರಿಂದಾಗಿ 4 ಹಳ್ಳಿಗಳಲ್ಲಿ 4,000ಕ್ಕೂ ಹೆಚ್ಚು ಜನರು ಸಿಲುಕಿಕೊಂಡರು.

ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ, ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಈ ಪ್ರದೇಶದಲ್ಲಿ ಸಂಪೂರ್ಣ ರಕ್ಷಣಾ ಮತ್ತು ಪ್ರವಾಹ ತಡೆಗಟ್ಟುವ ಪ್ರಯತ್ನಗಳನ್ನು ಚುರುಕುಗೊಳಿಸಲು ಆದೇಶಿಸಿದ್ದಾರೆ.

ಚೀನಾದ ಇತರ ಭಾಗಗಳು ಈ ದಶಕದಲ್ಲಿಯೇ ಅತಿ ಹೆಚ್ಚಿನ ಮಳೆಯನ್ನು ಎದುರಿಸುತ್ತಿರುವಾಗ ಗನ್ಸು ಪ್ರದೇಶದಲ್ಲಿ ನೈಸರ್ಗಿಕ ವಿಕೋಪ ಸಂಭವಿಸಿದೆ. 19ನೇ ಶತಮಾನದ ನಂತರದ ಆಗಸ್ಟ್‌ನಲ್ಲಿ ಬಿದ್ದ ಅತ್ಯಂತ ಕೆಟ್ಟ ಮಳೆ ಇದೆ ಎನ್ನಲಾಗಿದೆ.



ದಿಢೀರ್ ಪ್ರವಾಹ, ಭೂಕುಸಿತ

ಭಾರೀ ಪ್ರವಾಹದಿಂದಾಗಿ ರಸ್ತೆಗಳು ಹಾನಿಗೊಳಗಾಗಿವೆ, ಮರಗಳು ಉರುಳಿವೆ ಮತ್ತು ಕೆಲವು ಪ್ರದೇಶಗಳಲ್ಲಿ ಭೂಮಿಯೊಳಗಿನ ಕೇಬಲ್‌ಗಳು ಸಹ ತೆರೆದಿವೆ ಎಂದು ವರದಿಗಳು ತಿಳಿಸಿವೆ. ಭಾರೀ ಮಳೆಯಿಂದಾಗಿ ವಿಮಾನಗಳ ಸಂಚಾರಕ್ಕೆ ಅಡ್ಡಿಯಾಗಿದೆ. ಗುವಾಂಗ್‌ಝೌನ ಬೈಯುನ್ ವಿಮಾನ ನಿಲ್ದಾಣವು 360ಕ್ಕೂ ಹೆಚ್ಚು ವಿಮಾನಗಳನ್ನು ರದ್ದುಗೊಳಿಸಿದೆ. 300ಕ್ಕೂ ಹೆಚ್ಚು ವಿಮಾನಗಳ ಸೇವೆ ವಿಳಂಬವಾಗಿದೆ. ನಿಂತಿರುವ ಪ್ರವಾಹದ ನೀರಿನಲ್ಲಿ ಸೊಳ್ಳೆಗಳ ಸಂತಾನೋತ್ಪತ್ತಿಯಿಂದ ಹರಡುವ ಚಿಕುನ್‌ಗುನ್ಯಾ ಪ್ರಕರಣಗಳ ಹೆಚ್ಚಳದ ಬಗ್ಗೆ ಆರೋಗ್ಯ ಅಧಿಕಾರಿಗಳು ಎಚ್ಚರಿಸಿದ್ದಾರೆ. ಈ ವರ್ಷ ಈ ಪ್ರಾಂತ್ಯದಲ್ಲಿ ಈಗಾಗಲೇ 7,000ಕ್ಕೂ ಹೆಚ್ಚು ಚಿಕುನ್‌ಗುನ್ಯಾ ಸೋಂಕು ಪತ್ತೆಯಾಗಿದೆ.

## ಪಿಎಂ ಇ-ಡ್ರೈವ್ ಯೋಜನಾ ಅವಧಿ 2 ವರ್ಷ ವಿಸ್ತರಣೆ : ಹೆಚ್‌ಡಿಕೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷಿಯ ಪಿಎಂ ಇ-ಡ್ರೈವ್ ಯೋಜನೆಯ ಅವಧಿಯನ್ನು 2 ವರ್ಷಗಳ ಕಾಲ ವಿಸ್ತರಿಸಲಾಗಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದ್ದಾರೆ. 2026ರ ಮಾರ್ಚ್ 31 ರಿಂದ 2028 ಮಾರ್ಚ್ 31ರವರೆಗೆ ಯೋಜನೆಯನ್ನು ವಿಸ್ತರಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

ನವೀನ ವಾಹನ ಸಂವರ್ಧನೆಯಲ್ಲಿ ಪಿಎಂ ಇ-ಡ್ರೈವ್ ಯೋಜನೆಯ ಅವಧಿಯನ್ನು ಎರಡು ವರ್ಷದಿಂದ ನಾಲ್ಕು ವರ್ಷಗಳಿಗೆ ವಿಸ್ತರಿಸಲಾಗಿದೆ. 2024ರ ಸೆಪ್ಟೆಂಬರ್ 29 ರಂದು ಎರಡು ವರ್ಷಗಳ ಅವಧಿಗೆ 10,900 ಕೋಟಿ ರೂ.ವೆಚ್ಚದೊಂದಿಗೆ ಈ ಯೋಜನೆಯ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಈಗ ಈ ಯೋಜನೆಯನ್ನು 2028ರವರೆಗೆ ವಿಸ್ತರಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಯೋಜನೆಯು ಎಲೆಕ್ಟ್ರಿಕ್ ವಾಹನಗಳ ಅಳವಡಿಕೆಯನ್ನು ವೇಗಗೊಳಿಸಲು ಬಲವಾದ ಚಾರ್ಜಿಂಗ್ ಮೂಲಸೌಕರ್ಯವನ್ನು ಸ್ಥಾಪಿಸಲು ಮತ್ತು ದೇಶದಲ್ಲಿ ಇವಿ ವಾಹನಗಳ ಉತ್ಪಾದನಾ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಉದ್ದೇಶಿಸಿದೆ. ಇ-ಟ್ರಕ್‌ಗಳು, ಇ-ಬಸ್ ಗಳು ಮತ್ತು ಪರೀಕ್ಷಾ ಏಜೆನ್ಸಿಗಳಿಗೆ, ಅವುಗಳ ನಿರ್ದಿಷ್ಟ ಸವಾಲುಗಳಿಂದಾಗಿ ಈ ವಿಸ್ತರಣೆಯ ಅಗತ್ಯವಿದೆ ಎಂದು ಸಚಿವರು ಹೇಳಿದ್ದಾರೆ. ಇ-ಟ್ರಕ್‌ಗಳ ಮಾರುಕಟ್ಟೆ ಆರಂಭಿಕ ಹಂತದಲ್ಲಿದ್ದು, ಈ ದೃಷ್ಟಿಯಿಂದ ಪೂರ್ಣ ಪ್ರಮಾಣದ ವಾಣಿಜ್ಯ ಉತ್ಪಾದನೆಗೆ ಇನ್ನೂ ಸ್ವಲ್ಪ ಸಮಯ ತೆಗೆದುಕೊಳ್ಳುವ ಸಾಧ್ಯತೆಯಿದೆ. ಅದೇ ರೀತಿ, 14,028 ಘಟಕಗಳನ್ನು ನಿಯೋಜಿಸಲು 4,391 ಕೋಟಿ ರೂ. ಹ'ಂಚಿಕೆ ಯಿಂದ ಬೆಂಬಲಿತವಾದ ಇ-ಬಸ್‌ಗಳಿಗೆ ಮಾರ್ಚ್ 2026 ರಿಂದ ಆಯ್ಕೆಯ ನಂತರದ ಪ್ರಕ್ರಿಯೆಯ ಅಗತ್ಯವಿದೆ. ಇದಲ್ಲದೆ, ಪರೀಕ್ಷಾ ಏಜೆನ್ಸಿ ಉಪಕರಣಗಳ ಖರೀದಿಗೆ ಈ ವಿಭಾಗಗಳಲ್ಲಿ ಗುಣಮಟ್ಟ ಮತ್ತು ಸುರಕ್ಷತಾ ಮಾನದಂಡಗಳನ್ನು ಕಾಪಾಡಿಕೊಳ್ಳಲು ಟೆಂಡರ್, ಮೌಲ್ಯಮಾಪನ, ಸಂಗ್ರಹಣೆ ಮತ್ತು ಕಾರ್ಯಾರಂಭಕ್ಕೆ ಹೆಚ್ಚಿನ ಸಮಯ ಬೇಕಾಗುತ್ತದೆ ಎಂದು ಸಚಿವರು ವಿವರಿಸಿದ್ದಾರೆ.



> ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತದಲ್ಲಿ ಇ-ಚಲನಶೀಲತೆಯನ್ನು ವೇಗಗೊಳಿಸುವತ್ತ ದೇಶವು ತ್ವರಿತಗತಿಯಲ್ಲಿ ಹೆಜ್ಜೆ ಇಡುತ್ತಿದೆ ಎಂದು ಸಚಿವ ಕುಮಾರಸ್ವಾಮಿ ಅವರು ತಿಳಿಸಿದ್ದು, ಪಿಎಂ ಇ-ಡ್ರೈವ್ ಯೋಜನೆಯು ತನ್ನ ಹಂತದ ಉತ್ಪಾದನಾ ಕಾರ್ಯಕ್ರಮದ ಮೂಲಕ ಮೇಕ್ ಇನ್ ಇಂಡಿಯಾವನ್ನು ಸಕ್ರಿಯಗೊಳಿಸುತ್ತದೆ -ಹೆಚ್‌ಡಿಕೆ

## ಬಸ್ ಉರುಳಿ 21 ಮಂದಿ ಸಾವು

**ಕೀನ್ಯಾ:** ಕೀನ್ಯಾದ ನೈಋತ್ಯ ಪ್ರದೇಶದಲ್ಲಿ ಭೀಕರ ರಸ್ತೆ ಅಪಘಾತದಲ್ಲಿ 21 ಜನರು ಸಾವನ್ನಪ್ಪಿದ್ದಾರೆ. ಅಂತ್ಯಕ್ರಿಯೆಯಿಂದ ಹಿಂತಿರುಗುತ್ತಿದ್ದ ಬಸ್ ಅತಿ ವೇಗದಲ್ಲಿ ಕಂದಕಕ್ಕೆ ಉರುಳಿಬಿದ್ದಿದ್ದು, ಮೃತರಲ್ಲಿ ಮಹಿಳೆಯರು ಮತ್ತು ಒಬ್ಬ ಬಾಲಕಿ ಸೇರಿದ್ದಾರೆ.

ಕೀನ್ಯಾದ ನೈಋತ್ಯ ಪ್ರದೇಶದಲ್ಲಿ ಬಸ್ ಕಾಕಮೆಗಾದಿಂದ ಕಿಸುಮುಗೆ ಹೋಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಬಸ್ ವೃತ್ತದ ಬಳಿ ಅತಿ ವೇಗದಲ್ಲಿ ಚಲಿಸುತ್ತಿತ್ತು ಮತ್ತು ಚಾಲಕನ ನಿಯಂತ್ರಣ ತಪ್ಪಿದ ಬಸ್ ನೇರವಾಗಿ ಆಳವಾದ ಕಂದಕಕ್ಕೆ ಬಿದ್ದು, ಸ್ಥಳದಲ್ಲೇ ಅನೇಕ ಜನರು ಸಾವನ್ನಪ್ಪಿದ್ದಾರೆ. ಬಸ್ಸಿನಲ್ಲಿದ್ದ ಎಲ್ಲಾ ಪ್ರಯಾಣಿಕರು ಅಂತ್ಯಕ್ರಿಯೆಯಿಂದ ಹಿಂತಿರುಗುತ್ತಿದ್ದರು. ಕಂದಕದಿಂದ ಶವಗಳನ್ನು ತೆಗೆದುಹಾಕಲು ರಕ್ಷಣಾ ಸಿಬ್ಬಂದಿ ಹೊರ ಸಾಹಸ ಪಡಬೇಕಾಯಿತ್ತು.ಸ್ಥಳದಲ್ಲಿ ಅವ್ಯವಸ್ಥೆ ಉಂಟಾಯಿತು. ಈ ಅಪಘಾತದಲ್ಲಿ 10 ಮಹಿಳೆಯರು, 10 ಪುರುಷರು ಮತ್ತು 10 ವರ್ಷದ ಬಾಲಕಿ ಸಾವನ್ನಪ್ಪಿದ್ದಾರೆ. ಬಸ್ ತೀವ್ರವಾಗಿ ಹಾನಿಗೊಳಗಾಗಿದ್ದು, ಅನೇಕ ಜನರು ಅದರೊಳಗೆ ಸಿಲುಕಿಕೊಂಡಿದ್ದಾರೆ ಎಂದು ಪೊಲೀಸ್ ಅಧಿಕಾರಿ ಪೀಟರ್ ಮೈನಾ ತಿಳಿಸಿದ್ದಾರೆ. ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಪೂರ್ವ ಆಫ್ರಿಕಾದ ಅನೇಕ ಭಾಗಗಳಲ್ಲಿನ ರಸ್ತೆಗಳು ಕಿರಿದಾದವು ಮತ್ತು ಗುಂಡಿಗಳಿಂದ ತುಂಬಿವೆ. ವೇಗದಿಂದ ಚಾಲನೆ ಮಾಡುವುದರಿಂದ ಈ ಅಪಾಯ ಹೆಚ್ಚಾಗುತ್ತದೆ. ಈ ಅಪಘಾತಕ್ಕೆ ನಿರ್ಲಕ್ಷ್ಯ ಮತ್ತು ಕಳಪೆ ರಸ್ತೆ ಪರಿಸ್ಥಿತಿಯೇ ಕಾರಣ ಎಂದು ಪೊಲೀಸರು ಆರೋಪಿಸಿದ್ದಾರೆ . ಅಪಘಾತಕ್ಕೆ ಒಂದು ದಿನ ಮೊದಲು, ನಕುರು ಕೌಂಟಿಯ ನೈವಾಶಾ ನಗರದಲ್ಲಿ ಬಸ್ ಪಲ್ಟಿಯಾಗಿ 9 ಜನರು ಸಾವನ್ನಪ್ಪಿದ್ದರು. ಆ ಬಸ್ 32 ಕಾರ್ಮಿಕರನ್ನು ಕೆಲಸಕ್ಕೆ ಕರೆದೊಯ್ಯುತ್ತಿತ್ತು. ನಿರಂತರ ಅಪಘಾತಗಳು ಜನರ ಕಳವಳವನ್ನು ಹೆಚ್ಚಿಸಿವೆ. ಪದೇ ಪದೇ ಸಂಭವಿಸುತ್ತಿರುವ ರಸ್ತೆ ಅಪಘಾತಗಳು ಜನರಲ್ಲಿ ಕೋಪ ಮತ್ತು ಭಯ ಎರಡನ್ನೂ ಉಂಟುಮಾಡಿವೆ.



# ಕನಿಷ್ಠ ಬ್ಯಾಲೆನ್ಸ್ 50,000 ರೂ.ಗೆ ಏರಿಕೆ, ಗ್ರಾಹಕರನ್ನು ಬೆಚ್ಚಿ ಬೀಳಿಸಿದ ದೈತ್ಯ ಖಾಸಗಿ ಬ್ಯಾಂಕ್

ದೇಶದ ಎರಡನೇ ಅತಿ ದೊಡ್ಡ ಖಾಸಗಿ ಬ್ಯಾಂಕ್ ಆಗಿರುವ ಐಸಿಐಸಿಐ ಬ್ಯಾಂಕ್, ಮೆಟ್ರೋ ಮತ್ತು ನಗರ ಪ್ರದೇಶಗಳಲ್ಲಿ ನಿಯಮಿತ ಉಳಿತಾಯ ಖಾತೆಗಳಿಗೆ ಕನಿಷ್ಠ ಮಾಸಿಕ ಸರಾಸರಿ ಬ್ಯಾಲೆನ್ಸ್ (ಎಂಬಿಎ) ಅನ್ನು 50,000 ರೂ.ಗೆ ಹೆಚ್ಚಿಸಿದೆ. ಈ ಮೂಲಕ ತನ್ನ ಗ್ರಾಹಕರನ್ನು ಬೆಚ್ಚಿ ಬೀಳಿಸಿದೆ. ಈ ಹಿಂದೆ ಕನಿಷ್ಠ ಮಾಸಿಕ ಸರಾಸರಿ ಬ್ಯಾಲೆನ್ಸ್ 10,000 ರೂ. ಆಗಿತ್ತು. 2015ರಿಂದ ಇದೇ ಜಾರಿಯಲ್ಲಿತ್ತು. ಇದನ್ನೀಗ ಐದು ಪಟ್ಟು ಹೆಚ್ಚಿಸಿದೆ.

- ಮೆಟ್ರೋ, ನಗರ ಪ್ರದೇಶಗಳಲ್ಲಿ ಉಳಿತಾಯ ಖಾತೆಗಳಿಗೆ ಕನಿಷ್ಠ ಮಾಸಿಕ ಸರಾಸರಿ ಬ್ಯಾಲೆನ್ಸ್ ಅನ್ನು ಏರಿಕೆ ಮಾಡಿದೆ ಐಸಿಐಸಿಐ ಬ್ಯಾಂಕ್
- 10,000 ರೂ. ರಿಂದ 50,000 ರೂ.ಗೆ ಹೆಚ್ಚಿಸಿದೆ ದೇಶದ ಎರಡನೇ ಅತಿ ದೊಡ್ಡ ಖಾಸಗಿ ಬ್ಯಾಂಕ್ ಆಗಿರುವ ಐಸಿಐಸಿಐ ಬ್ಯಾಂಕ್
- ಸೇವಾ ಶುಲ್ಕಗಳನ್ನೂ ನವೀಕರಿಸಿದೆ ಬ್ಯಾಂಕ್, ಅರೆ ನಗರ ಪ್ರದೇಶಗಳಿಗೆ ಕನಿಷ್ಠ 25,000 ರೂ., ಗ್ರಾಮೀಣ ಖಾತೆಗಳಿಗೆ 10,000 ರೂ. ನಿಗದಿ

ಇದೇ ಆಗಸ್ಟ್ 1ರಿಂದಲೇ ಈ ಬದಲಾವಣೆ ಜಾರಿಗೆ ಬಂದಿದೆ. ಆಗಸ್ಟ್ 1ರ ನಂತರ ಹೊಸ ಖಾತೆ ತೆರೆದ ಹಾಗೂ ತೆರೆಯಲಿರುವ ಎಲ್ಲಾ ಗ್ರಾಹಕರಿಗೂ ಈ ನಿಯಮಗಳು ಅನ್ವಯವಾಗಲಿವೆ. ಬ್ಯಾಂಕ್‌ನಲ್ಲಿ ತೆರೆದಿರುವ ಸಂಬಳ ಖಾತೆಗಳ ಮೇಲೆ ಇದು ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಐಸಿಐಸಿಐ ಬ್ಯಾಂಕ್ ಹೇಳಿದೆ. ಸ್ಯಾಲರಿ ಅಕೌಂಟ್‌ಗಳಿಗೆ ಬ್ಯಾಂಕ್ ಪ್ರತ್ಯೇಕ ನಿಯಮ ಹೊಂದಿದೆ.

ಹಳೆಯ ಗ್ರಾಹಕರಿಗೆ 10,000 ರೂ.ಗಳ ಕನಿಷ್ಠ ಬ್ಯಾಲೆನ್ಸ್ ನಿಯಮವೇ ಮುಂದುವರಿಯಲಿದೆ ಎಂದು ಬ್ಯಾಂಕ್ ಇದೇ ವೇಳೆ ಸ್ಪಷ್ಟನೆ ನೀಡಿದೆ. ಹೆಚ್ಚಿನ ಮೌಲ್ಯದ ಗ್ರಾಹಕರನ್ನೇ ಐಸಿಐಸಿಐ ಬ್ಯಾಂಕ್ ಗುರಿಯಾಗಿಸಿಕೊಂಡಿದ್ದು, ಅವರನ್ನೇ ನೆಚ್ಚಿಕೊಳ್ಳಲು ನಿರ್ಧರಿಸಿರುವುದನ್ನು ಇದು ಸ್ಪಷ್ಟವಾಗಿ ತೋರಿಸುತ್ತದೆ.

ಕಡಿಮೆ ವಹಿವಾಟು ನಡೆಸುವ, ಸಣ್ಣಪುಟ್ಟ ಗ್ರಾಹಕರು ನಮಗೆ ಬೇಡ ಎಂಬ ಸಂದೇಶವನ್ನು ಈ ಮೂಲಕ ಬ್ಯಾಂಕ್ ನೀಡಿದೆ. ಹೀಗಿದ್ದೂ ಪಿಂಚಣಿದಾರರಿಗೆ ಈ ದಂಡದಿಂದ ವಿನಾಯಿತಿ ನೀಡಲಾಗಿದೆ ಎಂದು ಐಸಿಐಸಿಐ ಬ್ಯಾಂಕ್ ವಿವರ ನೀಡಿದೆ.

ವಹಿವಾಟಿಗೂ ಮಿತಿ

ಉಳಿತಾಯ ಖಾತೆದಾರರಿಗೆ ನಗದು ವಹಿವಾಟಿನ ಮೇಲೆಯೂ ಬ್ಯಾಂಕ್ ನಿರ್ಬಂಧ ಹೇರಿದೆ. ಗ್ರಾಹಕರು ಐಸಿಐಸಿಐ ಬ್ಯಾಂಕ್ ಶಾಖೆಗಳಲ್ಲಿ ತಿಂಗಳಿಗೆ 3 ಉಚಿತ ನಗದು ಠೇವಣಿ ಅಥವಾ ಹಿಂಪಡೆಯುವಿಕೆಗೆ ಅರ್ಹರಾಗಿರುತ್ತಾರೆ. ಅಷ್ಟೇ ಅಲ್ಲ ಠೇವಣಿ ಮತ್ತು ಹಿಂಪಡೆಯುವಿಕೆ ಎರಡರಲ್ಲೂ ತಿಂಗಳಿಗೆ ಗರಿಷ್ಠ 1 ಲಕ್ಷ ರೂ. ಮೊತ್ತದ ವಹಿವಾಟನ್ನಷ್ಟೇ ಮಾಡಬಹುದು. ಗ್ರಾಹಕರ ಮೂರು ವಹಿವಾಟು ಅಥವಾ 1 ಲಕ್ಷ ರೂ. ಮೌಲ್ಯದ ಮಿತಿಯನ್ನು ಮೀರಿದಲ್ಲಿ ಶುಲ್ಕಗಳು ಪ್ರಾರಂಭವಾಗುತ್ತವೆ. ಈ ಶುಲ್ಕಗಳು ಪ್ರತಿ ವಹಿವಾಟಿಗೆ 150 ರೂ. ಅಥವಾ 1,000 ರೂ. ವಹಿವಾಟಿಗೆ 3.50 ರೂ., ಇವುಗಳಲ್ಲಿ ಯಾವುದು ಹೆಚ್ಚೋ ಅದನ್ನು ಬ್ಯಾಂಕ್ ವಿಧಿಸುತ್ತದೆ. ಒಂದೊಮ್ಮೆ ಮೊತ್ತ ಹಾಗೂ ವಹಿವಾಟಿನ ಸಂಖ್ಯೆ ಎರಡನ್ನೂ ಮೀರಿದಲ್ಲಿ, ಅನ್ವಯವಾಗುವ ಎರಡು ಶುಲ್ಕಗಳಲ್ಲಿ ಹೆಚ್ಚಿನದು ಯಾವುದೋ ಅದನ್ನು ಬ್ಯಾಂಕ್ ಅನ್ವಯಿಸುತ್ತದೆ. ಇದಲ್ಲ ಅಲ್ಲದೆ ಖಾತೆದಾರರು ಅಲ್ಲದವರ ವಹಿವಾಟುಗಳಿಗೂ ಐಸಿಐಸಿಐ ಮಿತಿ ಹೇರಿದೆ. ಮೂರನೇ ವ್ಯಕ್ತಿಯ ನಗದು ಠೇವಣಿ ಮತ್ತು ಹಿಂಪಡೆಯುವಿಕೆಗಳಿಗೆ ಎಲ್ಲಾ ಉಳಿತಾಯ ಖಾತೆಗಳಿಗೆ ಪ್ರತಿ ವಹಿವಾಟಿಗೆ 25,000 ರೂ.ಗಳಿಗೆ ಮಿತಿಯನ್ನು ವಿಧಿಸಿದೆ.




ಸೇವಾ ಶುಲ್ಕಗಳೂ ಏರಿಕೆ

ಆಗಸ್ಟ್ 1 ರಿಂದ ಬ್ಯಾಂಕಿನ ಸೇವಾ ಶುಲ್ಕಗಳನ್ನೂ ನವೀಕರಿಸಲಾಗಿದೆ. ಇದರ ಪ್ರಕಾರ ಅರೆ ನಗರ ಪ್ರದೇಶಗಳಿಗೆ ಹೊಸ ಕನಿಷ್ಠ ಮಾಸಿಕ ಬ್ಯಾಲೆನ್ಸ್ 25,000 ರೂ. ಆಗಿದ್ದು, ಗ್ರಾಮೀಣ ಖಾತೆಗಳಿಗೆ 10,000 ಮಾಸಿಕ ಬ್ಯಾಲೆನ್ಸ್ ಅನ್ನು ಕಾಯ್ದುಕೊಳ್ಳಲೇಬೇಕಿದೆ.

